


ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 350, ಪುಟಗಳು: 8, ಶುಕ್ರವಾರ, 27 ಸೆಪ್ಟೆಂಬರ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3


### ಸುಭಾಷಿತ

ಬದುಕು ನಾವು ಎಣಿಸಿದಂತಿರಲ್ಲ. ಬಂದಿದ್ದ ಎದುರಿಸಿ ಮುನ್ನುಗ್ಗುತ್ತಿರಬೇಕು.

### ಪಂಚಾಂಗ

(ಶುಕ್ರವಾರ 27, ಸೆಪ್ಟೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ವರ್ಷ ಋತು,
- ಭಾದ್ರಪದ ಮಾಸ, ಕೃಷ್ಣ ಪಕ್ಷ,
- ದಶಮಿ / ಏಕಾದಶಿ
- ಶುಕ್ರವಾರ, ಪುಷ್ಯ ನಕ್ಷತ್ರ
- ರಾಹುಕಾಲ: 10:43 ರಿಂದ 12:14
- ಗುಳಿಕಕಾಲ: 07:42 ರಿಂದ 09:13
- ಯಮಗಂಡಕಾಲ: 03:15 ರಿಂದ 04:45





ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines


# ಸಿದ್ದರಾಮಯ್ಯ ಕಾಂಗ್ರೆಸ್‌ನ ಕೊನೆಯ ಮುಖ್ಯಮಂತ್ರಿ!

**ಹುಬ್ಬಳ್ಳಿ:** ಸಿದ್ದರಾಮಯ್ಯ ಕಾಂಗ್ರೆಸ್ ನ ಕೊನೆಯ ಮುಖ್ಯಮಂತ್ರಿ. ಈ ಕೂಡಲೇ ವಿಧಾನ ಸಭೆಯನ್ನು ವಿಸರ್ಜನೆ ಮಾಡಿ, ಸಿದ್ದರಾಮಯ್ಯ ನಂತರ ಯಾರು ಕಾಂಗ್ರೆಸ್ ನಿಂದ ಮುಖ್ಯಮಂತ್ರಿ ಆಗಲ್ಲ ಎಂದು ಮಾಜಿ ಸಚಿವ ಬಸನಗೌಡ ಪಾಟೀಲ ಯತ್ನಾಳ ಹೇಳಿಕೆ ನೀಡಿದ್ದಾರೆ. ಕಾಂಗ್ರೆಸ್ ನಲ್ಲಿ ಬಹಳ ಮಂದಿ ಸಿಎಂ ಪಾಳಿಯಲ್ಲಿದ್ದಾರೆ, ಗೋರಿಗೆ ಹೋಗುವವರೂ ಸಹ ಪಾಳೆ ಹಚ್ಚಿದ್ದಾರೆ ಎಂದರು.

ಅಧಿಕಾರದಲ್ಲಿ ಇದ್ದರೆ ತನಿಖೆ ಮೇಲೆ ಪ್ರಭಾವ

ಮುಡಾ ಹಗರಣವಾಗಿ ಹೈಕೋರ್ಟ್ ಆದೇಶ ಬಂದ ನಂತರ ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ಕೊಡೋದು ಸೂಕ್ತ. ಅವರು ಅಧಿಕಾರದಲ್ಲಿ ಇದ್ದರೆ ತನಿಖೆ ಮೇಲೆ ಪ್ರಭಾವ ಬೀರುವುದು ಖಚಿತ. ಹಿಂದೆ ವಿರೋಧ ಪಕ್ಷದಲ್ಲಿದ್ದಾಗ ಸಿದ್ದರಾಮಯ್ಯ ಏನು ಮಾತನಾಡಿದ್ದರೂ ನೆನಪಿಸಿಕೊಳ್ಳಲಿ. ಮುಖ್ಯಮಂತ್ರಿ ಹುದ್ದೆಯಲ್ಲಿದ್ದು ಯಾವುದೇ ತನಿಖೆ ಎದುರಿಸುವುದು ಸರಿಯಲ್ಲ ಎಂದರು.



**ತಲೆಯಲ್ಲಿ ಮೆದುಳಿದಿಯೋ ಅಥವಾ ಮಾಂಸ ತುಂಬಿದೆಯೋ:** ಹೈಕೋರ್ಟ್‌ನ ಆದೇಶವನ್ನು ಸಿದ್ದರಾಮಯ್ಯ ಪಾಲಿಸಬೇಕು. ಇನ್ನು ಸಚಿವ ಜಮೀರ್ ಅಹಮದ್ ಅವರು ರಾಜಕೀಯ ತೀರ್ಪು ಅಂತ ಹೇಳಿದ್ದಾರೆ. ಅವರ ತಲೆಯಲ್ಲಿ ಮೆದುಳಿದಿಯೋ ಅಥವಾ ಮಾಂಸ ತುಂಬಿದೆಯೋ ಗೊತ್ತಿಲ್ಲ. ಅವರು ಹೈಕೋರ್ಟ್ ತೀರ್ಪಿನ ಬಗ್ಗೆ ಅಪಮಾನಕಾರಿಯಾಗಿ ಮಾತನಾಡಿದ್ದಾರೆ. ಇಂಥವರ ಮೇಲೆ ನ್ಯಾಯಾಂಗ ನಿಂದನೇ ದೂರು ದಾಖಲಾಗಬೇಕು. ಇಂತಹ ಉದ್ಧಟತನದಿಂದ ಮಾತನಾಡುವವರ ಮೇಲೆ ಕ್ರಮ ಕೈಗೊಳ್ಳಬೇಕು ಎಂದರು.

ಕಾಂಗ್ರೆಸ್ ಮತ್ತು ಬಿಜೆಪಿ ನಾಯಕರು ಹೊಂದಾಣಿಕೆ ಮಾಡಿಕೊಂಡಿದ್ದಾರೆ

ಸಿದ್ದರಾಮಯ್ಯನವರೇ ಮೊದಲು ನಿಮ್ಮ ಅಡ್ಜಸ್ಟ್‌ಮೆಂಟ್ ರಾಜಕಾರಣದ ಬಗ್ಗೆ ಹೇಳಿ. ಕಾಂಗ್ರೆಸ್ ಮತ್ತು ಬಿಜೆಪಿ ನಾಯಕರು ಹೊಂದಾಣಿಕೆ ಮಾಡಿಕೊಂಡಿದ್ದಾರೆ, ನಾವು ಭಿಕ್ಷೆ ಕೊಟ್ಟಿದ್ದೇವೆ, ಧರ್ಮಕ್ಕೆ ಕೊಟ್ಟಿದ್ದೇವೆ ಅಂತ ನೀವು ಹೇಳಿಕೊಳ್ಳುತ್ತಿದ್ದೀರಿ. ಯಾವ ಕ್ಷೇತ್ರವನ್ನು ಬಿಜೆಪಿ ಅವರಿಗೆ ಭಿಕ್ಷೆ ಕೊಟ್ಟಿದ್ದೀರಿ ಬಹಿರಂಗಪಡಿಸಿ. ಯಾರು ಭಿಕ್ಷೆ ಕೊಟ್ರು, ಯಾರು ತೆಗೆದುಕೊಂಡ್ರು ಅಂತ ಬಹಿರಂಗಪಡಿಸಲಿ ಎಂದು ಆಗ್ರಹಿಸಿದರು.

**ಜೈಲಿಗೆ ಹೋದರೆ ಹೊಸ ರಾಜಕೀಯ ಯುಗ:** ಭ್ರಷ್ಟಾಚಾರಿಗಳೆಲ್ಲ ಜೈಲು ಸೇರಲಿ. ಭ್ರಷ್ಟರೆಲ್ಲ ಜೈಲಿಗೆ ಹೋದರೆ ಹೊಸ ರಾಜಕೀಯ ಯುಗ ಆರಂಭಗೊಳ್ಳುತ್ತೆ. ಬೆಂಗಳೂರು ಸೇರಿ ರಾಜ್ಯದ ಎಲ್ಲ ಕಡೆಯೂ ಬಿಜೆಪಿಯಲ್ಲಿ ಶುದ್ಧಿಕರಣ ನಡೆಯಬೇಕಿದೆ. ಇದೇ ವಿಚಾರವಾಗಿ ಕುಮಾರ್ ಬಂಗಾರಪ್ಪ ಹಾಗೂ ಮತ್ತಿತರರ ಹಲವು ಸಮಾನ ಮನಸ್ಕರು ಸಭೆಯನ್ನು ಮಾಡಿದ್ದೇವೆ. ಹೊಂದಾಣಿಕೆ ರಾಜಕಾರಣದಿಂದಲೇ ರಾಜ್ಯಕ್ಕೆ ಇಂತಹ ದುಸ್ಥಿತಿ ಬಂದಿದೆ. ಹೊಂದಾಣಿಕೆ ರಾಜಕಾರಣ ಹಿನ್ನೆಲೆಯಲ್ಲಿಯೇ ಇಷ್ಟೆಲ್ಲ ಪ್ರಕರಣ ಹೊರಬರುತ್ತಿದ್ದು,

ಪುಟ 2

## ಸಂಕ್ಷಿಪ್ತ ಸುದ್ದಿ

### ತಮಿಳುನಾಡಿನ ಒಂದೇ ಕುಟುಂಬದ ಐವರು ಕಾರಿನಲ್ಲಿ ಶವವಾಗಿ ಪತ್ತೆ



**ಚೆನ್ನೈ:** ತಮಿಳುನಾಡಿನ ಒಂದೇ ಕುಟುಂಬ ಐವರ ಶವ ಕಾರಿನಲ್ಲಿ ಪತ್ತೆಯಾಗಿದೆ. ಆರ್ಥಿಕ ಮುಗ್ಗಟ್ಟಿನಿಂದ ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ತಮಿಳುನಾಡಿನ ಪುದುಕೊಟ್ಟೈ ಜಿಲ್ಲೆಯಲ್ಲಿ ನಿಂತಿದ್ದ ಕಾರಿನಲ್ಲಿ ಶವ ಪತ್ತೆಯಾಗಿದೆ. ತಿರುಚ್ಚಿ-ಮದುರೈ ಹೆದ್ದಾರಿಯ ನವಸಮುತಿರಂನಲ್ಲಿ ನಿಲ್ಲಿಸಲಾಗಿದ್ದ ಕಾರನ್ನು ವಾಚ್‌ಮೆನ್ ಒಬ್ಬರು ಗಮನಿಸಿದ್ದಾರೆ. ಅವರು ವಾಹನದೊಳಗೆ ಸತ್ತಿರುವುದನ್ನು ಕಂಡು ಪೊಲೀಸರಿಗೆ ಎಚ್ಚರಿಕೆ ನೀಡಿದರು. ಮೃತರನ್ನು ಘಟನೆ ನಡೆದ ಸ್ಥಳದಿಂದ ಸುಮಾರು 200 ಕಿಮೀ ದೂರದಲ್ಲಿರುವ ಸೇಲಂನ ಮಣಿಗಂದನ್, ಅವರ ಪತ್ನಿ ನಿತ್ಯಾ ಮತ್ತು ಇತರ ಕುಟುಂಬ ಸದಸ್ಯರು ಎಂದು ಗುರುತಿಸಲಾಗಿದೆ.

ಪುಟ 2

### ಜಾಮೀನಿಗಾಗಿ ಕಾದ ದಾಸ



**ಬಳ್ಳಾರಿ:** ನಟ ದರ್ಶನ್ ಅವರು ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ಶಿಫ್ಟ್ ಆಗಿ ಒಂದು ತಿಂಗಳು ಕಳೆದಿದೆ. ಬೆಂಗಳೂರು ಕೇಂದ್ರ ಕಾರಗೃಹದಲ್ಲಿ ದರ್ಶನ್ ಹಾಯಾಗಿ ಇದ್ದರು. ಆದರೆ ಬಳ್ಳಾರಿ ಜೈಲಿನಲ್ಲಿ ಅವರಿಗೆ ಖುಷಿಯಿಂದ ಇರೋಕೆ ಸಾಧ್ಯವಾಗುತ್ತಿಲ್ಲ. ಅವರಿಗೆ ತೀವ್ರ ಬೆನ್ನು ನೋವು ಕಾಡುತ್ತಿದೆ. ಬಳ್ಳಾರಿ ಜೈಲಿಗೆ ದರ್ಶನ್ ಶಿಫ್ಟ್ ಆಗಿ ಒಂದು ತಿಂಗಳೇ ಕಳೆದಿದೆ. ಇಂದು (ಸೆಪ್ಟೆಂಬರ್ 27) ದರ್ಶನ್ ಅವರ ಜಾಮೀನು ಅರ್ಜಿ ವಿಚಾರಣೆ ನಡೆಯಲಿದೆ.

7 ಆರೋಪಿಗಳ ಜಾಮೀನು ಅರ್ಜಿ ವಿಚಾರಣೆ ನಡೆಯಲಿದೆ. ಪ್ರಕರಣದ ಎ1 ಪವಿತ್ರಾಗೌಡ, ಎ2 ದರ್ಶನ್, ಲಕ್ಷ್ಮಣ್, ನಾಗರಾಜ್, ವಿನಯ್, ರವಿಶಂಕರ್ ಹಾಗೂ ಪವನ್ ಜಾಮೀನು ಅರ್ಜಿ ವಿಚಾರಣೆ ನಡೆಯಲಿದೆ. ಇತ್ತೀಚೆಗಷ್ಟೇ ದರ್ಶನ್ ಅವರು ಬೇಲ್ ಸಲುವಾಗಿ ಅರ್ಜಿ ಸಲ್ಲಿಸಿದ್ದರು.

ಪುಟ 2

# ಸಿಬಿಐ ಡೈರೆಕ್ಟ್ ಎಂಟ್ರಿಗೆ ಬ್ರೇಕ್

## 'ರಕ್ಷಣಾತ್ಮಕ' ಆಟಕ್ಕಿಳಿದ ಸಿದ್ದರಾಮಯ್ಯ ಸರ್ಕಾರ!

**ಬೆಂಗಳೂರು:** ರಾಜ್ಯ ರಾಜಕೀಯದಲ್ಲಿ ಮುಡಾ ಹಗರಣ ಸಂಚಲನ ಮೂಡಿಸಿದೆ. ಸಿಎಂ ವಿರುದ್ಧ ಲೋಕಾಯುಕ್ತ ತನಿಖೆಗೆ ಕೋರ್ಟ್ ಆದೇಶ ನೀಡಿದೆ. ಅಲ್ಲದೇ, ಈ ಪ್ರಕರಣವನ್ನು ಸಿಬಿಐಗೆ ಒಪ್ಪಿಸಬೇಕು ಎಂದು ಬಿಜೆಪಿ, ಜೆಡಿಎಸ್ ನಾಯಕರು ಮುಗಿಬಿದ್ದಿದ್ದಾರೆ. ಈ ಹೊತ್ತಲ್ಲೇ ರಾಜ್ಯ ಸಚಿವ ಸಂಪುಟ ಮಹತ್ವದ ನಿರ್ಣಯವನ್ನು ತೆಗೆದುಕೊಂಡಿದೆ.

ರಾಜ್ಯದಲ್ಲಿ ಸಿಬಿಐಗೆ ಅಂಕುಶ ಹಾಕಿದೆ. ರಾಜ್ಯದಲ್ಲಿ ಸಿಬಿಐ ಮುಕ್ತ ತನಿಖೆ ನಡೆಸಲು ಇದ್ದ ಅನುಮತಿಯನ್ನು ಹಿಂಪಡೆದಿದೆ. ಕರ್ನಾಟಕದಲ್ಲಿ ಅಪರಾಧ ಪ್ರಕರಣಗಳನ್ನು ತನಿಖೆ ಮಾಡಲು ಸಿಬಿಐಗೆ ಮುಕ್ತ ಅವಕಾಶ ಇತ್ತು. ಭ್ರಷ್ಟಾಚಾರ ತಡೆ ಕಾಯ್ದೆ ಅಡಿ ಯಾರಾದರೂ ದೂರು ನೀಡಿದರೇ ಮುಕ್ತವಾಗಿ ಸಿಬಿಐ ತನಿಖೆ ನಡೆಸಬಹುದಿತ್ತು.. ಆದ್ರೆ, ಇದಕ್ಕೀಗ ಸರ್ಕಾರ ಬ್ರೇಕ್ ಹಾಕಿದೆ. 2005ರಲ್ಲಿ ಹೊರಡಿಸಿದ್ದ ಅಧಿಸೂಚನೆಯನ್ನೇ ರದ್ದು ಮಾಡಿದೆ. ಹೀಗಾಗಿ ಸಿಬಿಐ ಇನ್ಮುಂದೆ ಕರ್ನಾಟಕದಲ್ಲಿ ಯಾವುದೇ ಪ್ರಕರಣದ ತನಿಖೆ ನಡೆಸಲು ರಾಜ್ಯ ಸರ್ಕಾರದ ಲಿಖಿತ ಅನುಮತಿ ಪಡೆಯುವುದು ಅತ್ಯಗತ್ಯವಾಗಿದೆ.

ಸಿದ್ದರಾಮಯ್ಯ ಸರ್ಕಾರದ ನಡೆ ರಾಷ್ಟ್ರಮಟ್ಟದಲ್ಲಿ ಮತ್ತು ರಾಜಕೀಯವಾಗಿ ನಾನಾ ಚರ್ಚೆಗೆ ಎಡೆ ಮಾಡಿಕೊಟ್ಟಿದೆ. ರಾಜ್ಯ ಸರ್ಕಾರದ ನಿರ್ಧಾರವನ್ನು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಖಂಡಿಸಿದ್ದಾರೆ. ಅಂದ ಹಾಗೇ, ಮುಡಾ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಿ ಎಂದು ಕೋರಿ ದೂರುದಾರ ಸ್ನೇಹಮಯಿ ಕೃಷ್ಣ ಶುಕ್ರವಾರ ಹೈಕೋರ್ಟ್ ಮೊರೆ ಹೋಗಲು ತೀರ್ಮಾನಿಸಿದ್ದಾರೆ.




### ಯಾವ್ಯಾವ ರಾಜ್ಯದಲ್ಲಿ ಸಿಬಿಐಗೆ ಅಂಕುಶ?

- ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ
- ಜಾರ್ಖಂಡ್, ರಾಜಸ್ಥಾನ, ಛತ್ತೀಸ್‌ಘಡ
- ತೆಲಂಗಾಣ, ಮಿಜೋರಾಂ, ಮೇಘಾಲಯ
- ಪಂಜಾಬ್ ಮತ್ತು ಈಗ ಕರ್ನಾಟಕ

### ಸಿಬಿಐಗೆ ಅಂಕುಶ.. ಏಕೆ? ಸರ್ಕಾರದ ಪ್ರಕಾರ..

- ಮೋದಿ ಸರ್ಕಾರಕ್ಕೆ ಸಿಬಿಐ ಅಸ್ತ್ರ ಆಗಬಾರದು
- ಈ ಸಂಸ್ಥೆ ದುರ್ಬಳಕೆ ಆಗುವ ಬಗ್ಗೆ ಆತಂಕವಿದೆ
- ಪ್ರತಿಯೊಂದು ಪ್ರಕರಣದಲ್ಲೂ ಮೂಗುತೂರಿಸುವ ಭಯ
- ಕೇಂದ್ರ ಸರ್ಕಾರದ್ದು ಪಕ್ಷಪಾತ ಧೋರಣೆ
- ನಾವು ಶಿಫಾರಸು ಮಾಡಿದ ಕೇಸ್‌ಗಳಲ್ಲಿ ಚಾರ್ಜ್‌ಶೀಟ್ ಸಲ್ಲಿಸಿಲ್ಲ
- ಮುಡಾ ಪ್ರಕರಣಕ್ಕೂ ಇದಕ್ಕೂ ಸಂಬಂಧ ಇಲ್ಲ
- ಸಿಬಿಐ ತಪ್ಪು ಹಾದಿಗೆ ಹೊರಳುವುದನ್ನು ತಡೆಯಲು..

## ಸಿದ್ಧಾಪರಾದ ಸಾಬೀತಿಗೆ ಇನ್ನೊಂದೇ ಹೆಜ್ಜೆ ಬಾಕಿ

**ಬೆಂಗಳೂರು:** ಸಿಬಿಐ ರಾಜ್ಯ ಪ್ರವೇಶಕ್ಕೆ ರಾಜ್ಯ ಸರ್ಕಾರದಿಂದ ನಿರ್ಬಂಧ ಮಾಡಿರೋ ವಿಚಾರಕ್ಕೆ ಸರ್ಕಾರದ ನಡೆಗೆ ಕೇಂದ್ರ ಸಚಿವ ಕುಮಾರಸ್ವಾಮಿ ಕಿಡಿಕಾರಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಾಕಿ ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.



**ಟ್ವೀಟ್‌ನಲ್ಲಿ ಏನಿದೆ?:** ಶ್ರೀಮಾನ್ ಸಿದ್ದರಾಮಯ್ಯನವರೇ ನಿಮ್ಮ ಸಿದ್ವಿಲಾಸಕ್ಕೆ ಉಘೇಉಘೇ ಎನ್ನಲೇಬೇಕು. ಅಂದು ಹಗರಣಗಳಿಂದ ಪಾರಾಗಲು ಲೋಕಾಯುಕ್ತಕ್ಕೇ ಸಮಾಧಿ ಕಟ್ಟಿ ಎಸಿಬಿ ರಚನೆ ಮಾಡಿಕೊಂಡಿರಿ. ಇಂದು ಮುಡಾ ಹಗರಣದಿಂದ ಬಚಾವಾಗಲು ನಿಮಗೀಗ ಅದೇ ಲೋಕಾಯುಕ್ತವೇ ಗತಿ. Karma hit back ಎಂದರೇ ಇದೇ ಅಲ್ಲವೇ ಸಿದ್ದರಾಮಯ್ಯನವರೇ? ಎಂದು ಕಿಡಿಕಾರಿದ್ದಾರೆ.

ನಿಮ್ಮ ಗ್ರಹಚಾರಕ್ಕೆ ಎಸಿಬಿಯನ್ನೂ ಹೈಕೋರ್ಟ್ ಬರ್ಖಾಸ್ತು ಮಾಡಿಬಿಟ್ಟಿತು. ಈಗ ಲೋಕಾಯುಕ್ತವನ್ನೇ ಗುರಾಣಿ ಮಾಡಿಕೊಂಡು ಸಿಬಿಐ ರಾಜ್ಯ ಪ್ರವೇಶಕ್ಕೆ ಸಂಪುಟದಿಂದ ಬಾಗಿಲು ಬಂದ್ ಮಾಡಿಸಿದ್ದೀರಿ.

ಪುಟ 2

### ತಿರುಪತಿ ಲಡ್ಡು ಪ್ರಸಾದಕ್ಕೆ ಪ್ರಾಣಿಗಳ ಕೊಬ್ಬು ಬಳಕೆ ವಿವಾದ

## ಇಂದಿನಿಂದ ಟಿಟಿಡಿ ದೇವಾಲಯ ಪವಿತ್ರೋತ್ಸವ

**ಬೆಂಗಳೂರು:** ತಿರುಪತಿ ಲಡ್ಡು ಪ್ರಸಾದಕ್ಕೆ ಪ್ರಾಣಿಗಳ ಕೊಬ್ಬು ಮಿಶ್ರಣ ವಿವಾದಕ್ಕೆ ಸಂಬಂಧಿಸಿದಂತೆ ಟಿಟಿಡಿ ಅಧೀನದ ದೇವಾಲಯದಲ್ಲಿ ಮತ್ತೆ ಶುದ್ಧೀಕರಣ ಕಾರ್ಯ ನಡೆಯುತ್ತಿದೆ. ಇಂದಿನಿಂದ ನಾಲ್ಕು ದಿನ ತಿರುಪತಿ ದೇವಾಲಯದ ಪವಿತ್ರೋತ್ಸವ ನಡೆಯುತ್ತಿದೆ.

ತಿರುಪತಿ ತಿರುಮಲ ದೇವಸ್ಥಾನಂ (ಟಿಟಿಡಿ) ದೇಗುಲದ ಪಾವಿತ್ರ್ಯತೆಗೆ ಧಕ್ಕೆಯಾದ ಹಿನ್ನೆಲೆಯಲ್ಲಿ ಇಂದಿನಿಂದ ಸೋಮವಾರದವರೆಗೆ, ಪ್ರತಿ ದಿನ ಸಂಜೆ 6:30 ರ ಹೊತ್ತಿಗೆ ಶುದ್ಧಿಕಾರ್ಯ ನಡೆಯಲಿದೆ. ವೈಯಾಲಿಕಾವಲ್‌ನಲ್ಲಿರುವ ಟಿಟಿಡಿ ದೇವಾಲಯದಲ್ಲಿ ಶುದ್ಧಿಕಾರ್ಯ ನಡೆಯಲಿದೆ.

ಮೊದಲ ದಿನ ಆಚಾರ್ಯವರನಮ್, ಎರಡನೇ ದಿನ ಹೋಮ, ಮೂರನೇ ದಿನ ಪವಿತ್ರ ಸಮರ್ಪಣ ಮತ್ತು ನಾಲ್ಕನೇ ದಿನ ಪವಿತ್ರೋತ್ಸವ ನಡೆಸಲಾಗುವುದು. ಈ ಕಾರ್ಯಕ್ರಮಗಳಿಗೆ ತಿರುಪತಿಯಿಂದ 10 ಅರ್ಚಕರು ಬೆಂಗಳೂರಿಗೆ ಆಗಮಿಸಲಿದ್ದಾರೆ.

ಪುಟ 2




### ನಾಗಸಂದ್ರ-ಮಾದವಾರ ನಡುವಿನ ಮೆಟ್ರೋ ಸಂಚಾರ

## ಶೀಘ್ರದಲ್ಲೇ ಆರಂಭ

**ಬೆಂಗಳೂರು:** ಬೆಂಗಳೂರು ಜನತೆಯ ಬಹು ನಿರೀಕ್ಷಿತ ನಾಗಸಂದ್ರದಿಂದ ಮಾದಾವರವರೆಗಿನ ನಮ್ಮ ಮೆಟ್ರೋ ರೈಲು ಸಂಚಾರ ಶೀಘ್ರದಲ್ಲೇ ಉದ್ಘಾಟನೆಗೊಳ್ಳಲಿದೆ. 3.7 ಕಿಮೀ ಅಂತರದ ನಾಗಸಂದ್ರ ಟು ಮಾದಾವರವರೆಗಿನ ಮೆಟ್ರೋ ಮಾರ್ಗ ಕಾಮಗಾರಿ ಪೂರ್ಣಗೊಂಡಿದೆ. ಮತ್ತು ಟ್ರಯಲ್ ರನ್ ಕೂಡ ಯಶಸ್ವಿಯಾಗಿದೆ.

ಇದೀಗ, ನಾಗಸಂದ್ರದಿಂದ ಮಾದಾವರವರೆಗಿನ ವಿಸ್ತರಿತ ಮಾರ್ಗವನ್ನು ರೈಲ್ವೆ ಸುರಕ್ಷತಾ ಆಯುಕ್ತರು ಅಕ್ಟೋಬರ್ 3 ಮತ್ತು 4ರಂದು ಪರಿಶೀಲನೆ ನಡೆಸಲಿದ್ದಾರೆ. ಆಯುಕ್ತರು ಪರಿಶೀಲನೆ ನಡೆಸಿ, ಸಂಚಾರಕ್ಕೆ ಅನುಮತಿ ನೀಡಿದ ಬಳಿಕ ಶೀಘ್ರವೇ ಲೋಕಾರ್ಪಣೆ ದಿನಾಂಕ ಘೋಷಣೆಯಾಗಲಿದೆ.



ಪುಟ 2

## ಮಹಿಷ ದಸರಾದಿಂದ ಮೈಸೂರು ಹೆಸರೇ ಚೇಂಜ್

## ಮೈಸೂರು ಅಲ್ಲ, 'ಮಹಿಷೂರು' ಅಂತಾ ಬದಲಾವಣೆ

**ಮೈಸೂರು:** ಮಹಿಷಾ ದಸರಾದಿಂದ ಮೈಸೂರು ಹೆಸರೇ ಬದಲಾಗಿದೆ. ಮಹಿಷ ದಸರಾ ಆಚರಣಾ ಸಮಿತಿ ಬಿಡುಗಡೆಗೊಳಿಸಿರುವ ಆಹ್ವಾನ ಪತ್ರಿಕೆಯಲ್ಲಿ ಮೈಸೂರು ಬದಲಿಗೆ ಮಹಿಷೂರು, ಚಾಮುಂಡಿಬೆಟ್ಟ ಬದಲಿಗೆ ಮಹಿಷಾ ಬೆಟ್ಟ ಎಂದು ಹೆಸರು ಮುದ್ರಿಸಿರುವುದು ಈಗ ತೀವ್ರ ವಿವಾದಕ್ಕೆ ಕಾರಣವಾಗಿದೆ.

ಇದೇ ತಿಂಗಳು 29 ರಂದು ಮಹಿಷಾ ದಸರಾ ನಡೆಸಲು ಸಮಿತಿ ಉದ್ದೇಶಿಸಿದೆ. ಚಾಮುಂಡಿ ಬೆಟ್ಟದಲ್ಲಿ ಮಹಿಷಾಸುರನಿಗೆ ಪುಷ್ಪಾರ್ಚನೆ ಮಾಡಿ ನಂತರ ಪುರಭವನದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಮಹಿಷಾ ದಸರಾ ಹೆಸರಿನಲ್ಲಿ ಈಗಾಗಲೇ ಸಂಘರ್ಷ ಶುರುವಾಗಿದೆ.

ಚಾಮುಂಡಿ ಬೆಟ್ಟದಲ್ಲಿ ಮಹಿಷ ದಸರಾ ಆಚರಣೆಗೆ ಮುಂದಾದರೆ ನಾವು ಚಾಮುಂಡಿ ಚಲೋ ಮಾಡುತ್ತೇವೆ. ಮಹಿಷನ ಭಕ್ತರ ಕೈ ಮೇಲಾಗುತ್ತದೋ ಚಾಮುಂಡಿಯ ಭಕ್ತರ ಕೈ ಮೇಲಾಗುತ್ತದೋ ನೋಡಿಯೇ ಬಿಡೋಣ ಎಂದು ಮಹಿಷ ದಸರಾ ಆಚರಣೆ ಸಮಿತಿಗೆ ಮಾಜಿ ಸಂಸದ ಪ್ರತಾಪ್ ಸಿಂಹ ಸವಾಲು ಹಾಕಿದ್ದಾರೆ.



## ರಾಜ್ಯದ 2 ಕಡೆಗಳಲ್ಲಿ ತುಪ್ಪ ಸೇಫ್ ಅಲ್ಲ

### ಆಹಾರ ಸುರಕ್ಷತಾ ಇಲಾಖೆ ಎಚ್ಚರಿಕೆ

**ಬೆಂಗಳೂರು:** ತಿರುಪತಿ ಲಡ್ಡು ತಯಾರಿಕೆಗೆ ಬಳಸಲಾದ ತುಪ್ಪ ಕಲಬೆರಕೆ ವಿವಾದ ಬೆಳಕಿಗೆ ಬರುವುದಕ್ಕೂ ಮುನ್ನವೇ ರಾಜ್ಯದಲ್ಲಿ ತುಪ್ಪ ಕಲಬೆರಕೆ ಆಗಿರುವುದು ಬೆಳಕಿಗೆ ಬಂದಿದೆ. ಆಹಾರ ಸುರಕ್ಷತಾ ಇಲಾಖೆ 40 ಕಡೆ ತುಪ್ಪ ಸಂಗ್ರಹ ಮಾಡಿ ಟೆಸ್ಟ್ ಮಾಡಿದಾಗ ರಾಜ್ಯದ 2 ಕಡೆ ತುಪ್ಪ ಕಲಬೆರಕೆ ಆಗಿರುವುದು ಬಯಲಾಗಿದೆ.



ಆಹಾರ ಮತ್ತು ಸುರಕ್ಷತಾ ಇಲಾಖೆ ಆಗಸ್ಟ್ ತಿಂಗಳಲ್ಲಿ ತುಪ್ಪವನ್ನ ಟೆಸ್ಟ್ ಮಾಡಿದೆ. ರಾಜ್ಯಾದ್ಯಂತ 40 ಕಡೆ ಮಾದರಿ ಸಂಗ್ರಹಿಸಿ, ಬೆಂಗಳೂರು ಮತ್ತು ಬಾಗಲಕೋಟೆಯಲ್ಲಿ ತುಪ್ಪ ಸೇಫ್ ಅಲ್ಲ ಎಂದು ವರದಿ ನೀಡಿದೆ.

ಎಲ್ಲಿಯ ತುಪ್ಪ ಸೇಫ್ ಅಲ್ಲ ಎಂಬ ವರದಿ ಬಂದಿರುವ ಕಡೆ ತುಪ್ಪ ತಯಾರಿಕಾ ಘಟಕಕ್ಕೆ ಆಹಾರ ಮತ್ತು ಸುರಕ್ಷತಾ ಇಲಾಖೆ ನೋಟಿಸ್ ನೀಡಿದೆ. 30 ದಿನಗಳ ಒಳಗೆ ತುಪ್ಪ ಅಸುರಕ್ಷತೆ ಅಲ್ಲ ಎಂದು ಸಾಬೀತುಪಡಿಸಿಕೊಳ್ಳಲು ಇಲಾಖೆ ಸೂಚಿಸಿದೆ. ಈ ಬಗ್ಗೆ ಮೈಸೂರಿನ ಲ್ಯಾಬ್‌ನಲ್ಲಿ ಖಚಿತತೆಯ ಪರೀಕ್ಷೆ ನಡೆಯುತ್ತಿದೆ.

ಪುಟ 2

### ಮಹಾಲಕ್ಷ್ಮಿ ಕೊಲೆ ಮಾಡಲು ಹಂತಕನಿಗೆ ಯಾರಾದ್ರು ಸಹಾಯ ಮಾಡಿದ್ರಾ?

## ತನಿಖೆಗೆ ಮುಂದಾದ ಪೊಲೀಸರು

**ಬೆಂಗಳೂರು:** ವೈಯಾಲಿಕಾವಲ್‌ನ ಮಹಾಲಕ್ಷ್ಮಿ ಭೀಕರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಬಂಧನಕ್ಕೆ ಒಡಿಶಾಗೆ ತೆರಳಿದ್ದ ರಾಜ್ಯದ ಪೊಲೀಸರ ತಂಡ ಬೆಂಗಳೂರಿಗೆ ಇಂದು ವಾಪಸ್ ಆಗಲಿದೆ. ಕೊಲೆ ಪ್ರಕರಣದಲ್ಲಿ ಸಾಕ್ಷ್ಯಗಳನ್ನು ಸಂಗ್ರಹಿಸುತ್ತಿರುವ ಪೊಲೀಸರು ಚಾರ್ಜ್‌ಶೀಟ್ ಸಿದ್ಧಪಡಿಸಲು ಮುಂದಾಗಿದೆ.

ಆರೋಪಿ ರಂಜನ್ ಬಗ್ಗೆ ಹಾಗೂ ಮರಣೋತ್ತರ ಪರೀಕ್ಷೆ ಬಗ್ಗೆ ಪ್ರಾಥಮಿಕವಾಗಿ ಪೊಲೀಸರು ಮಾಹಿತಿ ಪಡೆದುಕೊಂಡಿದ್ದಾರೆ. ನ್ಯಾಯಾಲಯದ ಅನುಮತಿ ಪಡೆದು ಆತನ ಮೊಬೈಲ್, ಫಿಂಗರ್ ಪ್ರಿಂಟ್, ಬ್ಲಡ್ ಸ್ಯಾಂಪಲ್ ಕೂಡ ಸಂಗ್ರಹ ಮಾಡಲಾಗಿದೆ.




ಪುಟ 2

# ಸಿದ್ದರಾಮಯ್ಯರನ್ನು ಗೆಲ್ಲಿಸಿದ್ದು ಕರ್ನಾಟಕದ ಜನರೇ ಹೊರತು, ಕೆ.ಸಿ ವೇಣುಗೋಪಾಲ್ ಅಲ್ಲ

**ಬೆಂಗಳೂರು:** 2018ರ ವಿಧಾನಸಭೆ ಚುನಾವಣೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ ವೇಣುಗೋಪಾಲ್ ಸಲಹೆಯಂತೆ ಚಾಮುಂಡೇಶ್ವರಿ ಮತ್ತು ಬಾದಮಿ ಕ್ಷೇತ್ರದಿಂದ ಸ್ಪರ್ಧಿಸಿದ್ದರಿಂದ ರಾಜಕೀಯವಾಗಿ ನಾನು ಗೆದ್ದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಸದ್ಯ ಈ ವಿಚಾರವಾಗಿ ಬಿಜೆಪಿ ರಾಜ್ಯಸಭಾ ಸದಸ್ಯ ಲೆಹರ್ ಸಿಂಗ್ ಪ್ರತಿಕ್ರಿಯಿಸಿದ್ದು, ಸಿದ್ದರಾಮಯ್ಯರನ್ನು ರಾಜಕೀಯವಾಗಿ ಗೆಲ್ಲಿಸಿದ್ದು ಕರ್ನಾಟಕದ ಜನರು ಹೊರತು ಕೆಸಿ ವೇಣುಗೋಪಾಲ್



ಅಲ್ಲ ಎಂದು ವಾಗ್ದಾಳಿ ಮಾಡಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಲೆಹರ್ ಸಿಂಗ್, ರೊಟ್ಟಿಯ ಯಾವ ಭಾಗಕ್ಕೆ ಬೆಣ್ಣೆ ಹಚ್ಚಲಾಗಿದೆ ಎಂಬುವುದು ಸಿಎಂ ಸಿದ್ದರಾಮಯ್ಯ ಅವರಿಗೆ ಗೊತ್ತಿದೆ. ರಾಜಕೀಯ ವೃತ್ತಿಯಿಂದ ತಮ್ಮನ್ನು ಬಚಾವ್ ಮಾಡಿದ್ದಕ್ಕೆ ಕೆ.ಸಿ.ವೇಣುಗೋಪಾಲ್ ಅವರನ್ನು ಸಿದ್ದರಾಮಯ್ಯ ಅವರು ಹಾಡಿಹೊಗಳಿದ್ದಲ್ಲದೇ ಧನ್ಯವಾದ ಕೂಡ ತಿಳಿಸಿರುವುದು ಸದ್ಯ ವರದಿಯಾಗಿದೆ.

ರಾಜಕೀಯವಾಗಿ ಯಾರಾದರೂ ತಮ್ಮ ವೃತ್ತಿಜೀವನದಲ್ಲಿ ಉಳಿದುಕೊಂಡಿದ್ದಾರೆ ಎಂದರೆ ಅದಕ್ಕೆ ಕರ್ನಾಟಕದ ಜನರು ಮಾತ್ರ ಕಾರಣ. ಸದ್ಯ ಸಿಎಂ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ತಮ್ಮ ಕುರ್ಚಿ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಕೆ.ಸಿ.ವೇಣುಗೋಪಾಲ್ ಮೂಲಕ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮೇಲೆ ಪ್ರಭಾವ ಬೀರಲು ಪ್ರಯತ್ನಿಸುತ್ತಿರುವುದು ಕಾಣುತ್ತಿದೆ ಎಂದು ಕಿಡಿಕಾರಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗಿಂತ ಕೆ.ಸಿ.ವೇಣುಗೋಪಾಲ್ ಅವರು ರಾಹುಲ್ ಗಾಂಧಿ ಮೇಲೆ ಹೆಚ್ಚಿನ ಪ್ರಭಾವ ಬೀರಿರುವುದಾಗಿ ಸ್ವತಃ ಕಾಂಗ್ರೆಸ್ಸಿಗರೇ ಹೇಳುತ್ತಾರೆ. ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ರಾಮಕೃಷ್ಣ ಹೆಗಡೆ ಅಂತವರಿಗೆ ತಮ್ಮ ರಾಜಕೀಯ ಜೀವನ ವಿಚಾರವಾಗಿ ಯಾವತ್ತೂ ಮನ್ನಣೆ ನೀಡದ ಸಿಎಂ ಸಿದ್ದರಾಮಯ್ಯ ಇಂದು ಕೆ.ಸಿ.ವೇಣುಗೋಪಾಲ್‌ರಿಗೆ ಧನ್ಯವಾದ ಹೇಳುತ್ತಿರುವುದು ಬೇಸರದ ಸಂಗತಿ. ಇದು ಕನ್ನಡಿಗರಿಗೆ ಮಾಡಿದ ಅವಮಾನವಲ್ಲದೇ ಬೇರೇನೂ ಅಲ್ಲ. 2018ರಲ್ಲಿ ಮೈಸೂರಿನ ಜನರಿಂದ ತಿರಸ್ಕೃತವಾಗುತ್ತಿರುವುದು ಕೆ.ಸಿ.ವೇಣುಗೋಪಾಲ್ ಅವರಿಗೆ ಗೊತ್ತಿತ್ತು ಎಂಬುವುದು ಸಿದ್ದರಾಮಯ್ಯ ಒಪ್ಪಿಕೊಂಡಿದ್ದಾರೆ ಎಂದಿದ್ದಾರೆ.

ಇದೀಗ ಮುಡಾ ಪ್ರಕರಣದಲ್ಲೂ ಮೈಸೂರಿನ ಜನತೆ ಸಿದ್ದರಾಮಯ್ಯ ಅವರನ್ನು ಮತ್ತೆ ತಿರಸ್ಕರಿಸಲಿದ್ದಾರೆ. ಅವರು ಎಷ್ಟು ಒತ್ತಡಕ್ಕೆ ಒಳಗಾಗಿದ್ದಾರೆಂದು ಅದು ನಮಗೆ ಗೊತ್ತಿದೆ. ಈಗಲೂ ತಡವಾಗಿಲ್ಲ, ಮುಡಾ ಪ್ರಕರಣದಲ್ಲಿ ರಾಜೀನಾಮೆ ನೀಡಿ ತನಿಖೆ ಎದುರಿಸಬೇಕು. ಹೈಕೋರ್ಟಿನ ತೀರ್ಪನ್ನು ಯಾರಾದರೂ ಓದಿದರೆ, ಅದು ಎಷ್ಟು ದೊಡ್ಡ ಹಗರಣ ಎಂಬ ಅನುಮಾನ ನೋಡುತ್ತದೆ ಎಂದು ಹೇಳಿದ್ದಾರೆ.

# ಕಾಂಗ್ರೆಸ್ ಸಿಎಂ ಬೆನ್ನಿಗೆ ನಿಂತಿದೆ, ರಾಜೀನಾಮೆ ನೀಡುವ ಅಗತ್ಯವಿಲ್ಲ

**ಬೆಂಗಳೂರು:** ಸಿಎಂ ರಾಜೀನಾಮೆ ನೀಡುವ ಅಗತ್ಯವಿಲ್ಲ. ಹಳ್ಳಿಯಿಂದ ದಿಲ್ಲಿಯವರೆಗೂ ಕಾಂಗ್ರೆಸ್ ಪಕ್ಷ ನಮ್ಮ ಮುಖ್ಯಮಂತ್ರಿಗಳ ಪರವಾಗಿ ನಿಲ್ಲಲಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಕಾಂಗ್ರೆಸ್ ನಾಯಕ ಹಾಗೂ ಮಾಜಿ ಸ್ಪೀಕರ್ ಕೋಳಿವಾಡ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಕೆಪಿಸಿಸಿ ಅಧ್ಯಕ್ಷ ನಾನು, ಅವರ ರಾಜೀನಾಮೆ ಪ್ರಶ್ನೆಯೇ ಉದ್ಭವ ಆಗುವುದಿಲ್ಲ ಎಂದು ಹೇಳಿದರು.



ನಮ್ಮ ಮುಖ್ಯಮಂತ್ರಿಗಳ ವಿರುದ್ಧ ಬಿಜೆಪಿ ಹಾಗೂ ಜೆಡಿಎಸ್‌ನವರು ರಾಜಕೀಯವಾಗಿ ಷಡ್ಯಂತ್ರ ರೂಪಿಸುತ್ತಿದ್ದು, ನಮ್ಮ ಗ್ಯಾರಂಟಿ ಯೋಜನೆಗಳು ಜನರನ್ನು ತಲುಪುತ್ತಿರುವುದು ವಿರೋಧ ಪಕ್ಷಗಳಿಂದ ಸಹಿಸಲು ಸಾಧ್ಯವಾಗುತ್ತಿಲ್ಲ ಎಂದರು.

ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿರುವ ದೊಡ್ಡ ರಾಜ್ಯ ಕರ್ನಾಟಕ. ಇಲ್ಲಿ ನಮ್ಮ ಸರ್ಕಾರ ಇರುವುದು ಅವರಿಂದ ಸಹಿಸಲು ಸಾಧ್ಯವಾಗುತ್ತಿಲ್ಲ. ಸಿಎಂ ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು.

ಸಿಎಂ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ಅವರ ಟೀಕೆ ಬಗ್ಗೆ ಕೇಳಿದಾಗ, ಪ್ರಧಾನಿ ನರೇಂದ್ರ ಮೋದಿ ಅವರು ಚುನಾವಣಾ ಪ್ರಚಾರದ ವೇಳೆ ಸಿಎಂ ಸಿದ್ದರಾಮಯ್ಯ ಅವರ ವಿಚಾರ ಪ್ರಸ್ತಾಪ ಮಾಡುತ್ತಿದ್ದು, ಈ ವಿಚಾರದಲ್ಲಿ ಅವರು ರಾಜಕಾರಣ ಮಾಡುತ್ತಿದ್ದಾರೆ. ಅವರ ಸರ್ಕಾರದ ಸಚಿವರುಗಳು ಅನೇಕ ಪ್ರಕರಣಗಳ ತನಿಖೆ ಎದುರಿಸುತ್ತಿದ್ದು, ಮೊದಲು ಅವರನ್ನು ಸಚಿವ ಸಂಪುಟದಿಂದ ಕೈಬಿಡಲಿ. ನಂತರ ಈ ಬಗ್ಗೆ ಚರ್ಚೆ ಮಾಡಲಿ ಎಂದು ಕಿಡಿಕಾರಿದ್ದಾರೆ.

## ವರ್ಕ್ ಫ್ರಂ ಹೋಂ ನಿಲ್ಲಿಸುವಂತೆ ಪಿಜಿ ಮಾಲೀಕರ ಆಗ್ರಹ

# ಸಿಲಿಕಾನ್ ಸಿಟಿಯಲ್ಲಿ ಪಿಜಿಗಳು ಖಾಲಿ-ಖಾಲಿ

**ಬೆಂಗಳೂರು:** ಕೋರಮಂಗಲದ ಪಿಜಿಗೆ ನುಗ್ಗಿ ಯುವಕನೊಬ್ಬ ಪಿಜಿಯಲ್ಲಿದ್ದ ಯುವತಿ ಹತ್ಯೆಗೈದ ಪ್ರಕರಣದ ಬೆನ್ನಲ್ಲೇ ಪಿಜಿಗಳು ಖಾಲಿಖಾಲಿಯಾಗಿವೆ. ಕೊಲೆ ಪ್ರಕರಣದ ನಂತರ ಪಿಜಿ ಸೇರುವವರ ಸಂಖ್ಯೆ ಕಡಿಮೆ ಆಗಿದೆ. ಮತ್ತೊಂದೆಡೆ ಕಂಪನಿಗಳು ವರ್ಕ್ ಫ್ರಮ್ ಹೋಮ್ ನೀಡಿರುವುದೂ ಸಹ ಬೆಂಗಳೂರಿನ ಪಿಜಿಗಳು ಖಾಲಿಯಾಗಿರಲು ಕಾರಣ. ಹೀಗಾಗಿ ವರ್ಕ್ ಫ್ರಮ್ ಹೋಮ್ ನಿಲ್ಲಿಸುವಂತೆ ಪಿಜಿ ಮಾಲೀಕರು ಆಗ್ರಹಿಸಿದ್ದಾರೆ.




ಹಲವು ಕಂಪನಿಗಳು ತಮ್ಮ ಸಿಬ್ಬಂದಿಗೆ ವರ್ಕ್ ಫ್ರಮ್ ಹೋಮ್, ಹೈಬ್ರಿಡ್ ಮೋಡ್ ನಲ್ಲಿ ಕೆಲಸ ಮಾಡಲು ಹೇಳಿರುವುದು ಬೆಂಗಳೂರಿನ ಪಿಜಿ ಮಾಲೀಕರಿಗೆ ತಲೆನೋವಾಗಿ ಪರಿಣಮಿಸಿದೆ. ಹೀಗಾಗಿ ವರ್ಕ್ ಫ್ರಮ್ ಹೋಮ್ ನಿಲ್ಲಿಸುವಂತೆ ಪಿಜಿ ವೆಲ್ಫೇರ್ ಅಸೋಸಿಯೇಶನ್ ಕಂಪನಿಗಳಿಗೆ ಮನವಿ ಮಾಡಿದೆ.

ಕೋರಮಂಗಲದ ಪಿಜಿಯಲ್ಲಿ ಕೊಲೆ ಪ್ರಕರಣದ ಬೆನ್ನಲ್ಲೇ ಪಿಜಿ ಸೇರುವವರ ಸಂಖ್ಯೆ ಕಡಿಮೆ ಆಗಿದೆ. ಇದರ ಜೊತೆ ವರ್ಕ್ ಫ್ರಮ್ ಹೋಮ್ ಸಹ ಇರುವುದರಿಂದ ಯಾರೂ ಪಿಜಿಗೆ ಬರುವುದೇ ಇಲ್ಲ. ಎಲ್ಲಾ ಸುರಕ್ಷತೆ ಕೊಟ್ಟರೂ ಬೆಂಗಳೂರಿನಲ್ಲಿ ಪಿಜಿಗಳು ಖಾಲಿ ಖಾಲಿ ಆಗಿವೆ.

**ಬಿಬಿಎಂಪಿ ರೂಲ್ಸ್:** ಮತ್ತೊಂದೆಡೆ ಸೇಫ್ಟಿ, ಮತ್ತೊಂದು, ಮಗದೊಂದು ಅಂತಾ ಬಿಬಿಎಂಪಿ ನೂರೊಂದು ಹೊಸ ರೂಲ್ಸ್ ಗಳನ್ನು ಮಾಡುತ್ತದೆ. ಎಲ್ಲಾ ಸುರಕ್ಷತೆಗಳನ್ನು ಕೊಟ್ರು ಪಿಜಿಗಳಿಗೆ ಜನರು ಬರುತ್ತಿಲ್ಲ. ವರ್ಕ್ ಫ್ರಮ್ ಹೋಮ್, ಹೈಬ್ರಿಡ್ ಮೋಡ್ ಇರುವುದರಿಂದ ಪಿಜಿ ಮಾಲೀಕರಿಗೆ ಕಷ್ಟವಾಗುತ್ತಿದೆ.

**ಒಂದು ದಿನ ಇರ್ತಾರೆ, ಎರಡನೇ ದಿನ ಇರಲ್ಲ:** ಕಂಪನಿಗಳು ಹೈಬ್ರಿಡ್ ಮೋಡ್, ವರ್ಕ್ ಫ್ರಮ್ ಹೋಮ್ ಸೌಲಭ್ಯ ನೀಡಿರುವುದರಿಂದ ಕೆಲವರು ಪಿಜಿಯಲ್ಲಿ ಕೆಲವೇ ದಿನಗಳಿಗೆ ಮಾತ್ರ ಬರುತ್ತಾರೆ. ಪಿಜಿಯಲ್ಲಿ ಇವತ್ತು ಇದ್ದರೆ, ನಾಳೆ ಇರುವುದಿಲ್ಲ. ಇದರಿಂದ ಪಿಜಿ ಮಾಲೀಕರಿಗೆ ಯಾವುದೇ ಲಾಭವಾಗುವುದಿಲ್ಲ.

**ಇರುವಷ್ಟೇ ದಿನದ ಪೇಮೆಂಟ್:** ಒಂದು ತಿಂಗಳಿನಲ್ಲಿ ಪಿಜಿಯಲ್ಲಿ ಎಷ್ಟು ದಿನ ಇರುತ್ತಾರೋ ಅಷ್ಟೇ ದಿನದ ಪೇಮೆಂಟ್ ಮಾಡುತ್ತಾರೆ. ತಿಂಗಳ ಲೆಕ್ಕದಲ್ಲಿ ಯಾರೂ ಪೇಮೆಂಟ್ ಮಾಡುವುದಿಲ್ಲ. ಹೀಗಾಗಿ ತಿಂಗಳಿಗೆ 15 ದಿನ ಪೇಮೆಂಟ್ ಮಾಡಿದ್ರೆ, ಉಳಿದ 15 ದಿನ ಪಿಜಿಗಳು ಖಾಲಿ ಖಾಲಿ ಇರುತ್ತೆ.

**ತಿಂಗಳ ಲೆಕ್ಕದಲ್ಲೇ ಬಿಲ್ ಕಟ್ಟಬೇಕು:** ಪಿಜಿ ಮಾಲೀಕರಿಗೆ ಪೇಮೆಂಟ್ ದಿನದ ಲೆಕ್ಕದಲ್ಲಿ ಆಗುತ್ತದೆ. ಆದರೆ ಪಿಜಿ ಮಾಲೀಕರು ಮಾತ್ರ ತಿಂಗಳ ಲೆಕ್ಕದಲ್ಲಿ ವೈಫೈ ಬಿಲ್, ಕರೆಂಟ್ ಬಿಲ್ ಗಳನ್ನು ಕಟ್ಟಬೇಕು. ಪಿಜಿ ಮಾಡಲು ಹಲವು ಕಡೆ ಕಟ್ಟಡ ಲೀಸ್ ಪಡೆದಿರುತ್ತೇವೆ ಅವರಿಗೂ ಕೂಡ ಹಣ ಕೊಡಬೇಕು. ಪ್ರತಿ ತಿಂಗಳು ಲಕ್ಷಾಂತರ ರೂಪಾಯಿಯನ್ನು ನಾವು ಕಟ್ಟಬೇಕಾಗುತ್ತದೆ. ಹೀಗಾದ್ರೆ ನಾವು ಬದುಕು ಸಾಗಿಸುವುದು ಹೇಗೆ ಎಂದು ಕೇಳುತ್ತಿದ್ದಾರೆ.

ಹೀಗಾಗಿ ವರ್ಕ್ ಫ್ರಮ್ ಹೋಮ್, ಹೈಬ್ರಿಡ್ ಮೋಡ್ ಸೌಲಭ್ಯವನ್ನು ನಿಲ್ಲಿಸಿ, ಸಿಬ್ಬಂದಿ ಕಚೇರಿಗೆ ಬಂದು ಕೆಲಸ ಮಾಡುವಂತೆ ಸೂಚಿಸಲು ಕಂಪನಿಗಳಿಗೆ ಪಿಜಿ ವೆಲ್ಫೇರ್ ಅಸೋಸಿಯೇಶನ್ ಮನವಿ ಮಾಡಿದೆ.

# ಮೈಸೂರು ದಸರಾಕ್ಕೆ ಭರ್ಜರಿ ಸಿದ್ಧತೆ

## ಗಜಪಡೆಯ ಎದುರು ಕುಶಾಲತೋಪು ಸಿಡಿಸಿ ತಾಲೀಮು

**ಮೈಸೂರು:** ಮೈಸೂರು ದಸರಾ ಎಷ್ಟೊಂದು ಸುಂದರ ಈ ಹಾಡು ಕೇಳುವುದಕ್ಕೆ ಎಷ್ಟು ಸುಂದರವೋ, ಅಲ್ಲಿನ ದಸರಾ ನೋಡುವುದೂ ಸಹ ಅಷ್ಟೇ ರೋಮಾಂಚಕ ಅನುಭವ ನೀಡುತ್ತದೆ. ಅದರಲ್ಲೂ ಮೈಸೂರಿನಲ್ಲಿ ನಡೆಯುವ ಜಂಬೂಸವಾರಿ ನೋಡಲೆಂದೇ ದೇಶ-ವಿದೇಶಗಳಿಂದ ಲಕ್ಷಾಂತರ ಜನರು ಆಗಮಿಸುತ್ತಾರೆ. ಹೀಗಾಗಿ ಜಂಬೂಸವಾರಿಗೆ ಪೂರ್ವಭಾವಿಯಾಗಿ ಗಜಪಡೆಯನ್ನು ಎಲ್ಲ ರೀತಿಯಲ್ಲೂ ಸನ್ನದ್ಧಗೊಳಿಸಲಾಗುತ್ತಿದೆ.

ಮೈಸೂರಿನಲ್ಲಿ ದಸರಾ ಆಚರಣೆಗೆ ಈಗಾಗಲೇ ಸಾಕಷ್ಟು ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಜೊತೆಗೆ ದಸರಾದ ಪ್ರಮುಖ ಆಕರ್ಷಣೆಯಾಗಿರುವ ಜಂಬೂ ಸವಾರಿಗೆ ಆನೆಗಳನ್ನು ಸಿದ್ಧಗೊಳಿಸಲಾಗುತ್ತಿದೆ. ಜಂಬೂಸವಾರಿಗೆ ಪೂರ್ವಭಾವಿಯಾಗಿ ಸೆಪ್ಟೆಂಬರ್ 26 ರಂದು ಗಜಪಡೆಗೆ ಕುಶಾಲತೋಪು ತಾಲೀಮು ನಡೆಯಲಿದೆ.

ಸೆಪ್ಟೆಂಬರ್ 26ರಂದು ಈ ಕಾರ್ಯಕ್ರಮ: ವಿಜಯದಶಮಿಯ ದಿನ ನಡೆಯುವ ಜಂಬೂ ಸವಾರಿಯಲ್ಲಿ ಕುಶಾಲತೋಪಿನ ಸದ್ದಿಗೆ ಆನೆಗಳು ಬೆದರದಂತೆ ನೋಡಿಕೊಳ್ಳಲು ಈಗಲೇ ಎಲ್ಲ ರೀತಿಯ ತರಬೇತಿ ನೀಡಲಾಗುತ್ತಿದೆ. ಗಜಪಡೆಗೆ ಸೆಪ್ಟೆಂಬರ್ 26ರಂದು ಪೂರ್ವಭಾವಿಯಾಗಿ ಕುಶಾಲತೋಪು ತಾಲೀಮು ನಡೆಯಲಿದೆ. ಗಜಪಡೆಯ ಎದುರು ಕುಶಾಲತೋಪು ಸಿಡಿಸುವ ಮೂಲಕ ಅವುಗಳಿಗೆ ಆ ಸದ್ದಿನ ಪರಿಚಯ ಮಾಡಿಸಲಾಗುತ್ತದೆ. ಗಜಪಡೆಯ ಜತೆಗೆ ಅಶ್ವಾರೋಹಿದಳಕ್ಕೂ ತಾಲೀಮು ನೀಡುವ ಸಾಧ್ಯತೆಯಿದೆ. ಮೈಸೂರಿನ ದಸರಾ ವಸ್ತು



ಪ್ರದರ್ಶನ ಪ್ರಾಧಿಕಾರದ ವಾಹನ ನಿಲುಗಡೆ ಸ್ಥಳದಲ್ಲಿ ಪೂರ್ವಭಾವಿ ತಾಲೀಮು ನಡೆಯಲಿದೆ.

**ಸಿಡಿಮದ್ದು ಸಿಡಿಸಿ ತಾಲೀಮು:** ಸೆಪ್ಟೆಂಬರ್ 29 ಹಾಗೂ ಅಕ್ಟೋಬರ್ 1 ರಂದು ದಸರಾ ಗಜಪಡೆಗೆ ಸಿಡಿಮದ್ದು ಸಿಡಿಸುವ ತಾಲೀಮು ನಡೆಯಲಿದೆ. ಈ ವೇಳೆ ಸಿಡಿಮದ್ದು ಸಿಡಿಸುವ ಮೂಲಕ ಆ ಸದ್ದಿಗೆ ಆನೆಗಳು ಬೆದರದಂತೆ ಅವುಗಳಿಗೆ ತರಬೇತಿ ನೀಡಲಾಗುತ್ತದೆ.

ಮತ್ತೊಂದೆಡೆ ಮೈಸೂರು ಜಿಲ್ಲಾಡಳಿತದ ವತಿಯಿಂದ ಬಿಡುಗಡೆಯಾಗಿರುವ ಯುವ ದಸರಾ ಪೋಸ್ಟರ್ ಜನರಲ್ಲಿ ಕುತೂಹಲ ಮೂಡಿಸುತ್ತಿದೆ. ಯುವ ದಸರಾದಲ್ಲಿ ವಿವಿಧ ಸೆಲೆಬ್ರಿಟಿಗಳನ್ನು ಆಹ್ವಾನಿಸಿ ಕಾರ್ಯಕ್ರಮ ಆಯೋಜಿಸಿರುವುದು ಎಲ್ಲರ ಗಮನ ಸೆಳೆಯುತ್ತಿದೆ.

**ಯುವ ದಸರಾಗೆ ತಾರೆಯರ ಮೆರುಗು:** ಮೈಸೂರಿನಲ್ಲಿ ಅಕ್ಟೋಬರ್ ಅಕ್ಟೋಬರ್ 6ರಿಂದ ಅಕ್ಟೋಬರ್ 10ರವರೆಗೆ ಯುವ ದಸರಾ ಕಾರ್ಯಕ್ರಮ ಆಯೋಜಿಸಲಾಗಿದೆ. ಯುವ ದಸರಾದಲ್ಲಿ ಬಾಲಿವುಡ್ ಗಾಯಕರ ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಪ್ರತಿ ವರ್ಷದಂತೆ ಈ ವರ್ಷವೂ ದಸರಾವನ್ನು ಅದ್ದೂರಿಯಾಗಿ ಆಚರಿಸಲು ಮೈಸೂರು ಜಿಲ್ಲಾಡಳಿತ ಎಲ್ಲರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ದಸರಾ ಸಂಭ್ರಮವನ್ನು ಕಣ್ತುಂಬಿಕೊಳ್ಳಲು ಜನರೂ ಸಹ ಅಷ್ಟೇ ಕಾತರದಿಂದ ಕಾಯುತ್ತಿದ್ದಾರೆ.

# ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹ



**ಬೆಂಗಳೂರು:** ಮುಡಾ ಹಗರಣ ಸಂಬಂಧ ಹೈಕೋರ್ಟ್ ತೀರ್ಪು ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಅವರ ರಾಜೀನಾಮೆ ಕೂಗು ಜೋರಾಗಿದೆ. ಸಿಎಂ ತಕ್ಷಣ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿ ಬಿಜೆಪಿ ಮತ್ತು ಜೆಡಿಎಸ್ ನಾಯಕರು, ಕಾರ್ಯಕರ್ತರು ವಿಧಾನಸೌಧದಲ್ಲಿ ಪ್ರತಿಭಟನೆ ನಡೆಸಿದರು.

ಪ್ರತಿಭಟನಾಕಾರರನ್ನು ನಿಯಂತ್ರಿಸಲು ಪೊಲೀಸ್ ಬಿಗಿ ಭದ್ರತೆ ಕಲ್ಪಿಸಲಾಗಿತ್ತು. ಎರಡು ಕೆಎಸ್‌ಆರ್‌ಪಿ ತುಕಡಿ ನಿಯೋಜನೆ ಮಾಡಲಾಗಿತ್ತು. ಪ್ರತಿಭಟನೆ ಹದ್ದು ಮೀರದಂತೆ ತಡೆಯಲು ಪೊಲೀಸರು ಸಿದ್ಧತೆ ಮಾಡಿಕೊಂಡಿದ್ದರು.

ವಿಧಾನಸೌಧದ ಗಾಂಧಿ ಪ್ರತಿಮೆ ಎದುರು ಬಿಜೆಪಿ ನಾಯಕರು ಪ್ರತಿಭಟನೆ ನಡೆಸಿದರು. ಪ್ಲೆಕಾರ್ಡ್‌ಗಳನ್ನು ಪ್ರದರ್ಶಿಸಿ ಕಾಂಗ್ರೆಸ್ ಸರ್ಕಾರ ಹಾಗೂ ಸಿಎಂ ಸಿದ್ದರಾಮಯ್ಯ ವಿರುದ್ಧ ಆಕ್ರೋಶ ಹೊರಹಾಕಿದರು. ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ಘೋಷಣೆ ಕೂಗಿದರು. ಈ ವೇಳೆ ವಿಧಾನಸೌಧಕ್ಕೆ ಬೀಗ ಹಾಕಲು ಮುಂದಾದರು. ಆದರೆ ವಿಪಕ್ಷಗಳ ನಾಯಕರ ಯತ್ನವನ್ನು ಪೊಲೀಸರು ವಿಫಲಗೊಳಿಸಿದರು. ಈ ವೇಳೆ ಪ್ರತಿಭಟನಾ ಸ್ಥಳದಲ್ಲಿ ಹೈಡ್ರಾಮಾ ಸೃಷ್ಟಿಸಿದರು.

ಪೊಲೀಸರ ಕಣ್ಣು ತಪ್ಪಿಸಿ ಬೀಗ ಹಾಕಲು ಅರವಿಂದ್ ಬೆಲ್ಲದ್ ಯತ್ನಿಸಿದರು. ಪೊಲೀಸರ ಕಣ್ತಪ್ಪಿಸಿ ದ್ವಾರಕ್ಕೆ ಬೀಗ ಹಾಕಲು ಕಸರತ್ತು ನಡೆಸಿದರು. ವಿಧಾನಸೌಧದ ಕೆಂಗಲ್ ಗೇಟ್ ಬಳಿ ಮೆಗಾ ಡ್ರಾಮಾವೇ ನಡೆಯಿತು. ಆಗ ಪೊಲೀಸರೇ ಬಾಗಿಲು ಮುಚ್ಚಿ ಬೆಲ್ಲದ್ ಅವರನ್ನು ತಡೆದರು.

» **ವಿಧಾನಸೌಧಕ್ಕೆ ಬೀಗ ಹಾಕಲು ಯತ್ನಿಸಿದ ಬಿಜೆಪಿ ನಾಯಕರು ಪೊಲೀಸ್ ವಶಕ್ಕೆ**

ಕೊನೆಗೆ ಪ್ರತಿಭಟನಾಕಾರರನ್ನು ಬಸ್‌ನಲ್ಲಿ ತುಂಬಿಕೊಂಡು ಪೊಲೀಸರು ಹೊರಟರು.

ಡಕೋಟಾ ಬಸ್‌ನಲ್ಲಿ ಬಿಜೆಪಿಯವರನ್ನು ಕರೆದೊಯ್ಯುತ್ತಿದ್ದಾರೆ ಅಂತಾ ಮಾಜಿ ಸಂಸದ ಮುನಿಸ್ವಾಮಿ ಆರೋಪಿಸಿದರು. ಬಿಎಂಟಿಸಿ ಬಸ್‌ಗೆ ಬ್ರೇಕ್ ಇಲ್ಲ, ಹಾರ್ನ್ ಇಲ್ಲ, ಒಡೆದ ಗ್ಲಾಸ್ ಇದೆ. ನಮಗೆ ಏನಾದರೂ ಅವಘಡ ಆಗಲಿ ಅಂತಾನೇ ಉದ್ದೇಶಪೂರ್ವಕವಾಗಿ ಈ ಬಸ್‌ನಲ್ಲಿ ಕರ್ಕೊಂಡು ಹೋಗ್ತಿದ್ದಾರೆ. ಈ ಬಸ್‌ನ ಹಾಗೆ ಸರ್ಕಾರವೂ ಲಡಾಸ್ ಆಗಿದೆ ಎಂದು ವಾಗ್ದಾಳಿ ನಡೆಸಿದರು.

ಪ್ರತಿಭಟನೆಯಲ್ಲಿ ವಿಪಕ್ಷ ನಾಯಕ ಆರ್.ಅಶೋಕ್, ಗೋವಿಂದ ಕಾರಜೋಳ, ಛಲವಾದಿ ನಾರಾಯಣಸ್ವಾಮಿ, ಸುನೀಲ್ ಕುಮಾರ್, ರವಿಕುಮಾರ್, ಜಗ್ಗೇಶ್, ಬೆಲ್ಲದ್, ಬಿ.ಸಿ.ಪಾಟೀಲ್, ಸಿ.ಸಿ.ಪಾಟೀಲ್, ಆರಗ ಜ್ಞಾನೇಂದ್ರ, ಹರೀಶ್ ಪೂಂಜಾ, ಗೋಪಾಲಯ್ಯ, ಮಹೇಶ್ ತೆಂಗಿನಕಾಯಿ, ಬಿ ಪಿ ಹರೀಶ್, ಸಿ.ಪಿ.ಯೋಗೇಶ್ವರ್, ಯಶ್ ಪಾಲ್ ಸುವರ್ಣ ಸೇರಿ ಬಿಜೆಪಿ ಜೆಡಿಎಸ್‌ನ 55 ಕ್ಕೂ ಹೆಚ್ಚು ನಾಯಕರು ಭಾಗಿಯಾಗಿದ್ದರು.

ಸಿದ್ದರಾಮಯ್ಯ ವಿರುದ್ಧದ ಪ್ರತಿಭಟನೆಗೆ ಬಿಜೆಪಿ ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ ಗೈರಾಗಿದ್ದರು. ದೋಸ್ತಿಗಳ ಪ್ರತಿಭಟನೆ ಎನ್ನಲಾಗಿತ್ತು. ಆದರೆ ಜೆಡಿಎಸ್ ನಾಯಕರು ಪ್ರತಿಭಟನೆಯಲ್ಲಿ ಭಾಗವಹಿಸಿರಲಿಲ್ಲ.

# ವಿಧಾನಸೌಧ- ವಿಕಾಸಸೌದಲ್ಲೂ ಅತ್ಯಾಚಾರ

## ಮುನಿರತ್ನ ವಿರುದ್ಧ ಸಂತ್ರಸ್ತೆ ಮಹಿಳೆ ಸ್ಫೋಟಕ ಆರೋಪ!

**ಬೆಂಗಳೂರು:** ಕಗ್ಗಲಿಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಅತ್ಯಾಚಾರ ಕೇಸ್ ಸಂಬಂಧ ಆರ್‌ಆರ್ ನಗರ ಕ್ಷೇತ್ರದ ಶಾಸಕ ಬಿಜೆಪಿ ಮುನಿರತ್ನಗೆ ನ್ಯಾಯಾಂಗ ಬಂಧನದಲ್ಲಿದ್ದ ಮುನಿರತ್ನ ಈಗ ಖಖಖಿ ಕಸ್ಟಡಿಯಲ್ಲಿದ್ದು, ಕೋರ್ಟ್ ಆದೇಶದಂತೆ ಮುನಿರತ್ನರನ್ನ ವಶಕ್ಕೆ ಪಡೆದ ವಿಶೇಷ ತನಿಖಾ ದಳದ ಅಧಿಕಾರಿಗಳು ಆರೋಪಿಯ ವಿಚಾರಣೆ ಮಾಡುತ್ತಿದ್ದಾರೆ. ಮತ್ತೊಂದೆಡೆ ಸಂತ್ರಸ್ತ ಮಹಿಳೆ ಮುನಿರತ್ನ ವಿರುದ್ಧ ಮತ್ತಷ್ಟು ಗಂಭೀರ ಆರೋಪಗಳನ್ನು ಮಾಡಿದ್ದಾರೆ. ಹೌದು. ವಿಧಾನಸೌಧ ಮತ್ತು ವಿಕಾಸೌದದಲ್ಲಿ ಆತ್ಯಾಚಾರ ಎಸಗಿದ್ದಾರೆ ಎಂದು ಸಂತ್ರಸ್ತ ಮಹಿಳೆ ಪೊಲೀಸರ ಮುಂದೆ ಮಹತ್ವದ ಹೇಳಿಕೆ ನೀಡಿದ್ದಾರೆ.

ವಿಧಾನಸೌಧ ಮತ್ತು ವಿಕಾಸೌದದಲ್ಲಿ ಮಾತ್ರವಲ್ಲದೇ ಸರ್ಕಾರಿ ಕಾರಿನಲ್ಲೂ ಸಹ ಅತ್ಯಾಚಾರವೆಸಗಿರುವುದಾಗಿ ಸಂತ್ರಸ್ತ ಮಹಿಳೆ ಪೊಲೀಸರ ಮುಂದೆ ಹೇಳಿಕೆ ದಾಖಲಿಸಿದ್ದಾರೆ.

ಅತ್ಯಾಚಾರ ಪ್ರಕರಣದಲ್ಲಿ ನ್ಯಾಯಾಂಗ ಬಂಧನದಲ್ಲಿದ್ದ ಬಿಜೆಪಿ ಶಾಸಕ ಮುನಿರತ್ನ ಈಗ ಖಖಖಿ ಕಸ್ಟಡಿಯಲ್ಲಿದ್ದಾರೆ. ಕೋರ್ಟ್ ಆದೇಶದಂತೆ ಮುನಿರತ್ನರನ್ನ ವಶಕ್ಕೆ ಪಡೆದ ವಿಶೇಷ ತನಿಖಾ ದಳದ ಅಧಿಕಾರಿಗಳು ಆರೋಪಿಯ ವಿಚಾರಣೆ ಮಾಡುತ್ತಿದ್ದಾರೆ. ಮತ್ತೊಂದೆಡೆ ಸಂತ್ರಸ್ತ ಮಹಿಳೆ ಮುನಿರತ್ನ ವಿರುದ್ಧ ಮತ್ತಷ್ಟು ಗಂಭೀರ ಆರೋಪಗಳನ್ನು



ಮಾಡಿದ್ದಾರೆ. ಸೆ.24ರ ರಾತ್ರಿಯೇ ಪರಪ್ಪನ ಅಗ್ರಹಾರ ಜೈಲಿನಿಂದ ಸಿಐಡಿ ಕಚೇರಿಗೆ ಬಂದಿರೋ ಮುನಿರತ್ನ ಸೆ.25 ರಂದು ದಿನಪೂರ್ತಿ ತನಿಖಾಧಿಕಾರಿಗಳ ವಿಚಾರಣೆಗೆ ಥಂಡಾ ಹೊಡೆದಿದ್ದಾರೆ.

**ಬೇರೆ-ಬೇರೆ ಆಯಾಮಗಳಲ್ಲೂ ತನಿಖೆ:** ತನಿಖಾಧಿಕಾರಿ ಖಿಕ ಸೌಮ್ಯಲತಾ ಮತ್ತು ಎಸಿ ಸೈಮನ್ ಆರೋಪಗಳ ಸಂಬಂಧ ಪ್ರಾಥಮಿಕ ಮಾಹಿತಿ ಕಲೆಹಾಕಿದ್ದಾರೆ. ಸಂತ್ರಸ್ಥೆ ಮಾಡಿರೋ ಆರೋಪಗಳನ್ನ ಮುಂದಿಟ್ಟು ಮುನಿರತ್ನರಿಂದ ಉತ್ತರ ಪಡೆದಿದ್ದಾರೆ. ಆದ್ರೆ ಸಂತ್ರಸ್ಥೆ ಆರೋಪಗಳೆಲ್ಲ ಸುಳ್ಳು ಎಂದಷ್ಟೇ ಮುನಿರತ್ನ ಹೇಳುತ್ತಿದ್ದಾರೆ. ಇನ್ನು ಆರೋಪಿ ಹೇಳಿಕೆ ದಾಖಲಿಸಿಕೊಂಡು ಪ್ರಾಥಮಿಕವಾಗಿ ಸಿಕ್ಕಿರೋ ಸಾಕ್ಷ್ಯಗಳನ್ನು ಮುಂದಿಟ್ಟು ಮತ್ತೊಮ್ಮೆ ಮುನಿರತ್ನರನ್ನ ವಿಚಾರಣೆ ನಡೆಸಲಿದ್ದಾರೆ.

ಇಷ್ಟಲ್ಲದೇ ನಾಳೆಯಿಂದ ಬೇರೆ ಆಯಾಮಗಳಲ್ಲೂ ಕೂಡ ತನಿಖೆ ಮುಂದುವರಿಯಲಿದೆ ಅದೇನಂದ್ರೆ, ಆರೋಪಿ ಕರೆದೊಯ್ದಯ ಸ್ಥಳ ಮಹಜರು ಪ್ರಕ್ರಿಯೆ. ಆರೋಪಿ ಮುನಿರತ್ನ ಪುರುಷತ್ವ ಪರೀಕ್ಷೆ ನಡೆಸುವ ಸಾಧ್ಯತೆ. ಬೌರಿಂಗ್ ಆಸ್ಪತ್ರೆಯಲ್ಲಿ ನಡೆಯಲಿರುವ ಪುರುಷತ್ವ ಪರೀಕ್ಷೆ, ಮುನಿರತ್ನ ಮೊಬೈಲ್ ಬಗ್ಗೆ ಎಸ್‌ಐಟಿ ಹೆಚ್ಚು ಫೋಕಸ್ ಮಾಡಿದೆ. ಆದ್ರೆಮ ಕೋಲಾರದ ಬಳಿ ಮೊಬೈಲ್ ಮಿಸ್ಸಿಂಗ್ ಆಗಿದೆ ಎಂದು ಮುನಿರತ್ನ ಹೇಳಿದ್ದಾರೆ. ಸದ್ಯ ಮುನಿರತ್ನ ಮೊಬೈಲ್‌ನ ಐಎಂಇಐ ನಂಬರ್ ಪಡೆದು ಮೊಬೈಲ್ ಶೋಧ ನಡೆಸಿದ್ದಾರೆ. ಯಾಕಂದ್ರೆ ಈ ಮೊಬೈಲ್ ನಿಂದಲೇ ವೀಡಿಯೋ ಕಾಲ್ ಮಾಡಿದ್ರು, ಅರೆಬೆತ್ತಲಾಗುವಂತೆ ಒತ್ತಾಯ ಮಾಡಿದ್ದರು ಎಂದು ಸಂತ್ರಸ್ಥೆ ಆರೋಪ ಮಾಡಿದ್ದಾರೆ.

ಹೀಗೆ ಶಾಸಕ ಮುನಿರತ್ನ ಕೇಸ್ ಸಂಬಂಧ ಹಂತ ಹಂತವಾಗಿ ಎಸ್‌ಐಟಿ ಟೀಂ ತನಿಖೆ ನಡೆಸಲಿದೆ. ಸ್ಥಳ ಮಹಜರು ಪ್ರಕ್ರಿಯೆ ಕೂಡ ಬಹಳ ಮುಖ್ಯವಾಗಿದ್ದು, ಮೊಬೈಲ್ ಸಿಕ್ಕರೇ ತನಿಖೆಗೆ ದೊಡ್ಡ ಬಲ ಬರಲಿದೆ. ಒಟ್ನಲ್ಲಿ ಶಾಸಕರಾಗಿ ಐಷಾರಾಮಿ ಜೀವನ ನಡೆಸುತ್ತಿದ್ದ ಮುನಿರತ್ನ ಈಗ ರೇಪ್ ಕೇಸ್ ಆರೋಪಿಯಾಗಿ ವಿಲವಿಲ ಅಂತಿರೋದು ಸತ್ಯ.

# ಈ ಸರ್ಕಾರದಲ್ಲಿ ಸುಳ್ಳು ಹೇಳಿಕೆ, ಸುಳ್ಳು ಪ್ರಚಾರ ನಡೆಯುತ್ತಿದೆ

**ನವದೆಹಲಿ:** ರಾಜಕೀಯವಾಗಿ ಚರ್ಚೆ ನಡೆದಿದೆ. ಈ ಸರ್ಕಾರದಲ್ಲಿ ಸುಳ್ಳು ಹೇಳಿಕೆ, ಸುಳ್ಳು ಪ್ರಚಾರ ನಡೆಯುತ್ತಿದೆ ಎಂದು ಪ್ರಧಾನಿ ಮೋದಿ ಹೇಳಿಕೆಗೆ ಸಿಎಂ ಟ್ವೀಟ್ ವಿಚಾರವಾಗಿ ಕೇಂದ್ರ ಉಕ್ಕು ಸಚಿವ ಹೆಚ್‌ಡಿ ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ. ರಾಷ್ಟ್ರ ರಾಜಧಾನಿಯಲ್ಲಿ ಮಾತನಾಡಿದ ಅವರು, ಹರಿಯಾಣದಲ್ಲಿ ಮುಡಾ ಪ್ರಕರಣ ಸಂಬಂಧ ಮೋದಿ ಹೇಳಿಕೆ ವಿಚಾರವಾಗಿ ಸಿಎಂ ಸಿದ್ದರಾಮಯ್ಯ ಟ್ವೀಟ್ ವಿಚಾರವಾಗಿ ಮಾತನಾಡಿದರು. ರಾಜಕೀಯವಾಗಿ ಕೆಲವು ಚರ್ಚೆ ನಡೆದಿರುತ್ತವೆ ಅದಕ್ಕೆ ಮಹತ್ವ ಕೊಡುವಂತಹ ಅಗತ್ಯವಿಲ್ಲ. ಕಾಂಗ್ರೆಸ್ ಸರ್ಕಾರದವರು ಬಿಜೆಪಿ ಸರ್ಕಾರದ ವಿರುದ್ಧ 40% ಆರೋಪ ಮಾಡಿದ್ದರು ಎಂದರು.

ಗಂಗೇನಹಳ್ಳಿ ಡಿನೋಟಿಫಿಕೇಷನ್ ವಿಚಾರವಾಗಿ ನನಗೆ ಯಾವುದೇ ನೋಟಿಸ್ ಕೊಟ್ಟಿರಲಿಲ್ಲ. ನನ್ನನ್ನು ಯಾರು ಸಂಪರ್ಕ ಮಾಡಿರಲಿಲ್ಲ. ನಾನು ಕದ್ದು ಹೋಗಲ್ಲ. ಈ ಕ್ಷಣದವರೆಗೆ ನನ್ನ ಜೊತೆ ಯಾರೂ ಮಾತನಾಡಿಲ್ಲ. ಈ ಸರ್ಕಾರದಲ್ಲಿ ಸುಳ್ಳು ಹೇಳಿಕೆ, ಸುಳ್ಳು ಪ್ರಚಾರ ನಡೆಯುತ್ತಿದೆ ಎಂದು ಆಗ್ರಹಿಸಿದರು. ಹಿಂದೆ ಬಿಜೆಪಿ 40% ಆರೋಪ ಮಾಡಿದ್ದರು. ಈಗ 40% ಮೀರಿ ಹೋಗಿದೆ ಎಂದು ತುಮಕೂರು ಮೂಲದ ಗುತ್ತಿಗೆದಾರರು ಹೇಳಿದ್ದಾರೆ. ಇದಕ್ಕೆಲ್ಲಾ ಸಿಎಂ ಏನು ಹೇಳುತ್ತಾರೆ ಎಂದು ಪ್ರಶ್ನಿಸಿದರು.

## ಕೊನೆಯ ಮುಖ್ಯಮಂತ್ರಿ!

ಅಡ್ಜಸ್ಟ್ಮೆಂಟ್ ರಾಜಕಾರಣ ಮುಕ್ತ ಕರ್ನಾಟಕ ಆಗಬೇಕೆನ್ನುವುದೇ ನಮ್ಮ ಆಗ್ರಹ. ಪಕ್ಷದ ವೇದಿಕೆಯಲ್ಲಿ ಏನು ಹೇಳಬೇಕು ಅದನ್ನು ಹೇಳಿದ್ದೇವೆ. ಏನು ಕ್ರಮ ಕೈಗೊಳ್ಳುತ್ತಾರೆ ಅನ್ನೋದು ಹೈಕಮಾಂಡ್ ಗೆ ಬಿಟ್ಟ ವಿಚಾರ ಎಂದು ಹುಬ್ಬಳ್ಳಿಯಲ್ಲಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿಕೆ ನೀಡಿದರು.

**ಎರಡನೇ ಮಮತಾ ಬ್ಯಾನರ್ಜಿ ಸರ್ಕಾರ:** ಕರ್ನಾಟಕದಲ್ಲಿರೋದು ಎರಡನೇ ಮಮತಾ ಬ್ಯಾನರ್ಜಿ ಸರ್ಕಾರ. ಸಂವಿಧಾನ ಬದಲಾವಣೆ ಮಾಡ್ತೀನಿ, ಹೊಸ ಕಾನೂನು ತರ್ತೀನಿ ಅಂದ್ರೆ ಆಗಲ್ಲ. ರಾಜ್ಯಂಗದಲ್ಲಿ ಹೊಸ ನಿಯಮ ತರೋದಕ್ಕೆ ಬರಲ್ಲ, ಸಂವಿಧಾನ ಪ್ರಕಾರವೇ ಎಲ್ಲವೂ ನಡೆಯುತ್ತೆ. ಸಿದ್ದರಾಮಯ್ಯ ಮತ್ತು ಡಿಕೆಶಿ ಪ್ರಕಾರ ಈ ದೇಶ, ರಾಜ್ಯ ನಡೆಯುವುದಿಲ್ಲ.

**ಭಾರದ್ವಾಜ ಎನ್ನುವ ಕಾಂಗ್ರೆಸ್ ಚಮಚ:** ಬಿಜೆಪಿ ಏಜೆಂಟ್ ರಂತೆ ಕೆಲಸ ಮಾಡ್ತಿದ್ದಾರೆ ಅನ್ನೋ ವಿಚಾರವಾಗಿ, ರಾಜಪಾಲರ ಅಧಿಕಾರವನ್ನು ಮೊಟಕುಗೊಳಿಸುವ ಯತ್ನಗಳನ್ನು ಕಾಂಗ್ರೆಸ್ ನವರು ನಡೆಸಿದ್ದು. ರಾಜ್ಯಪಾಲರ ಟೆಲಿಫೋನ್ ಕದ್ದಾಲಿಸುವ ಪ್ರಯತ್ನವನ್ನು ಮಾಡಿದ್ದಾರೆ. ಆದರೆ ಅದರಲ್ಲಿ ಸಫಲವಾಗಿಲ್ಲ. ಎಲ್ಲಾ ಪಕ್ಷದಲ್ಲಿ ಇದೊಂದು ಚಟಾ ಬಿದ್ದಿದೆ, ಹಿಂದೆ ಇದ್ದ ಭಾರದ್ವಾಜ ಎನ್ನುವ ಕಾಂಗ್ರೆಸ್ ಚಮಚ ಇದ್ದ, ಅವನು ಬಿಜೆಪಿಯದ್ದೇನಾದ್ರೂ ಇದ್ರೆ ತಗೊಂಡು ಬರ್ರಿ ಅಂತಿದ್ರೂ. ಲೇಕೆ ಆವೊ, ಲೇಕೆ ಆವೊ ಅಂತಿದ್ದಾ. ಈಗಿನ ಕಾಂಗ್ರೆಸ್ ನವರು ಅವರಂತೆ ನಡೆಯಬೇಕು ಅಂತಾರೆ, ರಾಜ್ಯಪಾಲರು ಅವರಂತೆ ಹೇಗೆ ನಡೀತಾರೆ.

ನ್ಯಾಯಾಲಯದಲ್ಲಿ ರಾಜ್ಯಪಾಲರ ನಿರ್ಣಯ ತಪ್ಪಾಗಿದ್ರೆ ಅವರು ಬಿಜೆಪಿ ಏಜೆಂಟ್ ಆಗ್ತಿದ್ರು. ರಾಜ್ಯಪಾಲರು ಒಬ್ರು ದಲಿತರೇ ಇದ್ದಾರೆ, ಈಗ ನೀವು ಯಾರಿಗೆ ಅಪಮಾನ ಮಾಡ್ತಿದ್ದೀರಿ, ನಿಮಗೆ ದಲಿತರ ಬಗ್ಗೆ ಎಷ್ಟು ಕಾಳಜಿ ಇದೆ ಅನ್ನೋದು ತೋರಿಸಿಕೊಡ್ತಿದ್ದೀರಿ ಎಂದು ಹುಬ್ಬಳ್ಳಿಯಲ್ಲಿ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಹೇಳಿಕೆ ನೀಡಿದರು.

## ಇನ್ನೊಂದೇ ಹೆಜ್ಜೆ ಬಾಕಿ

ಅಲ್ಲಿಗೆ ಆರೋಪಿ ಅಪರಾಧಿಯಾದ ಎಂದೇ ಲೆಕ್ಕ. ಸಿದ್ದಾಪರಾದ ಸಾಬೀತಿಗೆ ಇನ್ನೊಂದೇ ಹೆಜ್ಜೆ ಬಾಕಿ. ನಾನು ಭಾವಿಸಿದಷ್ಟು ಧೈರ್ಯವಂತರಲ್ಲ ನೀವು. ನಿಮಗೂ ಭಯವಿದೆ. ಅದೇ ಈ ನೆಲದ ಕಾನೂನಿನ ಶಕ್ತಿ ಏನಂತೀರಿ? ಮುಡಾಸಿದ್ವಿಲಾಸ ಎಂದು ಸಿಎಂ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

## ಶೀಘ್ರದಲ್ಲೇ ಆರಂಭ

**ನಿಲ್ದಾಣಗಳು:** ನಾಗಸಂದ್ರದಿಂದ ಮಾದಾವರದ ನಡುವಿನ ಮಾರ್ಗದಲ್ಲಿ ಮೂರು ನಿಲ್ದಾಣಗಳನ್ನು ನಿರ್ಮಿಸಲಾಗಿದೆ. ಮಂಜುನಾಥನಗರ, ಚಿಕ್ಕಬಿದರಕಲ್ಲು ಮತ್ತು ಮಾದಾವರ. ಹಸಿರು ಮಾರ್ಗ ವಿಸ್ತರಣೆಯಿಂದ ನಗರದ ಪ್ರಮುಖ ಪ್ರದರ್ಶನ ಕೇಂದ್ರವಾದ ಬೆಂಗಳೂರು ಇಂಟರ್ನ್ಯಾಷನಲ್ ಎಕ್ಸಿಬಿಷನ್ ಸೆಂಟರ್ ಗೆ ಸಂಪರ್ಕವನ್ನು ಹೊಂದಿದೆ.

ಮಂಜುನಾಥನಗರ, ಚಿಕ್ಕಬಿದರಕಲ್ಲು, ಮಾದಾವರ, ತುಮಕೂರು ರಸ್ತೆ, ಅಂಚೆಪಾಳ್ಯ, ಜಿಂದಾಲ್ ನಗರದ ನಾಗರಿಕರು ಮೆಟ್ರೋದಲ್ಲಿ ಪ್ರಯಾಣಿಸಲು ನಾಗಸಂದ್ರ ಮೆಟ್ರೊ ನಿಲ್ದಾಣಕ್ಕೆ ಬರಬೇಕಾಗಿತ್ತು, ಈಗ ಈ ಮಾರ್ಗ ಸಂಪೂರ್ಣವಾದ ಬಳಿಕ ಐದು ಕಿಲೋಮೀಟರ್‌ಗಳಷ್ಟು ಪ್ರಯಾಣಿಸುವುದು ತಪ್ಪಲಿದೆ.

ನಾಗಸಂದ್ರ-ಮಾದವಾರ ನಡುವಿನ ಕಾಮಗಾರಿ 2017ರಲ್ಲಿ

ಮೊದಲನೇ ಪುಟದಿಂದ...

ಆರಂಭವಾಗಿತ್ತು. ಅಂದುಕೊಂಡಂತೆ ಎಲ್ಲವೂ ನಡೆದಿದ್ದರೇ 2019ರ ಮಧ್ಯದ ವೇಳೆಗೆ ಕಾಮಗಾರಿ ಪೂರ್ಣಗೊಳ್ಳಬೇಕಿತ್ತು. ಆದರೆ, ಭೂಸ್ವಾದೀನ, ಸ್ಥಳೀಯರ ವಿರೋಧ ಹಾಗೂ ನಂತರ ಕೊರೊನಾ ಸಮಸ್ಯೆ ಸೇರಿದಂತೆ ಹತ್ತು ಹಲವು ಸವಾಲು, ಸಮಸ್ಯೆಗಳ ಕಾರಣದಿಂದ ಐದು ವರ್ಷ ತಡವಾಗಿ ಈ ಮಾರ್ಗ ಮೆಟ್ರೋ ಸಂಚಾರಕ್ಕೆ ಲಭ್ಯವಾಗುತ್ತಿದೆ.

## ದೇವಾಲಯ ಪವಿತ್ರೋತ್ಸವ

ಅರ್ಚಕರು ಮೂರು ದಿನದ ಪೂಜೆ, ಹೋಮ, ಹವನ ಮಾಡಲಿದ್ದಾರೆ. ಈಗಾಗಲೇ ಟಿಟಿಡಿ ದೇವಾಲಯದಲ್ಲಿ ಅಗ್ನಿಕುಂಡ ಹೋಮಕುಂಡಗಳ ತಯಾರಿ ಮಾಡಿಕೊಳ್ಳಲಾಗಿದೆ. ಪವಿತ್ರೋತ್ಸವ ಶುದ್ಧಿ ಕಾರ್ಯದಲ್ಲಿ ದೇವಾಲಯದ ಆಡಳಿತ ಮಂಡಳಿ ಭಕ್ತರಿಗೂ ಅವಕಾಶ ನೀಡಿದೆ. ಇಬ್ಬರು 1 ಸಾವಿರ ರೂ. ರಶೀದಿ ಪಡೆದು ಪೂಜೆಯಲ್ಲಿ ಭಾಗಿಯಾಗಲು ಕಲ್ಪಿಸಲಾಗಿದೆ.

## ಪತ್ತೆ

ಮಣಿಗಂಡನ್ ಸೇಲಂ ಮತ್ತು ಕೃಷ್ಣಗಿರಿಯಲ್ಲಿ ವ್ಯಾಪಾರ ಮಾಡುತ್ತಿದ್ದು, ಇತ್ತೀಚೆಗೆ ತೀವ್ರ ನಷ್ಟವನ್ನು ಎದುರಿಸುತ್ತಿದ್ದರು ಎಂದು ಪ್ರಾಥಮಿಕ ತನಿಖೆಗಳು ಸೂಚಿಸಿವೆ.

ಪೊಲೀಸರು ಆತ್ಮಹತ್ಯೆಯ ಕೋನವನ್ನು ತನಿಖೆ ನಡೆಸುತ್ತಿದ್ದಾರೆ ಆದರೆ ಮಣಿಗಂಡನ್ ಪುದುಕೊಟ್ಟೈಗೆ ಏಕೆ ಬಂದರು ಎಂಬ ಬಗ್ಗೆಯೂ ತನಿಖೆ ನಡೆಸುತ್ತಿದ್ದಾರೆ. ಘಟನಾ ಸ್ಥಳದಿಂದ ಫೋರೆನ್ಸಿಕ್ ತಂಡವು ಪುರಾವೆಗಳನ್ನು ಸಂಗ್ರಹಿಸಿದ ನಂತರ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದ್ದು, ಹೆಚ್ಚಿನ ತನಿಖೆ ನಡೆಯುತ್ತಿದೆ.

## ದಾಸ

ಇಂದು ಅರ್ಜಿ ವಿಚಾರಣೆಗೆ ಬರೋ ಸಾಧ್ಯತೆ ಇದೆ. ಜಾಮೀನು ಅರ್ಜಿಗೆ ಆಕ್ಷೇಪಣೆ ಸಲ್ಲಿಸಲು ಎಸ್ ಪಿಪಿ ಪ್ರಸನ್ನ ಕುಮಾರ್ ಅವರು ಕಾಲಾವಕಾಶ ಕೋರಿದ್ದರು. ಹೀಗಾಗಿ ಅವರ ಜಾಮೀನು ಅರ್ಜಿ ವಿಚಾರಣೆಯನ್ನು ಸೆಪ್ಟೆಂಬರ್ 27ಕ್ಕೆ ಮುಂದೂಡಿ 57ನೇ ಸಿಸಿಹೆಚ್ ನ್ಯಾಯಾಲಯದ ಜಡ್ಜ್ ಜೈಶಂಕರ್ ಆದೇಶ ನೀಡಿದ್ದರು.

ರೇಣುಕಾ ಸ್ವಾಮಿ ಕೊಲೆ ಪ್ರಕರಣದ ತನಿಖೆ ಅಂತ್ಯವಾಗಿದೆ. ಚಾರ್ಜ್ ಶೀಟ್ ಕೂಡ ಸಲ್ಲಿಕೆ ಆಗಿದೆ. ಈ ಚಾರ್ಜ್ ಶೀಟ್ ನಲ್ಲಿ ಹಲವು ರೀತಿಯ ಶಾಕಿಂಗ್ ವಿಚಾರ ಇದೆ. ಈ ಪ್ರಕರಣದಲ್ಲಿ ಶರಣಾದ ಮೂವರಿಗೆ ಈಗಾಗಲೇ ಜಾಮೀನು ಸಿಕ್ಕಿದೆ. ಈಗ ದರ್ಶನ್ ಕೂಡ ಜಾಮೀನಿನ ನೀರೀಕ್ಷೆಯಲ್ಲಿ ಇದ್ದಾರೆ.

**ಐಟಿ ವಿಚಾರಣೆ:** ಗುರುವಾರ ಬಳ್ಳಾರಿ ಜೈಲಿಗೆ ಐಟಿ ಅಧಿಕಾರಿಗಳು ಬಂದಿದ್ದಾರೆ. ಕೋರ್ಟ್ ಆದೇಶ ಹಿನ್ನೆಲೆಯಲ್ಲಿ ಐಟಿ ಅಧಿಕಾರಿಗಳು ದರ್ಶನ್ ನ ವಿಚಾರಣೆ ಮಾಡಿದ್ದಾರೆ. ರೇಣುಕಾ ಸ್ವಾಮಿ ಕೊಲೆ ಕೇಸ್ ನಲ್ಲಿ ಹಣದ ವ್ಯವಹಾರ ನಡೆದಿದೆ. ಕೇಸ್ ಮುಚ್ಚಿ ಹಾಕಲು ಲಕ್ಷಾಂತರ ರೂಪಾಯಿ ಬಳಕೆ ಆಗಿದೆ. ಹಣದ ಮೂಲವನ್ನು ಐಟಿ ಅಧಿಕಾರಿಗಳು ಪತ್ತೆ ಹಚ್ಚುತ್ತಿದ್ದಾರೆ.

## ಪೊಲೀಸರು

ಮೃತ ರಂಜನ್ ಫಿಂಗರ್ ಪ್ರಿಂಟ್, ಬ್ಲಡ್ ಸ್ಯಾಂಪಲ್ ಪ್ರಮುಖ ಸಾಕ್ಷ್ಯ ಆಗಲಿದೆ. ತನಿಖಾ ತಂಡ ಮನೆಯಲ್ಲಿ ಸಿಕ್ಕಿರುವ ಬ್ಲಡ್ ಸ್ಯಾಂಪಲ್, ಫಿಂಗರ್ ಪ್ರಿಂಟ್ ಸ್ಯಾಂಪಲ್ ಜೊತೆ ಇದನ್ನು ಹೋಲಿಕೆ ಮಾಡಲಿದ್ದಾರೆ. ಹೋಲಿಕೆ ಮಾಡಿ ಆತನೇ ಕೊಲೆಗಾರನಾ ಎಂದು ಸಾಕ್ಷ್ಯ ಸಂಗ್ರಹಿಸಲಿದ್ದಾರೆ.

ರಂಜನ್ ಮೊಬೈಲ್ ಈ ಕೊಲೆ ಕೇಸ್‌ನಲ್ಲಿ ಪ್ರಮುಖ ಸಾಕ್ಷ್ಯ. ರಂಜನ್ ಮತ್ತು ಮಹಾಲಕ್ಷ್ಮಿ ನಡುವಿನ ಸಂಬಂಧ ಬಯಲು ಮಾಡಲಿದೆ. ಕೊನೆಯದಾಗಿ ರಂಜನ್ ಕರೆ ಮಾಡಿದ್ದು ಕೂಡ ತನಿಖೆಗೆ ಸಹಕಾರಿಯಾಗಲಿದೆ. ಮತ್ತೊಂದು ಕಡೆ ಆರೋಪಿ ಸಾವನ್ನಪ್ಪಿದ ಹಿನ್ನೆಲೆ ಕೇಸ್ ಕ್ಲೋಸ್ ಆಗಲಿದೆ. ರಂಜನ್ ಕೊಲೆ ಮಾಡಿರೋದಕ್ಕೆ ಪೊಲೀಸರು ಸಾಕ್ಷ್ಯ ಕಲೆಹಾಕಲಿದ್ದಾರೆ.

ರಂಜನ್ ಕೃತ್ಯಕ್ಕೆ ಯಾರಾದ್ರೂ ಸಹಾಯ ಮಾಡಿದ್ದಾರಾ ಎಂದೂ ತನಿಖೆ ನಡೆಯಲಿದೆ. ಈಗಾಗಲೇ ರಂಜನ್ ಸಹೋದರನ ವಿಚಾರಣೆ ನಡೆಸಲಾಗಿದೆ. ಕೊಲೆಯ ಬಗ್ಗೆ ಆತನಿಗೆ ತಿಳಿದಿದ್ದ ವಿಚಾರಗಳ ಬಗ್ಗೆ ಹೇಳಿಕೆ ದಾಖಲಿಸಲಾಗಿದೆ. ನ್ಯಾಯಾಧೀಶರ ಮುಂದೆ ಆತನ ಸೆ.164 ಅಡಿ ಹೇಳಿಕೆ ಕೂಡ ದಾಖಲಿಸಲಾಗಿದೆ.

ಈ ಎಲ್ಲಾ ಅಂಶಗಳನ್ನು ಒಳಗೊಂಡ ಚಾರ್ಜ್‌ಶೀಟ್‌ನ್ನು ಪೊಲೀಸರು ತಯಾರಿಸಲಿದ್ದಾರೆ. ಬಳಿಕ ನ್ಯಾಯಾಲಯಕ್ಕೆ ಅಬೇಟೆಡ್ ಚಾರ್ಜ್ಶೀಟ್ ಸಲ್ಲಿಸಲಿದ್ದಾರೆ. ಅಬಟೇಡ್ ಚಾರ್ಜ್‌ಶೀಟ್ ಅಂದ್ರೆ ಆರೋಪಿ ಸಾವನ್ನಪ್ಪಿದ ನಂತರ ತನಿಖೆ ನಿಲ್ಲಿಸುವ ಬಗ್ಗೆ ವರದಿ. ನ್ಯಾಯಾಲಯಕ್ಕೆ ಆರೋಪಿ ಸಾವನ್ನಪ್ಪಿದ ಬಗ್ಗೆ ಕೋರ್ಟ್ ಗಮನಕ್ಕೆ ತಂದು ಅಬೇಟೆಡ್ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲಿದೆ.

## ತುಪ್ಪ ಸೇಫ್ ಅಲ್ಲ

ದೇಶಾದ್ಯಂತ ತಿರುಪತಿ ಲಡ್ಡು ತಯಾರಿಕೆಗೆ ಬಳಸಲಾಗಿದೆ ಎನ್ನಲಾದ ಕಲಬೆರಕೆ ತುಪ್ಪ ವಿವಾದ ಸೃಷ್ಟಿಸಿದೆ. ಕಳಪೆ ಗುಣಮಟ್ಟದ ತುಪ್ಪ, ಪ್ರಾಣಿಗಳ ಕೊಬ್ಬು ಇರುವ ಬಗ್ಗೆ ಚರ್ಚೆಯಾಗುತ್ತಿದೆ. ಈ ಬೆನ್ನಲ್ಲೇ ರಾಜ್ಯದ ನಂದಿನಿ ತುಪ್ಪ ಹೊರತುಪಡಿಸಿ, ಉಳಿದ ತುಪ್ಪಗಳನ್ನು ಟೆಸ್ಟ್ ಮಾಡಲು ಆರೋಗ್ಯ ಸಚಿವರು ಸೂಚಿಸಿದ್ದರು.

# ಮಹಿಳಾ ದೌರ್ಜನ್ಯ ಪ್ರಕರಣಗಳು ಕಡಿಮೆಯಾಗಲಿ

**ಯಳಂದೂರು:** ಮಹಿಳಾ ದೌರ್ಜನ್ಯಗಳನ್ನು ತಡೆಗಟ್ಟಲು ಅನೇಕ ಕಾನೂನುಗಳು ಜಾರಿಗೆ ತಂದಿದ್ದರೂ ಸಹ ಈ ಪ್ರಕರಣಗಳು ಉಲ್ಬಣಗೊಳ್ಳುತ್ತಿರುವುದು ಆತಂಕಕಾರಿ ವಿಷಯವಾಗಿದ್ದು ಈ ಬಗ್ಗೆ ಪ್ರತಿಯೊಬ್ಬರೂ ಜಾಗೃತರಾಗಬೇಕು ಎಂದು ಆರಕ್ಷಕ ವೃತ್ತ ನಿರೀಕ್ಷಕ ಆರ್. ಶ್ರೀಕಾಂತ್ ಕರೆ ನೀಡಿದರು.

ಅವರು ಗುರುವಾರ ಪಟ್ಟಣದ ವಾಲ್ಮೀಕಿ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಜ್ಞಾನ ವಿಕಾಸ ಕಾರ್ಯಕ್ರಮದಡಿಯಲ್ಲಿ ನಡೆದ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಹಿಳಾ ದೌರ್ಜನ್ಯಗಳನ್ನು ತಡೆಗಟ್ಟುವಿಕೆ ವಿಷಯದ ಬಗ್ಗೆ ಮಾತನಾಡಿದರು. ತ್ಯಾಚಾರ ಪರಕರಣಗಳು ಹೆಚ್ಚುತ್ತಿರುವುದು ಆತಂಕಕಾರಿ ವಿಷಯವಾಗಿದೆ. ಸಮಾಜದಲ್ಲಿರುವ ಶೇ. 2 ರಿಂದ 3 ರಷ್ಟು ಜನರು ಇಂತಹ ಕೃತ್ಯ ಎಸೆಗುತ್ತಾರೆ. ಆದರೆ ಉಳಿದವರು ಇದಕ್ಕೂ ನಮಗೂ ಸಂಬಂಧ ಇಲ್ಲದಂತೆ ಇರುತ್ತಾರೆ. ಹೀಗಾಗಬಾರದು ಇದು ಇಂತಹ ದುಷ್ಟರಿಗೆ ಮತ್ತಷ್ಟು ಕುಮ್ಮಕ್ಕು ನೀಡಿದಂತಾಗುತ್ತದೆ. ಹಾಗಾಗಿ ಪ್ರತಿಯೊಬ್ಬರೂ ಇಂತಹವರ ವಿರುದ್ಧ ಮಾಹಿತಿಯನ್ನು ನೀಡಿ ಪೊಲೀಸರಿಗೆ ಸಹಕರಿಸಬೇಕು. ಹೆಣ್ಣನ್ನು ಭೋಗದ ವಸ್ತುವಾಗಿ



ನೋಡುವ ಪರಿಪಾಠ ಇನ್ನೂ ಜೀವಂತವಾಗಿದೆ. ಈ ಮನಸ್ಥಿತಿ ಬದಲಾಗಬೇಕು. ಹೆಣ್ಣು ಮಕ್ಕಳ ಮಾರಾಟ ಜಾಲ, ಇವರನ್ನು ಪಬ್, ಕ್ಲಬ್‌ಗಳಲ್ಲಿ ಬಳಸಿಕೊಳ್ಳುವುದು, ಮಾದಕ ದ್ರವ್ಯಗಳನ್ನು ಮಾರಾಟ ಮಾಡಲು ಬಳಸಿಕೊಳ್ಳುತ್ತಿರುವುದು ಖೇದಕರ ಸಂಗತಿಯಾಗಿದೆ ಇದು ನಿಲ್ಲಬೇಕು. ಸರಗಳ್ಳತನವೂ ಮಹಿಳಾ ದೌರ್ಜನ್ಯದ ಒಂದು ಭಾಗವಾಗಿದೆ. ಮಹಿಳೆಯರನ್ನೇ ಗುರಿಯಾಗಿಸಿಕೊಂಡು ಈ ಕೃತ್ಯ ಎಸೆಗಲಾಗುತ್ತಿದ್ದು ಈ ಬಗ್ಗೆ ಮಹಿಳೆಯರು ಎಚ್ಚರದಿಂದ ಇರಬೇಕು. ನಮ್ಮ ಜಿಲ್ಲೆಯಲ್ಲಿ ಬಾಲ್ಯವಿವಾಹ ಪದ್ಧತಿ ಇನ್ನೂ ಜೀವಂತವಾಗಿದೆ. ಪೋಕ್ಸೋ ಕಾಯ್ದೆಯಡಿಯಲ್ಲಿ ದೂರಾಗಿ ಅನೇಕರು ಜೈಲಿನಲ್ಲಿದ್ದಾರೆ. 13 ರಿಂದ 19 ವರ್ಷ ವಯಸ್ಸಿನ ಮಕ್ಕಳ ಕಡೆ ಪೋಷಕರು ವಿಶೇಷ ಆಸಕ್ತಿ ವಹಿಸಬೇಕು. ಹರೆಯದ ವಯಸ್ಸಿನಲ್ಲಿ ಪ್ರೀತಿ ಪ್ರೇಮದ ಗುಂಗಿನಲ್ಲಿ ಸಿಲುಕಿ ಮೋಸ ಹೋಗುತ್ತಿದ್ದಾರೆ. ಇಂತಹ ಪ್ರಕರಣಗಳು ಹೆಚ್ಚಾಗುತ್ತಿದ್ದು ಇದು ನಿಲ್ಲಬೇಕಾದರೆ ಪೋಷಕರು ವಿಶೇಷ ಆಸಕ್ತಿ ವಹಿಸಬೇಕು ಎಂದು ಸಲಹೆ ನೀಡಿದರು. ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಎನ್. ಎಂ. ಸರಸ್ವತಿ ಬಾಲ್ಯವಿವಾಹದಿಂದಾಗುವ ದುಷ್ಪರಿಣಾಮಗಳು ಹಾಗೂ ಕಾನೂನು ಅರಿವು ಹಾಗೂಕುಟುಂಬ ನಿರ್ವಹಣೆಯಲ್ಲಿ ಮಹಿಳೆಯರಿಗೆ ಒತ್ತಡ ಎಂಬ ವಿಷಯದ ಕುರಿತು ಮಾತನಾಡಿದರು. ಜ್ಞಾನವಿಕಾಸದ ಯೋಜನಾಧಿಕಾರಿ ಮೂಕಾಂಬಿಕಾ, ಜಿಲ್ಲಾ ಜನಜಾಗೃತಿ ವೇದಿಕೆಯ ಭೀಮಪ್ಪ ಮಕ್ಕಳ ಸಹಾಯವಾಣಿ ಮೇಲ್ವಿಚಾರಕ ಮಹೇಶ್ ಅನೇಕರು ಇದ್ದರು.

# ಬೆಳ್ಳಾರ ಶಾಲೆಯ ಸತತ ಎಂಟನೇ ವರ್ಷವೂ ಜಿಲ್ಲಾ ಮಟ್ಟಕ್ಕೆ ಆಯ್ಕೆ

**ಹುಳಿಯಾರು:** ಹುಳಿಯಾರು ಹೋಬಳಿಯ ಬೆಳ್ಳಾರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಚಿಕ್ಕನಾಯಕನಹಳ್ಳಿ ತಾಲ್ಲೂಕು ಮಟ್ಟದ ಖೊ-ಖೊ ಪಂದ್ಯದಲ್ಲಿ ಗೆಲುವು ಸಾಧಿಸಿ ಸತತ 8 ನೇ ವರ್ಷವೂ ಜಿಲ್ಲಾ ಹಂತಕ್ಕೆ ಆಯ್ಕೆಯಾಗಿದ್ದಾರೆ.ವಿದ್ಯಾರ್ಥಿ ವೀರಭದ್ರ ನಾಯಕತ್ವದಲ್ಲಿ ಶ್ರೀನಿವಾಸ್, ಪುನಿತ್, ಓಂಕಾರ್, ಪ್ರಜ್ವಲ್, ಅರುಣ್, ಕಿಶನ್, ದೀಪಕ್, ಹೇಮಂತ್, ನಂದನ್, ಕಿರಣ್, ಕಿಶೋರ್ ಅವರುಗಳು ಕ್ರೀಡಾಕೂಟಲ್ಲಿ ಉತ್ತಮ ಪ್ರದರ್ಶನ ನೀಡುವ ಮೂಲಕ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಎಸ್‌ಡಿಎಂಸಿ ಅಧ್ಯಕ್ಷರಾದ ಮಹೇಶ್, ಮುಖ್ಯ ಶಿಕ್ಷಕರಾದ ಕೆ.ಎಲ್.ಪದ್ಮ ಹಾಗೂ ಶಿಕ್ಷಕ ವೃಂದದವರು, ಎಸ್‌ಡಿಎಂಸಿ ಸದಸ್ಯರು ಅಭಿನಂದಿಸಿದ್ದಾರೆ.



# ದರಪಟ್ಟಿಆಹ್ವಾನ

**ಮಂಡ್ಯ:** ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಲಭ್ಯವಿರುವಅನುಪಯುಕ್ತ ಸಾಮಾಗ್ರಿಗಳಾದ ಜೆರಾಕ್ಸ್ ಮಿಷನ್‌ಗಳು (2),ಸ್ಕ್ಯಾನರ್(1),ಸ್ಕ್ಯಾನರ್ ಕಂ.ಪ್ರಿಂಟರ್(4), ಸಿ.ಪಿ.ಯು (7), ತೂಕದ ಮಿಷನ್ (ಚಿಕ್ಕದು)(1),ಅನುಪಯುಕ್ತಟ್ಯೂಬ್ ಲೈಟ್ ಸೆಟ್(13) ನಿಯಮಾನುಸಾರ ವಿಲೇವಾರಿ ಮಾಡಲುದರಪಟ್ಟಿಯನ್ನುಆಹ್ವಾನಿಸಲಾಗಿದೆ. ಅನುಪಯುಕ್ತ ಸಾಮಾಗ್ರಿಗಳಿಗೆ ಪ್ರತಿಒಂದಕ್ಕೆಕೊಂಡುಕೊಳ್ಳುವ ದರವನ್ನು ಪ್ರತ್ಯೇಕವಾಗಿ ನಮೂದು ಮಾಡಿ ಮುಚ್ಚಿದ ಲಕೋಟೆಯಲ್ಲಿಅಕ್ಟೋಬರ್ 10 ರ ಸಂಜೆ 5 ಗಂಟೆಯೊಳಗಾಗಿ ಕಛೇರಿಗೆ ಸಲ್ಲಿಸತಕ್ಕದ್ದು. ಸದರಿ ಸಾಮಾಗ್ರಿಗಳನ್ನು ಕೊಂಡುಕೊಳ್ಳುವ ಅತಿ ಹೆಚ್ಚಿನದರ ನಮೂದುಮಾಡಿರುವ ಬಿಡ್ಡುದಾರರಿಗೆಅನುಪಯುಕ್ತ ಸಾಮಾಗ್ರಿಗಳನ್ನು ನೀಡಲುಕ್ರಮವಹಿಸಲಾಗುವುದು.ಅವಧಿ ಮೀರಿ ಬಂದ ದರಪಟ್ಟಿಗಳನ್ನು ಸ್ವೀಕರಿಸಲಾಗುವುದಿಲ್ಲ, ಪ್ರಕ್ರಿಯೆಯನ್ನು ಮುಂದೂಡುವಅಥವಾತಿರಸ್ಕರಿಸುವಅಧಿಕಾರವನ್ನು ಜಿಲ್ಲಾಧಿಕಾರಿಗಳು ಹೊಂದಿರುತ್ತಾರೆಎಂದು ಮಂಡ್ಯಜಿಲ್ಲೆಯಅಪರಜಿಲ್ಲಾಧಿಕಾರಿಡಾ ಹೆಚ್‌ಎಲ್ ನಾಗರಾಜುಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆಯರಿಗೆಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮ

**ಮಂಡ್ಯ:** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಸರ್ಕಾರಇವರ ಪ್ರಾಯೋಜಕತ್ವದಲ್ಲಿ, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿಕೇಂದ್ರ(ಸಿಡಾಕ್) ಇವರು ಸ್ವಂತಉದ್ಯಮವನ್ನು ಸ್ಥಾಪಿಸಲು ಇಚ್ಚಿಸುವ ಮಹಿಳಾ ಅಭ್ಯರ್ಥಿಗಳಿಗೆ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿತರಬೇತಿಕಾರ್ಯಕ್ರಮವನ್ನು ಅಕ್ಟೋಬರ್ 4 ರಿಂದಅಕ್ಟೋಬರ್ 18ರವರಗೆಮಂಡ್ಯದವಿ,ಸಿ,ಫಾರಂನಕೃಷಿ ವಿಜ್ಞಾನಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ. ತರಬೇತಿಯಲ್ಲಿ ಸ್ವಂತಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ, ಹಾಗೂ ಉದ್ಯಮ ನಿರ್ವಹಣೆ, ಇತ್ಯಾದಿ ವಿಷಯಗಳ ಕುರಿತುತರಬೇತಿಯನ್ನು ನೀಡಲಾಗುವುದು, ಇದಕ್ಕಾಗಿ ಮಂಡ್ಯಜಿಲ್ಲೆಯ ಆಸಕ್ತ ಮಹಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು 18 ವರ್ಷ ಮೇಲ್ಪಟ್ಟ ವಯಸ್ಸಿನವರಾಗಿರಬೇಕು ಹಾಗೂ ಎಸ್.ಎಸ್.ಎಲ್.ಸಿ.ಪಾಸಾಗಿರಬೇಕು. ಅರ್ಜಿಯನ್ನುಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆಅಥವಾದೂರವಾಣಿಮುಖಾಂತರ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿದೂ.ಸಂ.: 9008194396ಮಂಡ್ಯಜಂಟಿ ನಿರ್ದೇಶಕರಕಛೇರಿ, ಸಿಡಾಕ್ ಜಿಲ್ಲಾಕೈಗಾರಿಕಾಕೇಂದ್ರವನ್ನು ಸಂಪರ್ಕಿಸಬಹುದುಎಂದು ಮಂಡ್ಯ ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿಸರ್ಗದತ್ತ ಆಹಾರ ಸೇವನೆಯಿಂದ ಶೇ.80 ರೋಗಗಳಿಂದ ಮುಕ್ತ

**ಹುಳಿಯಾರು:** ಬೇಕರಿ ತಿನಿಸು ತಿನ್ನುವುದನ್ನು ಕಡಿಮೆ ಮಾಡಿ ನಿಸರ್ಗದತ್ತ ಆಹಾರ ಸೇವನೆಯಿಂದ ಶೇ.80 ಭಾಗ ರೋಗಗಳಿಂದ ಮುಕ್ತರಾಗಬಹುದು ಎಂದು ಕಂದಿಕೆರೆ ಪ್ರಾಥಮಿಕ ಅರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ.ಸುಭಾಷ್ ತಿಳಿಸಿದರು.

ಹುಳಿಯಾರು ಹೋಬಳಿಯ ಚಿಕ್ಕಬಿದರೆಯಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನ ವಿಕಾಸ ಕಾರ್ಯಕ್ರಮದಡಿ ಏರ್ಪಡಿಸಿದ್ದ ಅರೋಗ್ಯ ತಪಾಸಣೆ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಕೃತಿಯಿಂದ ದೊರೆಯುವ ಹಣ್ಣು, ಹಸಿ ತರಕಾರಿಗಳನ್ನು ಅದೇ ರೀತಿ ಬಳಸಿದಲ್ಲಿ ಬಹುತೇಕ ಕಾಯಿಲೆಗಳು ದೂರವಾಗುತ್ತವೆ. ವ್ಯಾಯಾಮ ಕೊರತೆಯಿಂದಾಗಿ ಮಧುಮೇಹ, ರಕ್ತದ ಒತ್ತಡ ಹೆಚ್ಚಾಗುತ್ತವೆ. ನಿತ್ಯ ವಾಕ್ ಮಾಡುವ ಆಟ ಆಡುವ ಹವ್ಯಾಸ ಬೆಳಸಿಕೊಳ್ಳಬೇಕು. ಅತಿಯಾದ ಆಹಾರ ಸೇವನೆ ಒಳ್ಳೆಯದಲ್ಲ. ಒಮ್ಮೆ ಆಹಾರ ಸೇವಿಸಿದ ನಂತರ 4 ಗಂಟೆ ಒಳಗೆ ಮತ್ತೆ ಯಾವ ಆಹಾರ ತಿನ್ನಬಾರದು ಎಂದು ಸಲಹೆ ನೀಡಿದರು.

ಶಿಬಿರದಲ್ಲಿ ಉಚಿತವಾಗಿ ಬಿಸಿ, ಶುಗರ್ ತಪಾಸಣೆ ಮಾಡಲಾಯಿತು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಯೋಜನಾಧಿಕಾರಿಗಳಾದ ರಾಮಚಂದ್ರ, ಗ್ರಾಮ ಪಂಚಾಯಿತಿಯ ಉಪಾಧ್ಯಕ್ಷರಾದ ರೇಣುಕಾಮ್ಮ, ಮಾಲತೇಶ್ ಎಚ್‌ಐಒ, ಸಚಿನ್ ಸಿಎಚ್‌ಒ, ಜ್ಞಾನ ವಿಕಾಸ ಸಮನ್ವಯ ಅಧಿಕಾರಿ ಸುನಿತಾ, ಸೇವಾಪ್ರತಿನಿಧಿ ರತ್ನಮ್ಮ ಉಪಸ್ಥಿತರಿದ್ದರು.

26ಊಗಐಖಜಂಖ2:: ಹುಳಿಯಾರು ಹೋಬಳಿಯ ಚಿಕ್ಕಬಿದರೆಯಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನ ವಿಕಾಸ ಕಾರ್ಯಕ್ರಮದಡಿ ಅರೋಗ್ಯ ತಪಾಸಣೆ ಶಿಬಿರ ಏರ್ಪಡಿಸಲಾಗಿತ್ತು.



# ಕೈಗವಸು, ಮುಖಗವಸು ಹಾಕದ ಪೌರಕಾರ್ಮಿಕರು

**ಹುಳಿಯಾರು:** ಹುಳಿಯಾರಿನ ಪಟ್ಟಣ ಪಂಚಾಯ್ತಿ ವ್ಯಾಪ್ತಿಯಲ್ಲಿ ಸ್ವಚ್ಚತಾ ಜವಾಬ್ದಾರಿ ಹೊತ್ತ ಪೌರಕಾರ್ಮಿಕರು ಆರೋಗ್ಯದ ಕಾಳಜಿ ಇಲ್ಲದೆ ಸ್ವಚ್ಚತೆಯಲ್ಲಿ ತೊಡಗಿದ್ದಾರೆ. ಕೈಗವಸು, ಮುಖಗವಸು ಸೇರಿದಂತೆ ಆರೋಗ್ಯ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಯಾವುದೇ ರಕ್ಷಣಾ ವಸ್ತುಗಳನ್ನು ಬಳಸಲು ಆಸಕ್ತಿ ತೋರುತ್ತಿಲ್ಲ. ಪಂಚಾಯ್ತಿಯವರು ಇವರಿಗೆ ಕೊಟ್ಟಿದ್ದರೋ, ಇಲ್ಲವೋ ಎಂಬ ಅನುಮಾನ ಸಾರ್ವಜನಿಕ ವಲಯದಲ್ಲಿ ಮೂಡಿದೆ.

ನಿತ್ಯ ಬೆಳಗ್ಗೆ ಸೂರ್ಯ ಉದಯಿಸುವ ಮುನ್ನವೇ ಇಲ್ಲಿನ ಪೌರಕಾರ್ಮಿಕರು ಬೀದಿ ಕಸ ಗುಡಿಸಿ ಅದನ್ನು ಎತ್ತಿ ಟ್ರಾಕ್ಟರ್‌ಗೆ ತುಂಬುವ ಕೆಲಸವನ್ನು ನಿರ್ವಹಿಸುತ್ತಾರೆ. ನಂತರ ಚರಂಡಿ ಸ್ವಚ್ಛ ಮಾಡುತ್ತಾರೆ. ಆದರೆ ಇವರು ಮಾತ್ರ ಎಂತಹದ್ದೇ ಕಸ ಇರಲಿ, ಎತ್ತುವುದು ಬರಿಗೈಯಲ್ಲೇ. ಟ್ರಾಕ್ಟರ್‌ಗೆ ಕಸ ಹಾಕುವುದಕ್ಕೂ ಸಲಕರಣೆ ಬಳಸುವುದಿಲ್ಲ; ಬದಲಿಗೆ ಕೈ ಬಳಸುತ್ತಾರೆ. ಕೊಳೆತ ಕಸ ವಾಸನೆ ಬೀರುತ್ತಿದ್ದರೂ ರಕ್ಷಣಾ ಸಲಕರಣೆಗಳನ್ನು ಬಳಸುವುದಿಲ್ಲ. ಧೂಳು ಏಳುತ್ತಿದ್ದರೂ ಮಾಸ್ಕ್ ಹಾಕಿಕೊಳ್ಳಲು ಮನಸ್ಸು ಮಾಡುವುದಿಲ್ಲ. ಚರಂಡಿ ಕ್ಲೀನ್ ಮಾಡುವ ಸಂದರ್ಭದಲ್ಲೂ ಸಹ ಬಳಸದೆ ನಿರ್ಲಕ್ಷ್ಯತೆಯಿಂದ ಕೆಲಸ ಮಾಡುತ್ತಾರೆ. ಇದು ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ.

ಪೌರಕಾರ್ಮಿಕರು ಮುಖಗವಸು, ಕೈಗವಸು, ಗಮ್ ಶೂ ಮತ್ತಿತರ ಸಲಕರಣೆಗಳನ್ನು ಹಾಕಿ ಕೊಂಡೇ ಸ್ವಚ್ಛತಾ ಕೆಲಸ ಮಾಡಬೇಕೆಂಬ ನಿಯಮವಿದೆ. ಹಾಗಾಗಿಯೇ ಆಗಾಗ ಉಚಿತವಾಗಿ ರಕ್ಷಣಾ ಸಲಕರಣೆಗಳನ್ನು ನೀಡಲಾಗುತ್ತದೆ. ಆದರೂ ಇವರು ಬಳಸದೆ ಕರ್ತವ್ಯ ನಿರ್ವಹಿಸುತ್ತಿರುವುದು ಪಂಚಾಯ್ತಿ ಮೇಲೆ ಅನುಮಾನ



ಮೂಡುವಂತಾಗಿದೆ. ಕಾಲಕಾಲಕ್ಕೆ ಕೊಟ್ಟಿಲ್ಲವೂ ಅಥವಾ ಕೊಟ್ಟಿದ್ದರೂ ಬಳಸುವಂತೆ ಹೇಳುವವರಾರೂ ಇಲ್ಲದಾಗಿದ್ದಾರೋ ತಿಳಿಯದಾಗಿದೆ. ಅನೈರ್ಮಲ್ಯದ ವಾತಾವರಣದಲ್ಲಿ ಕೆಲಸ ಮಾಡುತ್ತಿದ್ದರೂ ರಕ್ಷಣಾ ಸಾಮಗ್ರಿಗಳನ್ನು ಬಲಸದಿರುವುದರಿಂದ ಪೌರಕಾರ್ಮಿಕರು ಬಹಳ ಬೇಗ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ.

ಈ ಬಗ್ಗೆ ಪೌರಕಾರ್ಮಿಕರನ್ನು ಪ್ರಶ್ನಿಸಿದರೆ ಪಂಚಾಯ್ತಿಯವರು ಕೊಟ್ಟಿದ್ದಾರೆ. ಆದರೆ ನಮ್ಮ ಸೈಜ್ ಕೊಡದೆ ಅನ್‌ಸೈಜ್ ಕೊಟ್ಟಿದ್ದು ಸಡಿಲ ಆಗುವುದರಿಂದ ಕೆಲಸ ಮಾಡಲು ಆಗುತ್ತಿಲ್ಲ. ಹಾಗಾಗಿ ಬರಿಗೈಯಲ್ಲಿ ಕೆಲಸ ಮಾಡುತ್ತಿದ್ದೇವೆ ಎನ್ನುತ್ತಾರೆ. ಮತ್ತೊಬ್ಬರು ನಮಗೆ ಕೊಟ್ಟಿರುವ ಎಲ್ಲಾ ರಕ್ಷಣಾ ಸಾಮಗ್ರಿಗಳು ಹರಿದು ಹೋಗಿವೆ. ವರ್ಷಕ್ಕೊಮ್ಮೆ ಶೂ, ಕೈಗವಸು ಕೊಡುತ್ತಿದ್ದು ನಿತ್ಯ ಬಳಸುವುದರಿಂದ ಬೇಗ ಹರಿದು ಹೋಗುತ್ತವೆ. ಕನಿಷ್ಟ ಮೂರು ತಿಂಗಳಿಗೊಮ್ಮೆಯಾದರೂ ಕೊಡಿಸಬೇಕು. ಅಲ್ಲದೆ ಟೀಶರ್ಟ್, ಮಳೆಗಾಲಕ್ಕೆ ಜರ್ಕಿನ್ ಸಹ ಕೊಡಬೇಕು ಎಂಬ ಬೇಡಿಕೆಯನ್ನಿಡುತ್ತಾರೆ.

ಹುಳಿಯಾರು ಪಂಚಾಯ್ತಿಯಲ್ಲಿ 16 ವಾರ್ಡ್‌ಗಳಿವೆ. ಜನಸಂಖ್ಯೆ ದಿನವೇ ದಿನಕ್ಕೆ ಹೆಚ್ಚಾಗುತ್ತಿದೆ. ಅದಲ್ಲದೆ ಬಡಾವಣೆಗಳೂ ಹೆಚ್ಚಾಗುತ್ತಿವೆ. ನಗರದ ಸ್ವಚ್ಚತೆ ಕಾಪಾಡುವುದು ಕಾರ್ಮಿಕರಿಗೆ ಸವಾಲಾಗಿದೆ. ಅದರಲ್ಲೂ ಬಸ್ ನಿಲ್ದಾಣ, ರಾಜ್‌ಕುಮಾರ್ ರಸ್ತೆ, ಕರವೇ ಸರ್ಕಲ್, ವಾಲ್ಮಿಕಿ ಸರ್ಕಲ್‌ಗಳಲ್ಲಿ ಫುಟ್‌ಫಾತ್ ವ್ಯಾಪಾರಿಗಳು ಹೆಚ್ಚಾಗಿದ್ದು ತ್ಯಾಜ್ಯವನ್ನು ಅಲ್ಲಿಯೇ ಬಿಟ್ಟು ಹೋಗುತ್ತಾರೆ. ಪ್ರಯಾಣಿಕರು ಗುಟುಕ ಇಂದು ಕವರ್ ಎಸೆಯುತ್ತಾರೆ. ಟೀ ಅಂಗಡಿಯವರು ಪ್ಲಾಸ್ಟಿಕ್ ಲೋಟಗಳನ್ನು ರಸ್ತೆಗೆ ಬಿಸಾಕಿ ಹೋಗುತ್ತಾರೆ. ಇವುಗಳನ್ನು ಸ್ವಚ್ಚ ಮಾಡುವ ಕಾರ್ಮಿಕರ ಆರೋಗ್ಯದ ದೃಷ್ಠಿಯಿಂದ ರಕ್ಷಣಾ ವಸ್ತುಗಳ ಬಳಕೆ ಬಗ್ಗೆ ಅಧಿಕಾರಿಗಳು ಗಮನ ಹರಿಸಬೇಕಿದೆ.

> **ಪೌರ ಕಾರ್ಮಿಕರಿಗೆ ಕೈಗವಸು, ಮಾಸ್ಕ್ ಸೇರಿ ಅನೇಕ ಸಲಕರಣೆಗಳನ್ನು ಪ್ರತಿ ಕಾರ್ಮಿಕರ ದಿನಾಚರಣೆಯಲ್ಲಿ ನೀಡುತ್ತೇವೆ. ಅಲ್ಲದೆ ಕಡ್ಡಾಯವಾಗಿ ಹಾಕಿಕೊಂಡು ಕೆಲಸ ಮಾಡಬೇಕೆಂದು ಹೇಳುತ್ತೇವೆ. ಅವರು ಕೈಗವಸು, ಮಾಸ್ಕ್ ಹಾಕದೆ ಕೆಲಸ ಮಾಡುತ್ತಾರೋ ವಿಷಯ ನನಗೆ ತಿಳಿದಿಲ್ಲ. ಇವರ ಜವಾಬ್ದಾರಿಯನ್ನು ಸಾದಿಕ್ ಅವರಿಗೆ ವಹಿಸಿದ್ದು ನಾಳೆಯಿಂದ ಕಡ್ಡಾಯವಾಗಿ ಹಾಕುವಂತೆ ನೋಡಿಕೊಳ್ಳುತ್ತೇವೆ. ಅಲ್ಲದೆ ಶುಕ್ರವಾರ ಪೌರಕಾರ್ಮಿಕರ ದಿನಾಚಾರಣೆಯಲ್ಲಿ ಹೊಸದಾಗಿ ರಕ್ಷಣಾ ಸಾಮಗ್ರಿಗಳನ್ನು ವಿತರಿಸುತ್ತೇವೆ.**
>
> **। ನಾಗಭೂಷಣ**
> ಮುಖ್ಯಾಧಿಕಾರಿ, ಪಪಂ, ಹುಳಿಯಾರು

# ಉಪಕರಣ ನಿರ್ವಹಣೆಗೆ ದರಪಟ್ಟಿ ಆಹ್ವಾನ

**ಚಾಮರಾಜನಗರ:** ಜಿಲ್ಲಾ ಕಾರಾಗೃಹ ಅಧೀಕ್ಷಕರ ಸಂಸ್ಥೆಯಲ್ಲಿ ಅಳವಡಿಸಿರುವ ಸಿಸಿಟಿವಿ ಕ್ಯಾಮೆರಾಗಳು, ರೆಕಾರ್ಡಿಂಗ್ ಸರ್ವರ್ ಮತ್ತು ಪೂರಕ ಉಪಕರಣಗಳ ವಾರ್ಷಿಕ ನಿರ್ವಹಣೆಗಾಗಿ ನೊಂದಾಯಿತ ವರ್ತಕರು ಹಾಗೂ ಸಂಸ್ಥೆಗಳಿಂದ ಜಿ.ಎಸ್.ಟಿ ಸಹಿತ ದರಪಟ್ಟಿಯನ್ನು ಆಹ್ವಾನಿಸಿದ್ದು, ಇಚ್ಛೆಯುಳ್ಳ ಸಂಸ್ಥೆ ಹಾಗೂ ವರ್ತಕರು ಜಿ.ಎಸ್.ಟಿ ಸಹಿತ ದರಪಟ್ಟಿಯನ್ನು 15 ದಿನಗಳ ಒಳಗಾಗಿ ಕಾರಾಗೃಹಕ್ಕೆ ಭೇಟಿ ನೀಡಿ ದರಪಟ್ಟಿ ನೀಡುವಂತೆ ಜಿಲ್ಲಾ ಕಾರಾಗೃಹ ಅಧೀಕ್ಷಕರಾದ ಶಿವಕುಮಾರ್ ಅವರು ತಿಳಿಸಿದ್ದಾರೆ.

# ಎವರ್‌ಗ್ರೀನ್ ಶಾಲೆಯ ವಿದ್ಯಾರ್ಥಿಗಳು ಜಿಲ್ಲಾಮಟ್ಟಕ್ಕೆ ಆಯ್ಕೆ

**ವಿಜಯಪುರ:** ಪಟ್ಟಣದ ಎವರ್‌ಗ್ರೀನ್ ಶಾಲೆಯ ವಿದ್ಯಾರ್ಥಿಗಳು ದೇವನಹಳ್ಳಿಯಲ್ಲಿ ನಡೆದ ತಾಲ್ಲೂಕು ಮಟ್ಟದ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಿ, ಹಿರಿಯ ಪ್ರಾಥಮಿಕ ವಿಭಾಗದ ವಯಕ್ತಿಕ ಆಟಗಳಾದ ಉದ್ದ ಜಿಗಿತ ಮತ್ತು 100 ಮೀ ಓಟದ ಸ್ಪರ್ಧೆಯಲ್ಲಿ ಗಂಗೋತ್ರಿ ಪ್ರಥಮಸ್ಥಾನ, 200ಮೀ ಓಟದ ಸ್ಪರ್ಧೆಯಲ್ಲಿ ಸಹನಶ್ರೀ ಎಸ್ ಪ್ರಥಮ ಸ್ಥಾನ ಹಾಗೂ ಗುಂಡು ಎಸೆತದಲ್ಲಿ ಗಗನ್ ಕೌಶಿಕ್ ಪ್ರಥಮ ಸ್ಥಾನ ಗಳಿಸಿ ಜಿಲ್ಲಾ ಹಂತಕ್ಕೆ ಆಯ್ಕೆಯಾಗಿರುತ್ತಾರೆ. ಪ್ರೌಢಶಾಲಾ ವಿಭಾಗದಲ್ಲಿ ಶಟಲ್ ಬ್ಯಾಟ್‌ಮಿಂಟನ್ ಸ್ಪರ್ಧೆಯಲ್ಲಿ ಸ್ಮಿತ ವಿ ಎಂ, ಗಾಯತ್ರಿ ಎಂ ಎನ್, ಸಂಜನ, ಕುಮುದ ಪಿ, ತನುಜ ಆರ್ ಪ್ರಥಮ ಸ್ಥಾನ ಮತ್ತು ಉದ್ದ ಜಿಗಿತ ಪಾವನ ಎಂ ದ್ವಿತೀಯ ಸ್ಥಾನ ಗಳಿಸಿ ಜಿಲ್ಲಾ ಹಂತಕ್ಕೆ ಆಯ್ಕೆಯಾಗಿರುತ್ತಾರೆ. ತರಭೇತಿ ನೀಡಿದ ದೈಹಿಕ ಶಿಕ್ಷರಾದಂತಹ ಆವುಲಕೊಂಡರಾಯಪ್ಪ ರವರನ್ನು ಹಾಗೂ ವಿಜೇತರಾದ ಎಲ್ಲಾ ವಿದ್ಯಾರ್ಥಿಗಳಿಗೆ ವೇದಗಾನ ಎಜುಕೇಷನ್ ಅಂಡ್ ಡೆವಲಪ್‌ಮೆಂಟ್ ಟ್ರಸ್ಟ್ ನ ಅಧ್ಯಕ್ಷರಾದ ಅನಿಲ್ ಕುಮಾರ್ ವಿ, ನಿಕಟಪೂರ್ವ ಅಧ್ಯಕ್ಷರಾದ ಎಸ್ ರುದ್ರಮೂರ್ತಿ , ಸಿ. ಎನ್. ರಾಮಯ್ಯ ರವರು ಹಾಗೂ ಇತರೆ ಸದಸ್ಯರು, ಮುಖ್ಯ ಶಿಕ್ಷಕಿಯಾದ ಸವಿತ ಆರ್ ಅಭಿನಂದಿಸಿದರು.



# ಪ್ರಧಾನ ಮಂತ್ರಿ ಜನಜಾತಿಯ ಉನ್ನತ್‌ಗ್ರಾಮಅಭಿಯಾನ

**ಮಂಡ್ಯ:** ನವದೆಹಲಿಯಕೇಂದ್ರ ಬುಡಕಟ್ಟು ವ್ಯವವಹಾರಗಳ ಮಂತ್ರಾಲಯರವರು ಪ್ರಧಾನ ಮಂತ್ರಿಜನಜಾತಿಯಉನ್ನತ ಗ್ರಾಮಅಭಿಯಾನದ 17 ಇಲಾಖೆಗಳಿಂದ 25 ಗ್ರಾಮಗಳನ್ನು ಪ್ರಧಾನ ಮಂತ್ರಿಅವಾಸ್‌ಯೋಜನೆ, ಪ್ರಧಾನ ಮಂತ್ರಿಗ್ರಾಮ ಸಡಕ್‌ಯೋಜನೆ, ಜಲ್‌ಜೀವನ್ ಮಿಷನ್, ಪರಿಷ್ಕರಿಸಿದ ವಿತರಣಾ ವಲಯ ಮತ್ತು ಸೌರ ವಿದ್ಯುತ್‌ಯೋಜನೆ, ಉಜ್ವಲ ಯೋಜನೆ, ಅರಣ್ಯ ಹಕ್ಕು ಕಾಯ್ದೆ ಪ್ರಧಾನ ಮಂತ್ರಿಜನ್ ಅರೋಗ್ಯಯೋಜನೆ, ನ್ಯಾಷನಲ್ ಹೆಲ್ತ್ ಮಿಷನ್,ನ್ಯಾಷನಲ್ ಸಿಕಲ್ ಸೆಲ್ ಮಿಷನ್,ಸಮಗ್ರ ಶಿಕ್ಷ ಅಭಿಯಾನ, ರಾಷ್ಟ್ರೀಯಜಾನುವಾರು ಮಿಷನ್, ರಾಷ್ಟ್ರೀಯಗ್ರಾಮ ಸ್ವರಾಜ್‌ಅಭಿಯಾನ್, ಪ್ರಧಾನ ಮಂತ್ರಿ ಆದಿ ಆದರ್ಶಗ್ರಾಮ, ಕೇಂದ್ರ, ಕೃಷಿ ಮತ್ತುರೈತಕಲ್ಯಾಣ ಸಚಿವಾಲಯದ ಬಹು ಯೋಜನೆಗಳು, ಅಂಗನವಾಡಿ ಯೋಜನೆಗಳು ಟೆಲಿಕಾಮ್ ತಂತ್ರಜ್ಞಾನಅಭಿವೃದ್ಧಿ, ಸ್ವದೇಶ್‌ದರ್ಶನ್, ಪ್ರಧಾನ ಮಂತ್ರಿ ಮತ್ಸ್ಯ ಸಂಘದಯೋಜನೆ ಮತ್ತುಕೌಶಲ್ಯ ಭಾರತ್ ಮಿಷನ್ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರವುಆಯ್ಕೆ ಮಾಡಿದೆ. ಈ ಯೋಜನೆಯಡಿಯಲ್ಲಿ ಮಂಡ್ಯಜಿಲ್ಲೆಯಕೆ.ಆರ್ ಪೇಟೆತಾಲೂಕಿನ ಸಿಂಗನಹಳ್ಳಿ, ಪೂವನಹಳ್ಳಿ ಗ್ರಾಮಗಳನ್ನುಆಯ್ಕೆ ಮಾಡಿದೆ. ಪರಿಶಿಷ್ಟ ಪಂಗಡದ ಕಾಲೋನಿಗಳಲ್ಲಿ ಮೇಲ್ಕಂಡಯೋಜನೆಗಳಡಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿ, ವಿವಿಧ ಇಲಾಖೆಗಳಿಂದ ಸರ್ವೆ ನಡಸಿ ಮೇಲ್ಕಂಡಸೌಲಭ್ಯಗಳನ್ನು ಹೊಂದಿಲ್ಲದಿರುವ ಮಾಹಿತಿಯನ್ನುಕ್ರೋಢಿಕರಿಸಲು ಸಂಬಂಧಪಟ್ಟಇಲಾಖೆಯಅಧಿಕಾರಿಗಳು ನೋಡಲ್ ಅಧಿಕಾರಿಗಳಿಗೆ ಮಾಹಿತಿಯನ್ನು ಕ್ರೋಢಿಕರಿಸಿ ಪ್ರಸ್ತಾವನೆಯನ್ನು ತಯಾರಿಸಿಕೇಂದ್ರ ಸರ್ಕಾರಕ್ಕೆ ಸಲ್ಲಿಸಿ ಅನುಮೋದನೆ ಪಡೆದು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದು.

# ಹರ್ಡೀಕರ್ ವೃತ್ತದಲ್ಲಿ ಪೆಟ್ಟಿಗೆ ಅಂಗಡಿ ವಿಚಾರಕ್ಕೆ ಸಭೆ

**ಬೇಲೂರು:** ಪಟ್ಟಣದ ಶ್ರೀಚನ್ನಕೇಶವಸ್ವಾಮಿ ದೇಗುಲ ರಸ್ತೆಯಲ್ಲಿನ ಡಾ.ನಾ.ಸು.ಹರ್ಡೀಕರ್ ವೃತ್ತದ ಬಳಿ ಇರುವ ವಾಣಿಜ್ಯದ ಮರದ ಪೆಟ್ಟಿಗೆಗಳ ಬದಲಿಗೆ ಕಬ್ಬಿಣದ ಪೆಟ್ಟಿಗೆಗಳನ್ನು ಇಡಲು ಇಂದು ನಡೆದ ಪುರಸಭೆಯ ವಿಶೇಷ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು.

ಅಧ್ಯಕ್ಷ ಎ.ಆರ್.ಅಶೋಕ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಸದಸ್ಯ ಬಿ.ಎ.ಜಮಾಲುದ್ದೀನ್, ಪೆಟ್ಟಿಗೆ ಅಂಗಡಿ ಇಟ್ಟಿರುವ ಸ್ಥಳ ಪುರಸಭೆಗೆ ಸೇರಿದ್ದಾಗಿದ್ದು ಅಲ್ಲಿ ನೆಲ ಬಾಡಿಗೆ ಆಧಾರದಲ್ಲಿ ಕಬ್ಬಿಣದ ಪೆಟ್ಟಿಗೆಗಳನ್ನು ಅಲ್ಲಿ ಇರುವವರಗೆ ಕೊಡಬೇಕು, ಒಂದುವೇಳೆ ರಸ್ತೆ ಅಗಲೀಕರಣ ಇತ್ಯಾದಿ ತಾಂತ್ರಿಕ ಕಾರಣಕ್ಕೆ ತೆರವುಗೊಳಿಸಬೇಕೆಂದರೆ ಅವರಿಂದ ಮುಚ್ಚಳಿಕೆ ಬರಸಿಕೊಳ್ಳಬಹುದೆಂದು ತಿಳಿಸಿದರು. ಸದಸ್ಯ ಬಿ.ಸಿ.ಜದೀಶ್, ಹಲವು ವರ್ಷಗಳಿಂದ ಅಲ್ಲಿರುವ ಪೆಟ್ಟಿಗೆ ಅಂಗಡಿ ಮಾಲೀಕರು ವ್ಯವಹಾರ ನಡೆಸುತ್ತಿದ್ದಾರೆ. ಇದೀಗ ಚಂದ ಕಾಣಲೆಂದು ಕಬ್ಬಿಣದ ಪೆಟ್ಟಿಗೆಗಳನ್ನು ಇಟ್ಟುಕೊಳ್ಳಲು ನೆಲಬಾಡಿಗೆ 1 ಸಾವಿರ ರೂಪಾಯಿಗೆ ನೀಡುವಂತೆ ಮನವಿ ಮಾಡಿದರು.



ಉಪಾಧ್ಯಕ್ಷೆ ಉಷಾಸತೀಶ್, ಅಕ್ರಮಪಾಷ, ಅಶೋಕ್, ಶೈಲೇಶ್, ಪುಟ್ಟಸ್ವಾಮಿ, ಪ್ರಭಾಕರ್, ದಿವ್ಯಾಗಿರೀಶ್, ಆಶಾರಾಣಿ, ಮಣಿಶೇಖರ್, ನಾಮಿನಿ ಸದಸ್ಯ ಕೇಶವ, ಮಣಿಶೇಖರ್ ಹರ್ಡೀಕರ್ ವೃತ್ತದಲ್ಲಿ ಮರದ ಪೆಟ್ಟಿಗೆ ಅಂಗಡಿಗಳನ್ನು ಇಟ್ಟುಕೊಂಡು ಸುಮಾರು 40 ವರ್ಷಗಳಿಂದ ಜೀವನ ಸಾಗಿಸುತ್ತಿದ್ದಾರೆ. ಅವರಿಗೆ ನೆಲ ಬಾಡಿಗೆ ಆಧಾರದ ಮೇಲೆ ಕಬ್ಬಿಣದ ಪೆಟ್ಟಿಗೆ ಅಂಗಡಿ ಇಡಲು ಅವಕಾಶ ನೀಡಬೇಕೆಂದು ಒತ್ತಾಯಿಸಿದರು. ಹರ್ಡೀಕರ್ ವೃತ್ತವು ಒಳಗೊಂಡಂತೆ 6 ನೇ ವಾರ್ಡಿನ ಸದಸ್ಯ ಸೌಮ್ಯಸುಬ್ರಹ್ಮಣ್ಯ, ನನ್ನ ವಾರ್ಡಿನ ಜನತೆ ಪೆಟ್ಟಿಗೆ ಅಂಗಡಿಯನ್ನು ಇಟ್ಟುಕೊಂಡಿದ್ದಾರೆ. ಇಂದು ಅವರಿಗೆ ಅಲ್ಲಿ ಮರು ಅವಕಾಶ ನೀಡದಿದ್ದರೆ ಜೀವನ ನಡೆಸುವುದೆ ಕಷ್ಟವಾಗಲಿದೆ, ನಿನ್ನೆ ಪೆಟ್ಟಿಗೆ ತೆಗೆಸಿದಾಗಿನಿಂದ ಉಂಟಾಗಿರುವ ಗೊಂದಲದಿಂದ ಅವರಿಗೆ ಅನ್ಯಾಯವಾಗುವುದೇನೊ ಎಂಬ ಕಾರಣಕ್ಕೆ ನೋವು ಉಂಟಾಗಿ ಊಟವನ್ನೇ ಮಾಡಿಲ್ಲ, ದಯಮಾಡಿ ಅವರಿಗೆಲ್ಲಾ ಸಹಾಯ ಮಾಡಿ ಎಂದು ಕಣ್ಣೀರು ಸುರಿಸಿದರು.

# ಜ್ಞಾನಜ್ಯೋತಿ ಶಾಲೆಯಿಂದ ಜಿಲ್ಲಾಮಟ್ಟಕ್ಕೆ ಆಯ್ಕೆ

**ಹುಳಿಯಾರು:** ಹುಳಿಯಾರಿನ ಜ್ಞಾನಜ್ಯೋತಿ ಆಂಗ್ಲ ಶಾಲೆಯ ಹೆಣ್ಣು ಮಕ್ಕಳು ತಾಲೂಕು ಮಟ್ಟದ ಬಾಲ್ ಬ್ಯಾಡ್ಮಿಂಟನ್ ಕ್ರೀಡೆಯಲ್ಲಿ ಜಯಗಳಿಸಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಶಾಲೆಯಲ್ಲಿ ವಿಜೇತ ಮಕ್ಕಳನ್ನು ಅಭಿನಂಧಿಸಿದ ಮುಖ್ಯಶಿಕ್ಷಕ ಕೆ.ಎಲ್.ಗಿರೀಶ್ ಮಾತನಾಡಿ ಕ್ರೀಡೆಯು ಮಕ್ಕಳ ಶೈಕ್ಷಣಿಕ ಬಾಗವಾಗಿದ್ದು ಮಕ್ಕಳು ದೈಹಿಕ ವಿಕಸನ ಹೊಂದಲು ಕ್ರೀಡೆಯು ಪ್ರಮುಖ ಪಾತ್ರ ವಹಿಸುತ್ತದೆ. ಹಾಗಾಗಿ ವಿದ್ಯಾರ್ಥಿಗಳು ಒಂದಿಲ್ಲೊಂದು ಕ್ರೀಡೆಯಲ್ಲಿ ತೊಡಗಬೇಕು ಎಂದರು. ಶಾಲೆಯ ಅಧ್ಯಕ್ಷ ಕೆ.ಸಿ.ಶಿವಣ್ಣ, ಕಾರ್ಯದರ್ಶಿ ಸುಧಾ, ಶಿಕ್ಷಕರುಗಳಾದ ಅಕ್ಬರ್ ಅಲಿ, ಲೀಲಾ, ಶೈಲಾ, ಚಂಪಾ, ನಾಗರತ್ನ, ಸುಧಾ, ಶಶಿಕಲ ಮತ್ತಿತರರು ಉಪಸ್ಥಿತರಿದ್ದರು.



# ಆಹಾರ ಸುರಕ್ಷತೆ, ಗುಣಮಟ್ಟ, ಸ್ವಚ್ಚತೆ ಬಗ್ಗೆ ತಪಾಸಣಾ ವಿಶೇಷ ಆಂದೋಲನ

**ಚಿಕ್ಕಬಳ್ಳಾಪುರ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ವತಿಯಿಂದ ಸೆಪ್ಟೆಂಬರ್ 27 ರಂದು ಸಂಜೆ 5 ಗಂಟೆಗೆ ಚಿಕ್ಕಬಳ್ಳಾಪುರ ನಗರಸಭೆ ವ್ಯಾಪ್ತಿಯಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಹಾಗೂ ಸ್ವಚ್ಚತೆಯ ಬಗ್ಗೆ ತಪಾಸಣಾ ವಿಶೇಷ ಆಂದೋಲನವನ್ನು ಹಮ್ಮಿಕೊಳ್ಳಲಾಗಿದೆ. ಎಲ್ಲಾ ಆಹಾರ ಸುರಕ್ಷತಾಧಿಕಾರಿಗಳು ಮತ್ತು ನಗರಸಭೆ ಆರೋಗ್ಯ ನಿರೀಕ್ಷಕರು ಚಿಕ್ಕಬಳ್ಳಾಪುರ ನಗರದಲ್ಲಿ ಬೀದಿ ಬದಿಯ ತಿಂಡಿ ತಿನಿಸು ವ್ಯಾಪಾರಿಗಳು, ಹೋಟೆಲ್ ಗಳು, ರೆಸ್ಟೋರೆಂಟ್ ಗಳು ಮತ್ತು ಬೇಕರಿಗಳಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಹಾಗೂ ಸ್ವಚ್ಚತೆಯ ತಪಾಸಣೆ ನಡೆಸುವ ವಿಶೇಷ ಆಂದೋಲನದಲ್ಲಿ ಭಾಗವಹಿಸಲಿದ್ದಾರೆ ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಅಂಕಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಬಳೆ ಪಂಚಾಯಿತಿ ಸಮಸ್ಯೆಗಳಿಗೆ ಶೀಘ್ರ ಪರಿಹಾರ

**ಯಳಂದೂರು:** ಅಂಬಳೆ ಗ್ರಾಮ ಪಂಚಾಯಿತಿಯಲ್ಲಿ ನರೇಗಾ ಸೇರಿದಂತೆ ಇತರೆ ಸಮಸ್ಯೆಗಳಿಗೆ ಶೀಘ್ರದಲ್ಲೇ ಪರಿಹಾರ ಒದಗಿಸಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೌತ್ ತಿಳಿಸಿದರು.

ಅವರು ಗುರುವಾರ ತಾಲೂಕಿನ ಅಂಬಳೆ ಗ್ರಾಮದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ನಡೆದ ಸಾರ್ವಜನಿಕರ ಕುಂದು ಕೊರತೆ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.



ಪಂಚಾಯಿತಿಯಲ್ಲಿ ನರೇಗಾ ಕಾಮಗಾರಿಗಳು ಸರಿಯಾಗಿ ನಡೆಯುತ್ತಿಲ್ಲ. ಮೂಲ ಸಮಸ್ಯೆಗಳ ನಿವಾರಣೆಗೆ ಸಂಬಂಧಪಟ್ಟವರು ಸಹಕರಿಸುತ್ತಿಲ್ಲ ಎಂದು ಕೆಲವು ಸಾರ್ವಜನಿಕರು ದೂರಿದರು. ಈ ಬಗ್ಗೆ ಮಾತನಾಡಿದ ಸಿಇಒ ಈ ಪಂಚಾಯಿತಿಯಲ್ಲಿ ಬೀದಿ ದೀಪ, ರಸ್ತೆ, ಚರಂಡಿ, ನರೇಗಾ ಕಾಮಗಾರಿ, ಗ್ರಂಥಾಲಯಕ್ಕೆ ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಪಟ್ಟ ಪುಸ್ತಕಗಳನ್ನು ಇಡುವುದೂ ಸೇರಿದಂತೆ 21 ಅರ್ಜಿಗಳು ಬಂದಿದೆ. ಈ ಎಲ್ಲಾ ಸಮಸ್ಯೆಗಳನ್ನು ಅದಷ್ಟು ಬೇಗ ಪರಿಹರಿಸಲು ನಾನು ಸಂಬಂಧಪಟ್ಟ ನರೇಗಾ ಎಡಿ, ತಾಪಂ ಇಒ ಹಾಗೂ ಗ್ರಾಪಂ ಪಿಡಿಒಗೆ ಮಾಹಿತಿ ನೀಡುತ್ತೇನೆ ಎಂದರು.

ಇದಕ್ಕೆ ಪಿಡಿಒ ಸಿ.ಎನ್. ಕಾವ್ಯ ರವರಿಗೆ ಈ ಬಗ್ಗೆ ಸ್ಪಷ್ಟನೆ ನೀಡುವಂತೆ ತಿಳಿಸಿದರು. ಇದಕ್ಕೆ ಉತ್ತರಿಸಿದ ಪಿಡಿಒ ನನಗೆ ಕೂಲಿ ಬೇಕು ಎಂದು ಜಾಬ್ ಕಾರ್ಡ್ ಪಡೆದಿರುವ ಕೂಲಿ ಕಾರ್ಮಿಕರು ನಮೂನೆ 6 ರಲ್ಲಿ ಅರ್ಜಿಯನ್ನು ಸಲ್ಲಿಸಿಲ್ಲ. ಅವರು ಅರ್ಜಿಯನ್ನು ಕೊಟ್ಟರೆ ಕೂಡಲೇ ಅವರಿಗೆ ಕೂಲಿ ನೀಡಲಾಗುವುದು. ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಎಲ್ಲಾ ಗ್ರಾಮಗಳಲ್ಲೂ ಕಾಮಗಾರಿಗಳಿದ್ದು ಕೂಡಲೇ ಕ್ರಮ ಬದ್ಧವಾಗಿ ಅರ್ಜಿ ನೀಡಿದರೆ ಕೂಲಿ ನೀಡಲಾಗುವುದು ಎಂದರು.

ಗ್ರಾಪಂ ಅಧ್ಯಕ್ಷ ನಂಜುಂಡಸ್ವಾಮಿ ಉಪಾಧ್ಯಕ್ಷೆ ಮಹಾದೇವಮ್ಮ, ಸದಸ್ಯರಾದ ಮಹದೇವಸ್ವಾಮಿ, ರಾಣಿ, ಸಿದ್ದನಾಯಕ, ರಾಜಣ್ಣ ಇಒ ಉಮೇಶ್, ಸ್ವಾಮಿ, ರೇವಣ್ಣ ಸಿಇಒ ಆಪ್ತ ಕಾರ್ಯದರ್ಶಿ ಕೆ. ಭರತ್‌ರಾಜ್ ನರೇಗಾ ಎಡಿ ರಾಧಾ, ಕಾರ್ಯದರ್ಶಿ ಪುಟ್ಟರಾಜು, ನಂದಿನಿ ಮುಖಂಡರಾದ ಕುಮಾರ್, ನಿಂಗರಾಜು ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಪಂಚಾಯಿತಿ ವ್ಯಾಪ್ತಿಯ ಸಾರ್ವಜನಿಕರು ಹಾಜರಿದ್ದರು.

# ಬಿಕ್ಕೋಡು ಗ್ರಾಮಸ್ಥರ ಅಳಲು

**ಬೇಲೂರು:** ಮಲೆನಾಡ ಭಾಗದಲ್ಲಿ ಕಾಡಾನೆಗಳ ಹಾವಳಿ ಮಿತಿಮರಿದೆ. ಬಿಕ್ಕೋಡು ಸುತ್ತಮುತ್ತ ಆನೆಗಳು ಪ್ರತಿನಿತ್ಯ ತೋಟದೊಳಗಷ್ಟೇ ಅಲ್ಲದೆ, ಗ್ರಾಮದೊಳಕ್ಕೂ ಪ್ರವೇಶಿಸಿ ಉಪಟಳ ನೀಡುತ್ತಿವೆ. ಬಿಕ್ಕೋಡು ಗ್ರಾಮದಲ್ಲಿ ಪ್ರತಿನಿತ್ಯ ಸಂಜೆ 7 ರಿಂದ 8 ಗಂಟೆ ಸಮಯದಲ್ಲಿ ಆನೆಗಳು ಬಿಕ್ಕೋಡು ಎಸ್ಟೇಟ್ ಬಳಿ ಬೀಡು ಬಿಡುವುದಲ್ಲದೆ, ಗ್ರಾಮದೊಳಕ್ಕೆ ಆಗಮಿಸಿ ಮನೆ ಮುಂದೆ ಇಡಲಾಗಿದ್ದ ಜೋಳ ಇನ್ನಿತರ ವಸ್ತುಗಳ ಹಾಳು ಮಾಡುತ್ತಿದೆ. ಈ ಭಾಗದಲ್ಲಿ ಸುಮಾರು 40 ಎಕರೆಯಷ್ಟು ಜೋಳವನ್ನು ಹಾನಿ ಮಾಡಿದೆ ಎನ್ನುತ್ತಾರೆ ಬೆಳೆಗಾರರು. ಜಗಬೋರನಹಳ್ಳಿ ಪುಟ್ಟಸ್ವಾಮಿ ಎಂಬುವರ ಮನೆಯ ಬಳಿ ಇದ್ದ ಮೋಟಾರ್ ಪಂಪ್, ಪೈಪು, ಬ್ಯಾರೆಲ್ ಇತ್ಯಾದಿಗಳ ಹಾಳುಮಾಡಿದ್ದು ಸುಮಾರು 5 ಲಕ್ಷರೂ. ನಷ್ಟವಾಗಿದೆ ಎನ್ನಲಾಗಿದೆ. ಕಾಫಿ ಬೆಳೆಯಂತೂ ಹೆಚ್ಚಿನದಾಗಿ ಹಾನಿಯಾಗಿದೆ. ತೋಟಕ್ಕೆ ಹೋಗಲು ಹೆದರುವ ಕಾರ್ಮಿಕರು, ಮಾಲೀಕರು, ತೋಟದಿಂದ ಸಂಜೆ ಮನೆಗೆ ಬರಲು ಹೆದರುತ್ತಿದ್ದಾರೆ.

ಆನೆಗಳ ಹಿಡಿದು ಓಡಿಸಲು ಆಗದಿದ್ದರೆ, ಗ್ರಾಮಕ್ಕೆ ಒಂದರಂತೆ ಆನೆಯನ್ನು ದತ್ತು ಕೊಟ್ಟುಬಿಡಿ ನಾವು ದನಗಳೊಂದಿಗೆ ಅದಕ್ಕೂ ಮೇವು ಹಾಕಿ ಸಾಕಿಕೊಳ್ಳುತ್ತೇವೆ. ನಾವು ಬದುಕುವುದಕ್ಕಿಂತ ಸಾಯುವುದೆ ಲೇಸು ಎನ್ನುತ್ತಾರೆ ಮಹೇಶ್ ಅವರು. ಆನೆ ಹಾವಳಿಯಿಂದ ಉಂಟಾದ ನಷ್ಟಕ್ಕೆ ಪರಿಹಾರ ನೀಡಿಲ್ಲ. ನಮ್ಮ ಬದುಕು ಮೂರಾಬಟ್ಟೆಯಾಗಿದೆ. ಆನೆ ಹಾವಳಿ ತಡೆಯುವಂತೆ ಆಗ್ರಹಿಸಿ 29 ರಂದು ಸೋಮವಾರ ಬಿಕ್ಕೋಡಿನಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಗ್ರಾಮ ಪಂಚಾಯಿತಿ ಅಧ್ಯಕ್ಷ ಹೇಮಚಂದ್ರು ತಿಳಿಸಿದರು.



# ಮಹಿಳೆಯ ಪತ್ತೆಗೆ ಮನವಿ

**ಚಿಕ್ಕಬಳ್ಳಾಪುರ:** ತಾಲ್ಲೂಕಿನ ಕಣಿತಹಳ್ಳಿ ನಿವಾಸಿ 26 ವರ್ಷದ ಜ್ಯೋತಿ ವೈ.ವಿ ದೇವನಹಳ್ಳಿ ಬಳಿ ಇರುವ ಅಮೇಜಾನ್ ಕಂಪನಿಯಲ್ಲಿ ಕೆಲಸಕ್ಕೆ ಹೋಗುತ್ತಿದ್ದು, ಆಗಸ್ಟ್ 20 ರಂದು ಮನೆಯಿಂದ ಹೊರಟು ಕಾಣೆಯಾಗಿದ್ದಾರೆ ಎಂದು ಅವರ ಗಂಡ ಎನ್. ವೆಂಕಟೇಶ್ ರವರು ನೀಡಿದ ದೂರಿನ ಮೇರೆಗೆ ಮಹಿಳಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕರ್ನಾಟಕ ಸರ್ಕಾರ

**ಕಾರ್ಯಪಾಲಕ ಇಂಜಿನಿಯರ್‌ರವರ ಕಚೇರಿ,**
**ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಾಮರಾಜನಗರ**

**ಇ-ಪ್ರೊಕ್ಯೂರ್‌ಮೆಂಟ್ ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ:**
**11/2024-25 ದಿನಾಂಕ 23-09-2024(02ನೇ ಕರೆ)**

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಐಟಂವಾರು ಟೆಂಡರ್‌ಗಳನ್ನು ಲೆಕ್ಕ ಶೀರ್ಷಿಕೆ: ನರೇಗಾ ಯೋಜನೆಯಡಿ ಕರೆದಿರುವ ಕಾಮಗಾರಿಗಳನ್ನು KG-1 & KG-2 (Stanrd Tnder Document) ಪ್ರಕಾರ KPPP ಮುಖಾಂತರ ಕರ್ನಾಟಕ ಸಂಗ್ರಹಣೆಯಲ್ಲಿ ಪಾರದರ್ಶಕ ನಿಯಮಗಳು KTPP Act 1999 and KTPP Rule 2000 ರಲ್ಲಿ ಸಿವಿಲ್ ಗುತ್ತಿಗೆದಾರರುಗಳಿಂದ ದ್ವಿ ಲಕೋಟೆ ಪದ್ಧತಿಯಲ್ಲಿ ಕರೆಯಲಾಗಿದೆ. ಅಂದಾಜು ಮೊತ್ತ ರೂ. 479.13 ಲಕ್ಷಗಳ ಒಟ್ಟು 15 ಟೆಂಡರ್ ಆಹ್ವಾನಿಸಲಾಗಿದೆ. ಆನ್‌ಲೈನ್ ಟೆಂಡರ್ ಅಪ್‌ಲೋಡ್ ಮಾಡುವ ದಿನಾಂಕ:25-09-2024. ಕೊನೆಯ ದಿನಾಂಕ: 09-10-2024 ಸಂಜೆ 17.00 ಗಂಟೆಯ ವರೆಗೆ ಹಾಗೂ ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 10-10-2024. ಇನ್ನುಳಿದ ಹೆಚ್ಚಿನ ಮಾಹಿತಿಯನ್ನು KPPP website www.kppp.karnataka.gov.in ನಲ್ಲಿ ಪಡೆಯಬಹುದಾಗಿರುತ್ತದೆ ಹಾಗೂ ಕಚೇರಿ ದೂರವಾಣಿ ಸಂಖೆ: 08226-223019ಕ್ಕೆ ಸಂಪರ್ಕಿಸುವುದು.

**ಸಂ: ವಾಸಾಸಂಇ: ಚಾ.ನಗರ: 299:2024-24**

**ಕಾರ್ಯಪಾಲಕ ಇಂಜಿನಿಯರ್**
**ಪಂಚಾಯತ್ ರಾಜ್ ವಿಭಾಗ ಚಾಮರಾಜನಗರ**

# ಯುವ ದಸರಾ 2024: ಮೈಸೂರಿನಲ್ಲಿ ಹರಿಯಲಿದೆ ಸಂಗೀತ ಸುಧೆ, ಇಳಯರಾಜ-ರೆಹಮಾನ್ ಪ್ರಮುಖ ಆಕರ್ಷಣೆ

ಮೈಸೂರು: ಈ ವರ್ಷ ಮರೆಯಲಾಗದ ಯುವ ದಸರಾಕ್ಕೆ ಮೈಸೂರು ಸಜ್ಜಾಗಿದ್ದು, ಸಂಗೀತ ರಸಸಂಜೆಯಲ್ಲಿ ಸಂಗೀತ ಕ್ಷೇತ್ರದ ದಿಗ್ಗಜ ಕಲಾವಿದರಾದ ಇಳಿಯರಾಜ, ಎ.ಆರ್. ರೆಹಮಾನ್ ಮತ್ತು ಶ್ರೇಯಾ ಘೋಷಾಲ್ ಸೇರಿದಂತೆ ಹಲವರು ಸಂಗೀತ ಸುಧೆ ಹರಿಸಲಿದ್ದಾರೆ.

ಯುವ ದಸರಾ ಸಮಿತಿಯಿಂದ ಅ.6ರಿಂದ 10ರವರೆಗೆ ಯುವ ದಸರಾ ಕಾರ್ಯಕ್ರಮ ಆಯೋಜಿಸಲಾಗಿದೆ. ಅ.6ರಂದು ಅಶ್ವಿನಿ ಪುನೀತ್ ರಾಜ್‌ಕುಮಾರ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ನಾಲ್ಕು ದಿನಗಳ ಕಾಲ ಸಂಜೆ 6ರಿಂದ ಸಂಗೀತ ಕಾರ್ಯಕ್ರಮಗಳು ನಡೆಯಲಿವೆ.

ಅಕ್ಟೋಬರ್ 6ರಂದು ಬಾಲಿವುಡ್ ಹಿನ್ನೆಲೆ ಗಾಯಕಿ ಶ್ರೇಯಾ ಘೋಷಾಲ್, ಅ.7ರಂದು ಸಂಗೀತ ಸಂಯೋಜಕ ರವಿ ಬಸ್ರೂರು, ಅ.8ರಂದು ಖ್ಯಾತ ರಾಪರ್ ಬಾದ್ ಷಾ, ಅ.9ರಂದು ಸಂಗೀತ ನಿರ್ದೇಶಕ ಎ.ಆರ್.ರೆಹಮಾನ್ ಮತ್ತು ಅ.10ರಂದು ಸಂಗೀತ ಸಂಯೋಜಕ, ನಿರ್ದೇಶಕ ಇಳಯರಾಜ ಮತ್ತು ಅವರ ತಂಡ ಪ್ರೇಕ್ಷಕರಿಗೆ ಸಂಗೀತ ರಸಸಂಜೆ ಉಣಬಡಿಸಲಿದ್ದಾರೆ.



ಯುವ ದಸರಾ ಕಾರ್ಯಕ್ರಮಗಳ ವೀಕ್ಷಣೆಗೆ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ. ಸುಮಾರು ಒಂದು ಲಕ್ಷ ಜನ ವೀಕ್ಷಿಸಬಹುದಾಗಿದೆ. ಅಲ್ಲದೇ, ವೀಕ್ಷಣೆಗೆ ಟಿಕೆಟ್ ಆಧರಿತ ಪ್ರತ್ಯೇಕ ಆಸನ ವ್ಯವಸ್ಥೆಯನ್ನೂ ಮಾಡಲಾಗುತ್ತಿದ್ದು, ಆಸನ ಕಾಯ್ದಿರಿಸಲು ಆನ್‌ಲೈನ್ ಮೂಲಕ ಟಿಕೆಟ್ ಮಾರಾಟ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಅಧಿಕೃತ ಜಾಲತಾಣ ತಿತಿತಿ.ಟಥಿಂಡಿಜಜಚಿಚಿಡಿಚಿ.ರಠತ.ಟಿ ಹಾಗೂ ಬುಕ್ ಮೈ ಶೋ ಮೂಲಕ ಸೆ.27ರಿಂದ ಟಿಕೆಟ್ ಖರೀದಿಸಬಹುದು. ಮೈಸೂರಿನಲ್ಲಿ ದಸರಾ 'ಯುವ ಸಂಭ್ರಮ'ದಲ್ಲಿ ವಿದ್ಯಾರ್ಥಿಗಳು ಪ್ರದರ್ಶನ ನೀಡಿದರು.

ಕಾರ್ಯಕ್ರಮ ವೀಕ್ಷಕರಿಗೆ ಕಾಯ್ದಿರಿಸಲಾಗುವ ವೀಕ್ಷಕರ ಗ್ಯಾಲರಿ-1ರ ವೇದಿಕೆ ಸಮೀಪದ ಟಿಕೆಟ್ ಬೆಲೆ ರೂ.8,000 ಹಾಗೂ ವೀಕ್ಷಕರ ಗ್ಯಾಲರಿ-2 ಕ್ಕೆ ರೂ.5,000 ನಿಗದಿಪಡಿಸಲಾಗಿದೆ. ಒಂದು ಟಿಕೆಟ್‌ನಲ್ಲಿ ಒಬ್ಬರಿಗೆ ಮಾತ್ರ ಪ್ರವೇಶಾವಕಾಶ ನೀಡಲಾಗುತ್ತಿದೆ. ಪ್ರತೀ ವರ್ಷ ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಯುವ ದಸರಾ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿತ್ತು. ಆದರೆ, ಈ ಬಾರಿ ಕಾರ್ಯಕ್ರಮವನ್ನು ಇನ್ನಷ್ಟು ಅದ್ದೂರಿಯಾಗಿ ಆಚರಿಸುವ ದೃಷ್ಟಿಯಿಂದ ಲಲಿತಾದ್ರಿಪುರ ಮತ್ತು ಉತ್ತನಹಳ್ಳಿ ನಡುವಿನ ಖಾಲಿ ಜಮೀನಿನಲ್ಲಿ ಆಯೋಜಿಸಲಾಗುತ್ತಿದೆ.

ಸುಮಾರು 100 ಎಕರೆಯಷ್ಟು ಕೃಷಿ ಭೂಮಿಯನ್ನು ಕಾರ್ಯಕ್ರಮಕ್ಕೆ ಬಳಸಿಕೊಳ್ಳಲಾಗುತ್ತಿದ್ದು, 1 ಲಕ್ಷ ಮಂದಿಗೆ ಆಸನದ ವ್ಯವಸ್ಥೆ ಮಾಡಲಾಗುತ್ತಿದೆ. ಈ ನಡುವೆ ಯುವ ದಸರಾ ಕಾರ್ಯಕ್ರಮದ ಸ್ಥಳವನ್ನು ಬದಲಾಯಿಸಿರುವ ಸಂಬಂಧ ಪರ ಹಾಗೂ ವಿರೋಧ ಚರ್ಚೆಗಳು ಆರಂಭವಾಗಿವೆ. ನಗರದ ಹೊರವಲಯದ ಒಂದು ಮೂಲೆಯಲ್ಲಿ ಕಾರ್ಯಕ್ರಮ ನಡೆದರೆ ಓಡಾಟಕ್ಕೆ ತೊಂದರೆ ಆಗಲಿದೆ ಎಂದು ಕೆಲವರು ಬೇಸರ ವ್ಯಕ್ತಪಡಿಸುತ್ತಿದ್ದಾರೆ. ನಗರದ ಹೃದಯ ಭಾಗದಲ್ಲಿ ಕಾರ್ಯಕ್ರಮ ನಡೆದರೆ ಅನುಕೂಲ ಹೆಚ್ಚು, ಬರುವವರಿಗೆ ಬೇಕಾದ ಊಟೋಪಚಾರ ಸೇರಿದಂತೆ ಸಕಲೆಂಟು ಸೌಲಭ್ಯಗಳು ಸಿಗುತ್ತವೆ. ಆದರೆ, ಕಾರ್ಯಕ್ರಮ ವೀಕ್ಷಣೆಗೆ ಹೊರವಲಯಕ್ಕೆ ಹೋಗುವುದು ಕಷ್ಟ. ವೀಕ್ಷಕರಿಗೆ ಬೇಕಾದ ಮೂಲ ಸೌಕರ್ಯಗಳೂ ಇರುವುದಿಲ್ಲ. ಅದರಲ್ಲೂ ಮಹಿಳೆಯರ ಓಡಾಟ ಹಾಗೂ ಸುರಕ್ಷತೆ ದೃಷ್ಟಿಯಿಂದ ಮಹಾರಾಜ ಕಾಲೇಜು ಮೈದಾನವೇ ಕಾರ್ಯಕ್ರಮಕ್ಕೆ ಉತ್ತಮ ಎಂದು ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ. ಇನ್ನೂ ಕೆಲವರು ವಿಶಾಲವಾದ ಪ್ರದೇಶವಾದ ಕಾರಣ ಟ್ರಾಫಿಕ್ ಸಮಸ್ಯೆ ಉದ್ಭವಿಸಲ್ಲ. ಸಾವಿರಾರು ಕಾರು, ಬೈಕ್‌ಗಳ ಪಾರ್ಕಿಂಗ್ ವ್ಯವಸ್ಥೆ ಮಾಡಬಹುದು. ಲಕ್ಷ ಮಂದಿ ಕಾರ್ಯಕ್ರಮ ವೀಕ್ಷಣೆ ಮಾಡಿದರೂ ಜನದಟ್ಟಣೆ ಆಗುವುದಿಲ್ಲ ಎಂದು ಹೇಳುತ್ತಿದ್ದಾರೆ.

## ರಾಜ್ಯದ 14 ಜಿಲ್ಲಾಸ್ಪತ್ರೆಗಳಲ್ಲಿ ಸಿಟಿ, ಎಂಆರ್‌ಐ ಸ್ಕ್ಯಾನಿಂಗ್ ಸೇವೆಗೆ ಅನುದಾನದ ಕೊರತೆಯಿಲ್ಲ

**ಬೆಂಗಳೂರು:** ರಾಜ್ಯದಲ್ಲಿ 14 ಜಿಲ್ಲಾಸ್ಪತ್ರೆಗಳಲ್ಲಿ ಸಿಟಿ ಸ್ಕ್ಯಾನ್ ಹಾಗೂ ಎಂಆರ್‌ಐ ಸ್ಕ್ಯಾನಿಂಗ್ ಸೇವೆಗಳು ಸ್ಥಗಿತಗೊಂಡಿವೆ ಎಂಬುದು ಸತ್ಯಕ್ಕೆ ದೂರವಾದ ಸಂಗತಿ ಎಂದು ಆರೋಗ್ಯ ಇಲಾಖೆ ಸ್ಪಷ್ಟನೆ ನೀಡಿದೆ.

ಈ ಕುರಿತು ಮಾಧ್ಯಮಗಳಲ್ಲಿ ವರದಿ ಬಂದ ಹಿನ್ನೆಲೆಯಲ್ಲಿ ತಕ್ಷಣ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳುವಂತೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಆರೋಗ್ಯ ಇಲಾಖೆ ಹಿರಿಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು. ಈ ಬಗ್ಗೆ ಸ್ಪಷ್ಟನೆ ನೀಡಿರುವ ಆರೋಗ್ಯ ಇಲಾಖೆ ಮಾಧ್ಯಮಗಳಲ್ಲಿ ಬಂದಿರುವ ವರದಿ ನಿರಾಧಾರ ಎಂದಿದೆ.

ರಾಜ್ಯದಲ್ಲಿ ಸಿಟಿ ಮತ್ತು ಎಂಆರ್‌ಐ ಸ್ಕ್ಯಾನಿಂಗ್ ಸೇವೆಗಳಿಗೆ ಅನುದಾನದ ಕೊರತೆಯಿದೆ ಎಂಬ ಮಾಧ್ಯಮ ವರದಿಗಳು ಆಧಾರ ರಹಿತವಾಗಿದೆ. ಸಿಟಿ ಮತ್ತು ಎಂಆರ್‌ಐ ಸ್ಕ್ಯಾನಿಂಗ್ ಸೇವೆಗಳಿಗೆ ಅಗತ್ಯವಿರುವ 63.49 ಕೋಟಿ ರೂ. ಅನುದಾನ ಆರೋಗ್ಯ ಇಲಾಖೆಯ ಬಳಿ ಲಭ್ಯವಿದ್ದು, ಯಾವುದೇ ರೀತಿಯ ಅನುದಾನದ ಕೊರತೆಯಾಗಿಲ್ಲ ಎಂದು ಇಲಾಖೆ ಸ್ಪಷ್ಟನೆ ನೀಡಿದೆ.

ರಾಜ್ಯದಲ್ಲಿ ಒಟ್ಟು 3 ಸಂಸ್ಥೆಗಳು ಸಿಟಿ ಮತ್ತು ಎಂಆರ್‌ಐ ಸ್ಕ್ಯಾನಿಂಗ್ ಸೇವೆಗಳನ್ನು ಒದಗಿಸುತ್ತಿವೆ. ಅದರಲ್ಲಿ ಕೃಷ್ಣ ಡಯಾಗ್ನೋಸ್ಟಿಕ್ ಸಂಸ್ಥೆಯು ಬಿಲ್ ಪಾವತಿಗಾಗಿ ನೀಡಿದ ದಾಖಲಾತಿಗಳಲ್ಲಿ ಮಾಹಿತಿ ಕೊರತೆ ಕಂಡುಬಂದ ಹಿನ್ನೆಲೆಯಲ್ಲಿ ವಿವರಣೆ ಕೇಳಲಾಗಿದೆ. ಜೂನ್ ಜುಲೈ 2 ತಿಂಗಳುಗಳ ಬಿಲ್ ಪಾವತಿಯಲ್ಲಿ ಮಾತ್ರವೇ ವಿಳಂಬವಾಗಿದೆ. ಉಳಿದ ಸಂಸ್ಥೆಗಳ ಬಿಲ್ ಪಾವತಿಯಲ್ಲಿ ಯಾವುದೇ ಬಾಕಿ ಇರುವುದಿಲ್ಲ ಎಂದು ಆರೋಗ್ಯ ಇಲಾಖೆ ಸ್ಪಷ್ಟಪಡಿಸಿದೆ.

ಇಲಾಖೆ ಕೇಳಿರುವ ಪೂರಕ ಮಾಹಿತಿಯನ್ನ ಕೃಷ್ಣ ಡಯಾಗ್ನೋಸ್ಟಿಕ್ ಸಂಸ್ಥೆ (ಏಡಿಟಿಚಿಚಿ ಆಚಿರಟಿಠಣಥಿ) ಒದಗಿಸಿದ ತಕ್ಷಣ ಬಾಕಿ ಬಿಲ್ ಪಾವತಿಗೆ ಕ್ರಮ ಕೈಗೊಳ್ಳಲಾಗುವುದು. ಈ ಸಂಸ್ಥೆಯಿಂದ ಆಗಿರುವ ಸಿಟಿ ಮತ್ತು ಎಂಆರ್‌ಐ ಸ್ಕ್ಯಾನಿಂಗ್ ಸೇವೆಗಳ ವ್ಯತ್ಯಯವನ್ನು ಸರಿಪಡಿಸಲು ಬದಲಿ ಕ್ರಮವನ್ನೂ ಈಗಾಗಲೇ ಕೈಗೊಳ್ಳಲಾಗಿದೆ. ಈ ಕೂಡಲೇ ಸಿಟಿ ಮತ್ತು ಎಂಆರ್‌ಐ ಸ್ಕ್ಯಾನಿಂಗ್ ಸೇವೆಗಳನ್ನು ಪುನರಾರಂಭಿಸಲು ಸಂಸ್ಥೆಯ ಅಧಿಕಾರಿಗಳಿಗೆ ಸೂಚಿಸಲಾಗಿದ್ದು, ವ್ಯತ್ಯಯ ಕಂಡುಬಂದಲ್ಲಿ ಕೃಷ್ಣ ಡಯಾಗ್ನೋಸ್ಟಿಕ್ ಸಂಸ್ಥೆಯ ವಿರುದ್ಧ ಇಲಾಖೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಇಲಾಖೆ ತನ್ನ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.



# ಕೋಲಾರದಲ್ಲಿ ದೇವರಾಜು ಅರಸು ಸ್ಪರ್ಧಾತ್ಮಕ ಪರೀಕ್ಷೆಗಳ ಅಧ್ಯಯನ ಕೇಂದ್ರಕ್ಕೆ ಚಾಲನೆ

**ಕೋಲಾರ:** ಕೊನೆಗೂ ಜಿಲ್ಲೆಯ ಸ್ಪರ್ಧಾಕಾಂಕ್ಷೆಗಳಿಗೆ ಒಂದು ಸಂತೋಷದ ಸುದ್ದಿ. ಕೋಲಾರ ಜಿಲ್ಲೆಯಲ್ಲಿ ಐಎಎಸ್, ಕೆಎಎಸ್ ಮತ್ತು ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆಯುವ ಸಲುವಾಗಿ ಜಿಲ್ಲೆಯ ಸಾವಿರಾರು ವಿದ್ಯಾರ್ಥಿಗಳು ಲಕ್ಷಗಟ್ಟಲೆ ಹಣವನ್ನು ಸುರಿದು ಬೆಂಗಳೂರಿನ ಕೇಂದ್ರಗಳಲ್ಲಿ ತರಬೇತಿ ಪಡೆಯುತ್ತಿರುವುದು ಎಲ್ಲರಿಗೂ ತಿಳಿದ ವಿಷಯವಾಗಿದೆ. ಈ ನಿಟ್ಟಿನಲ್ಲಿ ಜಿಲ್ಲೆಯ ಸ್ಪರ್ಧಾಕಾಂಕ್ಷೆಗಳಿಗೆ ಒಂದು ಉತ್ತಮ ಗುಣಮಟ್ಟದ ಮತ್ತು ಉಚಿತ ತರಬೇತಿಯನ್ನು ಜಿಲ್ಲೆಯಲ್ಲಿ ಏಕೆ ಆರಂಭಿಸಬಾರದು ಎಂಬ ಆಲೋಚನೆಯಿಂದ ಬಂದ ಫಲಪ್ರದವೇ ವಿಷನ್ ಕೋಲಾರ. ಈ ಯೋಜನೆ ಅಡಿಯಲ್ಲಿ ಜಿಲ್ಲೆಯ ಪ್ರತಿಭಾನ್ವಿತ ಆರ್ಥಿಕವಾಗಿ ಹಿಂದುಳಿದವರ ವಿದ್ಯಾರ್ಥಿಗಳಿಗೆ ಜಿಲ್ಲೆಯಲ್ಲಿಯೇ ರಾಜ್ಯದ ಹೆಸರಾಂತ ಸಂಪನ್ಮೂಲ ವ್ಯಕ್ತಿಗಳನ್ನು ಕರೆಸಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ನಿರ್ಮಿಸಲಾಗಿರುವ ಸುಸಜ್ಜಿತ ದಿವಂಗತ ಡಿ. ದೇವರಾಜ ಅರಸು ಸ್ಪರ್ಧಾತ್ಮಕ ಪರೀಕ್ಷೆಗಳ ಅಧ್ಯಯನ ಕೇಂದ್ರ ಪ್ರಾರಂಭಿಸಲಾಗಿದ್ದು, ದೇವರಾಜ್ ಅರಸು ಜನ್ಮದಿನ ಸಂದರ್ಭದಲ್ಲಿ ಕೋಲಾರ ಜಿಲ್ಲೆಯ ಕೋಲಾರ ಶಾಸಕರಾದಂತಹ ಕೊತ್ತೂರು ಮಂಜುನಾಥ್ ಹಾಗೂ ಎಂಎಲ್ಸಿ ಗಳಾದ ಅನಿಲ್ ಕುಮಾರ್ ರವರಿಂದ ಈ ಕೇಂದ್ರವು ಉದ್ಘಾಟನೆಗೊಂಡಿದ್ದು ಇಂದು ಮಾನ್ಯ ಜಿಲ್ಲಾಧಿಕಾರಿಗಳಾದ ಅಕ್ರಂಪಾಷ ಆಗಮಿಸಿ ಪ್ರಾರಂಭಿಸುವ ಸಿದ್ಧತೆಯ ಬಗ್ಗೆ ಪರಿಶೀಲಿಸಿದರು.

ಜಿಲ್ಲಾಧಿಕಾರಿಯವರ ಕನಸಿನ ಕೂಸಾದ ಈ ಯೋಜನೆಯ ಅಕ್ಟೋಬರ್ ಮಾಹೆಯಲ್ಲಿ ಪ್ರಾರಂಭಗೊಳ್ಳಲಿದೆ.

**ಏನಿದು ಯೋಜನೆ:** ಕೋಲಾರ ಜಿಲ್ಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಜಿಲ್ಲೆಯಲ್ಲಿ ಗುಣಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಯನ್ನು ಉಚಿತವಾಗಿ ಆರಂಭಿಸುವುದು. ಜಿಲ್ಲೆಯ ಪ್ರತಿಭಾನ್ವಿತ 70 ವಿದ್ಯಾರ್ಥಿಗಳಿಗೆ ಅವಕಾಶ.

**ಆಯ್ಕೆ ಹೇಗೆ:** ಜಿಲ್ಲೆಯಲ್ಲಿ ಆಸಕ್ತ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ರೋಸ್ಟರ್ ಮತ್ತು ಮೆರಿಟ್ ಪದ್ಧತಿ ಅನ್ವಯ ಪ್ರವೇಶ ಪರೀಕ್ಷೆಯನ್ನು ನಡೆಸಿ 70 ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದು.



**ತರಬೇತಿ ಹೇಗೆ:** ಆಯ್ಕೆಗೊಂಡ ವಿದ್ಯಾರ್ಥಿಗಳಿಗೆ ದೇವರಾಜ್ ಅರಸು ಸ್ಪರ್ಧಾತ್ಮಕ ಪರೀಕ್ಷೆಗಳ ಅಧ್ಯಯನ ಕೇಂದ್ರದಲ್ಲಿ ವಿಶೇಷವಾಗಿ ಸಿದ್ಧಪಡಿಸಲಾಗಿರುವ ಅಧ್ಯಯನ ಕೇಂದ್ರವನ್ನು ಬಳಸಿಕೊಳ್ಳುವುದು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉತ್ತಮವಾದ ಪುಸ್ತಕಗಳನ್ನು ಒಳಗೊಂಡಿರುವ ಗ್ರಂಥಾಲಯ ಬಳಸಿಕೊಳ್ಳುವುದು, ಹಾಗೂ ಪ್ರತಿನಿತ್ಯ ಜಿಲ್ಲೆಯ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸನ್ನು ಕಂಡು ಇರುವಂತಹ ಅಧಿಕಾರಿ ವರ್ಗದವರಾದ ಜಿಲ್ಲಾಧಿಕಾರಿಗಳು ಪೊಲೀಸ್ ವರಿಷ್ಠಾಧಿಕಾರಿಗಳು ತಹಸಿಲ್ದಾರ್ಗಳು, ಜಿಲ್ಲಾ ಮಟ್ಟದ ಮತ್ತು ವಿವಿಧ ತಾಲೂಕು ಮಟ್ಟದ ಅಧಿಕಾರಿಗಳಿಂದ, ಉಪನ್ಯಾಸಕರು ಮತ್ತು ಪ್ರಾಧ್ಯಾಪಕರುಗಳಿಂದ ದಿನನಿತ್ಯ ಮಾರ್ಗದರ್ಶನ ಮತ್ತು ತರಗತಿಗಳನ್ನು ನಡೆಸುವುದು.

ಇದಲ್ಲದೆ ರಾಜ್ಯದ ಹೆಸರಾಂತ ಸ್ಪರ್ಧಾತ್ಮಕ ಪರೀಕ್ಷೆಗಳ ಕೇಂದ್ರಗಳಿಂದ ಸಂಪನ್ಮೂಲ ವ್ಯಕ್ತಿಗಳನ್ನು ಕರೆಸಿ ಸಾಮಾನ್ಯ ಅಧ್ಯಯನ, ಇತಿಹಾಸ ಭೂಗೋಳ, ಮೆಂಟಲ್ ಎಬಿಲಿಟಿ, ತಾರ್ಕಿಕ ಸಾಮರ್ಥ್ಯ, ಪ್ರಚಲಿತ ಘಟನೆಗಳು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆ ಮತ್ತು ಕಾರ್ಯಕ್ರಮಗಳು ಇಂತಹ ಮತ್ತು ಅನೇಕ ವಿಷಯಗಳಿಗೆ ತರಗತಿಗಳನ್ನು ನಡೆಸುವುದು.

ವಿಷನ್ ಕೋಲಾರ ಎಂಬುದು ಜಿಲ್ಲೆಯ ಒಂದು ವಿನೂತನ ಪ್ರಯತ್ನವಾಗಿದ್ದು, ಜಿಲ್ಲೆಯ ಸ್ಪರ್ಧಾಕಾಂಕ್ಷೆಗಳಿಗೆ ಅತ್ಯದ್ಭುತ ಮತ್ತು ಪರಿಣಾಮಕಾರಿ ಉಪಕ್ರಮವಾಗಲಿದೆ. ಇದರಿಂದಾಗಿ ಜಿಲ್ಲೆಯ ಸ್ಪರ್ಧಾ ಕಾಂಶಿ ವಿದ್ಯಾರ್ಥಿಗಳು ರಾಜ್ಯ ಮತ್ತು ಕೇಂದ್ರ ಸರ್ಕಾರದ ಸೇವೆಗಳಲ್ಲಿ ಹೆಚ್ಚೆಚ್ಚು ತೇರ್ಗಡೆಗೊಂಡು ಜಿಲ್ಲೆಯ ಕೀರ್ತಿಪತಾಕೆ ಹಾರಿಸಲಿದ್ದಾರೆ ಎಂಬ ಆಶಾಭಾವನೆಯನ್ನು ಹೊಂದಿದ್ದೇವೆ

ಅಕ್ರಂಪಾಷ ಜಿಲ್ಲಾಧಿಕಾರಿಗಳು. ದೇವರಾಜ್ ಅರಸು ಸ್ಪರ್ಧಾತ್ಮಕ ಪರೀಕ್ಷೆಗಳ ಅಧ್ಯಯನ ಕೇಂದ್ರವು ವರ್ಷದಲ್ಲಿ ನಿರಂತರವಾಗಿ ನಡೆಯಲಿದ್ದು ಮೂರು ತಿಂಗಳಿಗೆ 70 ವಿದ್ಯಾರ್ಥಿಗಳ ಒಂದು ಬ್ಯಾಚ್ನಂತೆ ವರ್ಷದಲ್ಲಿ ಮೂರು ಬ್ಯಾಚ್ಗಳನ್ನು ತರಬೇತಿಗಾಗಿ ಆಯ್ಕೆ ಮಾಡಲಾಗುವುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಯದ ಮುರಳಿರವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಯದ ಗೀತಾ ರವರು ಮಾತನಾಡಿ ದೇವರಾಜ್ ಅರಸು ಸ್ಪರ್ಧಾತ್ಮಕ ಪರೀಕ್ಷೆಗಳ ಅಧ್ಯಯನ ಕೇಂದ್ರವು ರಾಜ್ಯದಲ್ಲಿಯೇ ಪ್ರಥಮ ಪ್ರಯತ್ನವಾಗಿರಲಿದ್ದು ಜಿಲ್ಲೆಯ ಎಲ್ಲಾ ವಿದ್ಯಾರ್ಥಿಗಳು ಬಳಸಿಕೊಳ್ಳಲು ಕೋರಿದರು.

## ನಿವೃತ್ತ ಎಸಿಪಿ ಲೋಕೇಶ್ವರ್ ವಿರುದ್ಧ ಕಾಂಗ್ರೆಸ್ ವಾಗ್ದಾಳಿ

**ತಿಪಟೂರು:** ನಗರದಲ್ಲಿ ಹೆಚ್ಚುತ್ತಿರುವ ಇಸ್ಪೀಟ್ ದಂಧೆ ಮತ್ತು ಮಟ್ಕಾ ದಂಧೆಗೆ ಕಾರಣ ಯಾರು ಎಂಬುದು ಇಡೀ ತಿಪಟೂರು ನಾಗರೀಕರಿಗೆ ಗೊತ್ತಿರುವ ವಿಚಾರ ಎಂದು ಮಾಜಿ ನಗರಸಭಾ ಸದಸ್ಯ ಮಾರನಗೆರೆ ವಿಜಯ್ ಕುಮಾರ್ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಾ, ನಗರದ ಸಂಚಾರಿ ದೀಪದ ನಿರ್ವಹಣೆಯಲ್ಲಿ ವಿಫಲರಾಗಿರುವುದರ ಬಗ್ಗೆ ಮಾತನಾಡಿರುವುದು ಕಾಂಗ್ರೆಸ್ ಪಕ್ಷದಲ್ಲಿ ಸರ್ಕಾರದಲ್ಲಿ ಇದ್ದ ಸಂದರ್ಭದಲ್ಲಿ ಶಾಸಕರನ್ನ ವಿಶ್ವಾಸಕ್ಕೆ ತೆಗೆದುಕೊಂಡು ಅದನ್ನು ಸರಿಪಡಿಸುವುದು ಅವರ ಕರ್ತವ್ಯವಾಗಿತ್ತು. ಆದರೆ ಅದನ್ನು ಬಿಟ್ಟು ಸಂಚಾರಿ ದೀಪದ ನಿರ್ವಹಣೆ ಸರಿಯಾಗಿಲ್ಲ ಎಂದು ಟೀಕಿಸುತ್ತಿರುವುದು ಎಂದು ವಿವರಿಸಿದರು. ಟಿಎಪಿಸಿಎಮ್‌ಎಸ್ ಅಧ್ಯಕ್ಷ ಹೆಚ್.ಬಿ.ನಾಗರಾಜ್ ಮಾತನಾಡಿ ನಗರಕ್ಕೆ ಕುಡಿಯುವ ನೀರಿನ ಯೋಜನೆಯ ಈಚನೂರು ಕೆರೆಗೆ ಯುಜಿಡಿ ಮತ್ತು ಚರಂಡಿ ನೀರು ಸೇರಿ ಕೆರೆಯ ನೀರಿಗೆ ಮಿಶ್ರಣವಾಗುತ್ತಿದೆ ಎಂದು ಹೇಳಿದ ನೀವು ಸುಮಾರು ಎಂಟು ವರ್ಷಗಳಿಂದ ಸಮಸ್ಯೆ ತಲೆದೋರಿದ್ದು, ಈಗ ಮಾತ್ರ ಅದರ ಬಗ್ಗೆ ಚಕಾರ ಎತ್ತುತ್ತಿರುವುದು ಸರಿಯಲ್ಲ ಒಂದು ಪಕ್ಷದಿಂದ ಮತ್ತೊಂದು ಪಕ್ಷಕ್ಕೆ ಪಕ್ಷಾಂತರ ಮಾಡಿರುವವರಿಗೆ ಅದರ ಸಮಸ್ಯೆಯ ಬಗ್ಗೆ ಅರಿವಿರಲಿಲ್ಲವೇ ಎಂದು ವ್ಯಂಗ್ಯವಾಗಿ ಕುಟುಕಿದರು. ಟಿಎಪಿಸಿಎಮ್‌ಎಸ್ ನಿರ್ದೇಶಕ ಮಡೇನೂರು ಶಂಕರಮೂರ್ತಿ ಮಾತನಾಡಿ, ತಾಲೂಕಿನಲ್ಲಿ ನಡೆಯುತ್ತಿರುವ ಕೆಲವು ಅಕ್ರಮ ದಂಧೆಗಳಿಗೆ ಯಾರು ಕಾರಣಕರ್ತರು ಎಂಬುದು ಲೋಕೇಶ್ವರ ರವರಿಗೆ ತಿಳಿದಿದ್ದರೆ, ಅದನ್ನು ಬಹಿರಂಗಪಡಿಸಲಿ ನಮ್ಮ ಶಾಸಕರಿಗೆ ಹೇಳಿ ಕಾನೂನಿನ ಅಡಿಯಲ್ಲಿ ಯಾವ ಶಿಕ್ಷೆಗೆ ಗುರಿ ಪಡಿಸಬೇಕು ಖಂಡಿತ ಮಾಡುತ್ತೇವೆ. ಇನ್ನು ಮುಂದಾದರೂ ತಾವುಗಳು ಒಳ್ಳೆಯ ರೀತಿ ಸಮಾಜಮುಖಿ ಕೆಲಸಕ್ಕೆ ಕೈಜೋಡಿಸಿ ಎಂದರು.

## ಗಂಭೀರ ಆರೋಪಗಳಿರುವಾಗ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಬೇಕು: ಸಂತೋಷ್ ಹೆಗ್ಡೆ

**ಬೆಂಗಳೂರು:** ಸಿಎಂ ಸಿದ್ದರಾಮಯ್ಯರ ವಿರುದ್ಧ ಇಂತಹ ಗಂಭೀರ ಆರೋಪಗಳಿರುವಾಗ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ನಿವೃತ್ತ ಲೋಕಾಯುಕ್ತ ನ್ಯಾ. ಸಂತೋಷ್ ಹೆಗ್ಡೆ ಅಭಿಪ್ರಾಯಪಟ್ಟಿದ್ದಾರೆ. ಮಂಗಳೂರಿನಲ್ಲಿ ಮಾತನಾಡಿದ ಅವರು, ಈ ಹಿಂದೆ ರೈಲ್ವೆ ಸಚಿವರಾಗಿದ್ದ ಲಾಲ್ ಬಹದ್ದೂರ್ ಶಾಸ್ತ್ರಿ ಅಪಘಾತದ ನೈತಿಕ ಹೊಣೆ ಹೊತ್ತು ರಾಜೀನಾಮೆ ಕೊಟ್ಟಿದ್ದರು. ಇದೇ ರೀತಿ ರಾಜೀನಾಮೆ ಕೊಡಬೇಕೋ ಕೊಡಬೇಡವೋ ಅನ್ನೋದು ಸಿಎಂ ಹಾಗೂ ಅಧಿಕಾರಿಗಳಿಗೆ ಬಿಟ್ಟಿದ್ದು. ಕೊಡದೇ ಇದ್ದರೆ ಕಾನೂನಿನಲ್ಲಿ ಯಾವುದೇ ತಪ್ಪಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.



ಈಗ ಅನುಮತಿ ಕೊಟ್ಟಿದ್ದು, ಮುಡಾದ ವಿಚಾರದಲ್ಲಿ ಮಾತ್ರ. ಹೈಕೋರ್ಟ್ ಕೂಡ ಮೇಲ್ನೋಟಕ್ಕೆ ಇದರಲ್ಲಿ ಪುರಾವೆ ಇದೆ ಅಂತಾ ಹೇಳಿದೆ. ಆ ಹಿನ್ನೆಲೆಯಲ್ಲಿ ರಾಜೀನಾಮೆ ಕೊಡಬೇಕು ಅಂತಾ ನನಗೆ ಅನ್ನಿಸುತ್ತಿದೆ. ರಾಜೀನಾಮೆ ಕೊಡಬೇಕು ಅನ್ನೋದು ಈಗ ಅವರಿಗೆ ಬಿಟ್ಟಿದ್ದು ಎಂದು ತಿಳಿಸಿದ್ದಾರೆ. ಅವರು ಆರೋಪಿಯಲ್ಲ ಅಂತಾ ತೀರ್ಪು ಬಂದರೆ ಮತ್ತೆ ಹುದ್ದೆಗೆ ವಾಪಾಸ್ ಬರಬಹುದು. ಹೈಕೋರ್ಟ್ ತೀರ್ಪು ಬರುವ ಮೊದಲು ನಾನು ತಪ್ಪೇ ಮಾಡಿಲ್ಲ ಅಂತಾ ಹೇಳಿದ್ರು. ಹೀಗಾಗಿ ಸದ್ಯ ಅವರು ಹೇಳಿದ್ದು, ಸರಿ ಇಲ್ಲ ಅಂತಾ ಆಯ್ತಲ್ಲ ಎಂದು ಸಂತೋಷ್ ಹೆಗ್ಡೆ ಅಭಿಪ್ರಾಯಪಟ್ಟಿದ್ದಾರೆ. ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಕರ್ನಾಟಕ ಹೈಕೋರ್ಟ್ ಆದೇಶ ಹೊರಡಿಸಿದೆ. ಲೋಕಾಯುಕ್ತ ಪ್ರಕರಣದ ತನಿಖೆ ನಡೆಸಿ ಡಿ.24ರ ಒಳಗೆ ವರದಿ ಸಲ್ಲಿಸಬೇಕು ಎಂದು ಆದೇಶದಲ್ಲಿ ತಿಳಿಸಿದೆ.

## ಪಿಜಿ ಮುಂದೆ ನಿಲ್ಲಿಸಿದ್ದ ಬೈಕ್‌ಗೆ ಬೆಂಕಿ ಹಚ್ಚಿದ್ದ ಆರೋಪಿ ಅರೆಸ್ಟ್

**ಬೆಂಗಳೂರು:** ಪಿಜಿ ಮುಂದೆ ನಿಲ್ಲಿಸಿದ್ದ ಬುಲೆಟ್ ಬೈಕ್‌ಗೆ ಬೆಂಕಿ ಹಚ್ಚಿದ್ದ ಆರೋಪಿಯನ್ನು ಪೀಣ್ಯ ಪೊಲೀಸರು ಬಂಧಿಸಿದ್ದಾರೆ.

ಪುಲ್ಕಿತ್ (25) ಬಂಧಿತ ಆರೋಪಿ. ಈತ ಪೀಣ್ಯಾದ ಹೆಚ್‌ಎಂಟಿ ಲೇಔಟ್‌ನ ಪಿಜಿಯೊಂದರ ಮುಂದೆ ನಿಲ್ಲಿಸಿದ್ದ ಬುಲೆಟ್ ಬೈಕ್‌ಗೆ ಬೆಂಕಿ ಹಚ್ಚಿದ್ದ. ಸೆ.19ರಂದು ಬೈಕ್‌ನಿಂದಲೇ ಪೆಟ್ರೋಲ್ ತೆಗೆದು ಅದೇ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದ. ಇಷ್ಟು ಮಾತ್ರವಲ್ಲದೇ ಬೈಕ್‌ಗೆ ಹೊತ್ತಿಕೊಂಡ ಬೆಂಕಿಯಿಂದಲೇ ಸಿಗರೇಟ್‌ಗೆ ಬೆಂಕಿ ಹಚ್ಚಿ ಧಮ್ ಹೊಡೆದು ಎಸ್ಕೇಪ್ ಆಗಿದ್ದ. ಬುಲೆಟ್ ಬೈಕ್‌ಗೆ ಬೆಂಕಿ ಹೊತ್ತಿಕೊಳ್ಳುತ್ತಿದ್ದಂತೆ ಅಕ್ಕಪಕ್ಕದಲ್ಲಿದ್ದ ಮೂರು ಬೈಕ್‌ಗಳು ಬೆಂಕಿಗೆ ಆಹುತಿಯಾಗಿತ್ತು. ಬೈಕ್ ಬೆಂಕಿಗಾಹುತಿಯಾದ ಬಳಿಕ ಬುಲೆಟ್ ಬೈಕ್ ಸವಾರ ದೀಪಾಂಶು ಎಂಬವರು ಈ ಬಗ್ಗೆ ಪೀಣ್ಯಾ ಪೊಲೀಸರಿಗೆ ದೂರು ನೀಡಿದ್ದರು. ಸದ್ಯ ಬುಲೆಟ್ ಬೈಕ್‌ಗೆ ಬೆಂಕಿ ಹಚ್ಚಿದ್ದ ಪುಲ್ಕಿತ್‌ನನ್ನು ಪೀಣ್ಯ ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಹಲವು ದಿನಗಳಿಂದ ರಾಯಲ್ ಎನ್‌ಫೀಲ್ಡ್ ಬುಲೆಟ್ ಬೈಕ್ ಖರೀದಿಸುವ ಆಸೆಯನ್ನು ಪುಲ್ಕಿತ್ ಹೊಂದಿದ್ದ. ಬುಲೆಟ್ ಖರೀದಿಗೆ ಹಣ ಹೊಂದಿಸಲಿಕ್ಕೆ ಆಗದಿದ್ದಾಗ ಬೇರೆಯವರ ಬುಲೆಟ್ ಬೈಕ್ ಸೌಂಡ್ ಆದರೆ ಕೋಪಗೊಳ್ಳುತ್ತಿದ್ದ. ಬುಲೆಟ್ ಬೈಕ್ ತೆಗೆದುಕೊಳ್ಳುವ ಆಸೆಯಿತ್ತು. ಹಣವಿಲ್ಲದ್ದಕ್ಕೆ ಅದು ಸಾಧ್ಯವಾಗಲಿಲ್ಲ. ಹೀಗಾಗಿ ಕೋಪಬಂದು ಪಿಜಿಗಳ ಮುಂದೆ ನಿಲ್ಲಿಸಿದ್ದ ಬುಲೆಟ್ ಬೈಕ್‌ಗೆ ಬೆಂಕಿ ಹಚ್ಚಿದೆ ಎಂದು ಆರೋಪಿ ತಪ್ಪೊಪ್ಪಿಕೊಂಡಿದ್ದಾನೆ.



## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಮಂಡ್ಯ:** ಮಂಡ್ಯ ಹಿಂದುಳಿದ ವರ್ಗಗಳ ನಿಗಮಗಳ ವತಿಯಿಂದ 2024-25 ನೇ ಸಾಲಿಗೆ ವಿವಿಧ ಯೋಜನೆಗಳಡಿ ಅರ್ಜಿಆಹ್ವಾನಿಸಲಾಗಿದ್ದು, ಅರ್ಜಿಯನ್ನುhttps://sevasindhu.karnataka.gov.inಗ್ರಾಮಒನ್, ಕರ್ನಾಟಕಒನ್, ಬೆಂಗಳೂರು ಒನ್ ಸೇವಾ ಕೇಂದ್ರಗಳಲ್ಲಿ ನಿಗದಿಪಡಿಸಲಾಗಿದ್ದಕೊನೆಯ ದಿನಾಂಕವನ್ನು ಫಲಾಪೇಕ್ಷಿಗಳ ಹಿತದೃಷ್ಟಿಯಿಂದ ಹಾಗೂ ಕೇಂದ್ರಕಛೇರಿಆದೇಶದಂತೆ ಸೆಪ್ಟೆಂಬರ್ 15 ರ ಬದಲಾಗಿಸೆಪ್ಟೆಂಬರ್ 30 ರವರೆಗೆ ವಿಸ್ತರಿಸಲಾಗಿದೆ.

**ವಿಶೇಷ ಸೂಚನೆ:** 2023-24ನೇ ಸಾಲಿನಲ್ಲಿನಿಗಮಗಳ ಯೋಜನೆಗಳಡಿ ಅರ್ಜಿ ಸಲ್ಲಿಸಿ, ಸೌಲಭ್ಯ ಪಡೆಯದೆಇರುವ ಫಲಾಪೇಕ್ಷಿಗಳು ಮತ್ತೊಮ್ಮೆಅರ್ಜಿ ಸಲ್ಲಿಸುವಅಗತ್ಯತೆಇರುವುದಿಲ್ಲ. ಹಿಂದಿನ ವರ್ಷದ ಅರ್ಜಿಗಳನ್ನು ಈ ವರ್ಷಕ್ಕೆ ಪರಿಗಣಿಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿದೂ.ಸಂ: 08232-231804 ಅಥವಾ bcwdcorporations.karnataka.gov.in ಸಂಪರ್ಕಿಸಬಹುದುಎಂದು ಮಂಡ್ಯಜಿಲ್ಲೆ ಡಿ.ಬಿ.ಸಿ.ಡಿ.ಸಿ ಜಿಲ್ಲಾ ವ್ಯವಸ್ಥಾಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿಸಲ್ಲಿಸುವಅವಧಿ ವಿಸ್ತರಣೆ

**ಮಂಡ್ಯ:** ಕರ್ನಾಟಕರಾಜ್ಯ, ಮಹಿಳಾ ಅಭಿವೃದ್ಧಿ ನಿಗಮ ವತಿಯಿಂದಅನು?ಠಾನಗೊಳಿಸುತ್ತಿರುವ 2024-25 ಸಾಲಿನ ಯೋಜನೆಗಳಾದ ಉದ್ಯೋಗಿನಿ ಯೋಜನೆ, ಧನಶ್ರೀ ಯೋಜನೆ (ಹೆಚ್.ಐ.ವಿ ಸೋಂಕಿತ ಮಹಿಳೆಯರಿಗೆ) ಲಿಂಗತ್ವಅಲ್ಪಸಂಖ್ಯಾತರ ಪುನರ್ ವಸತಿಯೋಜನೆ (ಟ್ರಾನ್ಸ್‌ಜೆಂಡರ್ಸ್ ಗಳಿಗೆ)ಹಾಗೂ ಚೇತನಯೋಜನೆ (ದಮನಿತ ಮಹಿಳೆಯರಿಗೆ) ಸೇವಾ ಸಿಂಧು ಪೋರ್ಟಲ್ ನ ಆನ್ಲೈನ್ ನಲ್ಲಿ ಅಳವಡಿಸಲಾಗಿದೆ. ಈ ಯೋಜನೆಗಳಿಗೆ ಅರ್ಜಿದಾರರಿಂದಅರ್ಜಿ ಸ್ವೀಕರಿಸುವ ದಿನವನ್ನು ಸೆಪ್ಟೆಂಬರ್ 30 ರವರೆಗೆ ವಿಸ್ತರಿಸಲಾಗಿದೆಎಂದು ಮಂಡ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರೋತ್ಸಾಹಧನಕ್ಕೆಅರ್ಜಿಆಹ್ವಾನ

**ಮಂಡ್ಯ:** 2024-25ನೇ ಸಾಲಿನ ಬಿ.ಎಸ್ಸಿ ನರ್ಸಿಂಗ್ ಮತ್ತುಜಿ.ಎನ್.ಎಮ್ ನರ್ಸಿಂಗ್ ಗಳಲ್ಲಿ ವ್ಯಾಸಂಗ ವ ಾಡುತ್ತಿರುವಕರ್ನಾಟಕರಾಜ್ಯದಅರ್ಹಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಪ್ರೋತ್ಸಾಹಧನಕ್ಕಾಗಿ ಅರ್ಜಿಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು, ಕರ್ನಾಟಕ ನಿವಾಸಿಯಾಗಿದ್ದು, ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿರಬೇಕು,



ಕುಟುಂಬದ ವಾರ್ಷಿಕಆದಾಯಒಟ್ಟು ರೂ.2.50 ಲಕ್ಷಗಳನ್ನು ಮೀರಿರಬಾರದು. ಅರ್ಜಿಯನ್ನು ನವೆಂಬರ್ 10 ರೊಳಗೆ http://sevasindhu.karnataka.gov.in/Sevasindhu/DepartmentServices ವೆಬ್ ಸೈಟ್ ಮೂಲಕ ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿದೂ.ಸಂ: 08232-297240 ಅಥವಾಮಂಡ್ಯಅಲ್ಪಸಂಖ್ಯಾತರಕಲ್ಯಾಣ ಇಲಾಖೆ ಜಿಲ್ಲಾಕಛೇರಿಯನ್ನುಸಂಪರ್ಕಿಸಬಹುದುಎಂದು ಮಂಡ್ಯಜಿಲ್ಲೆಅಲ್ಪಸಂಖ್ಯಾತರಕಲ್ಯಾಣ ಇಲಾಖೆ ಜಿಲ್ಲಾಅಧಿಕಾರಿಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದುಜನ ಸಂಪರ್ಕ ಸಭೆ

**ಮಂಡ್ಯ:** ಮಂಡ್ಯ ವಿಭಾಗ ವ್ಯಾಪ್ತಿಯಲ್ಲಿರುವ ಮಂಡ್ಯ ಉಪ ವಿಭಾಗ, ಕೊತ್ತತ್ತಿ ಉಪ ವಿಭಾಗ ಮತ್ತುಕೆರಗೋಡು ಉಪ-ವಿಭಾಗದ ವಿದ್ಯುತ್ ಸಮಸ್ಯೆಗಳ ಕುರಿತುಚರ್ಚಿಸಲು ವಿದ್ಯುತ್‌ಗ್ರಾಹಕರಕುಂದುಕೊರತೆ ವಿಚಾರಣೆಮಜನಸಂಪರ್ಕ ಸಭೆಯನ್ನು ಸೆಪ್ಟೆಂಬರ್ 26ರಂದುಗುರುವಾರ ಮಂಡ್ಯ ವೃತ್ತದಅಧೀಕ್ಷಕಇಂಜಿನಿಯರ್‌ರವರಅಧ್ಯಕ್ಷತೆಯಲ್ಲಿ ಮಂಡ್ಯ ವಿಭಾಗಕಛೇರಿಆವರಣದಲ್ಲಿಹಮ್ಮಿಕೊಳ್ಳಲಾಗಿದೆ ಎಂದು ಸೆಸ್ಕ್ ಮಂಡ್ಯ ವಿಭಾಗಕಾರ್ಯನಿರ್ವಾಹಕಇಂಜಿನಿಯರ್ ಶಿವಕುಮಾರ್ ಕೆ.ಎನ್‌ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಕೋಲಾರ:** ಕೋಲಾರ ಜಿಲ್ಲೆಯ, ಮಾಲೂರು ತಾಲ್ಲೂಕು ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಗೆ ನೇಮಕಾತಿ ಮಾಡುವ ವಿಚಾರದಲ್ಲಿ ಕರ್ನಾಟಕ ಕಾನೂನು ಅಧಿಕಾರಿಗಳ ನಿಯಮಗಳು 1977 ನಿಯಮ5 ಮತ್ತು 26(2) ಹಾಗೂ 12(ಎ) (ಬಿ) ಮತ್ತು (ಸಿ) ರನ್ವಯ ಸ್ಥಳೀಯವಾಗಿ ಜಾಹಿರಾತು ನೀಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆದ್ದರಿಂದ ಏಳು ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ವಕೀಲರು ಸೂಕ್ತ ದಾಖಲೆಗಳೊಂದಿಗೆ ಅಕ್ಟೋಬರ್ 10 ರೊಳಗೆ ಜಿಲ್ಲಾಧಿಕಾರಿಗಳ ಕಛೇರಿ ರೂ.ನಂ.ಎಫ್-15 ರಲ್ಲಿ ಅರ್ಜಿ ಸಲ್ಲಿಸಬಹುದುಯೆಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಕೋಲಾರ:** ಕೋಲಾರ ಜಿಲ್ಲೆಯ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಗೆ ನೇಮಕಾತಿ ಮಾಡುವ ವಿಚಾರದಲ್ಲಿ ಕರ್ನಾಟಕ ಕಾನೂನು ಅಧಿಕಾರಿಗಳ ನಿಯಮಗಳು 1977 ನಿಯಮ5 ಮತ್ತು 26(2) ಹಾಗೂ 12(ಎ)(ಬಿ) ಮತ್ತು (ಸಿ) ರನ್ವಯ ಸ್ಥಳೀಯವಾಗಿ ಜಾಹಿರಾತು ನೀಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆದ್ದರಿಂದ ಹತ್ತು ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ವಕೀಲರು ಸೂಕ್ತ ದಾಖಲೆಗಳೊಂದಿಗೆ ಅಕ್ಟೋಬರ್ 10 ರೊಳಗೆ ಜಿಲ್ಲಾಧಿಕಾರಿಗಳ ಕಛೇರಿ ರೂ.ನಂ. ಎಫ್-15ರಲ್ಲಿ ಅರ್ಜಿ ಸಲ್ಲಿಸಬಹುದುಯೆಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿದ್ದರಾಮಯ್ಯ ಪುತ್ರ, ಪತ್ನಿ ವಿರುದ್ಧ ಎಫ್‌ಐಆರ್ ದಾಖಲಿಸಿ: ಲೋಕಾಯುಕ್ತಕ್ಕೆ ಪ್ರದೀಪ್ ಕುಮಾರ್ ದೂರು

**ಮೈಸೂರು:** ಮುಡಾ ಹಗರಣ ಪ್ರಕಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಹೈಕೋರ್ಟ್ ತನಿಖೆಗೆ ಅಸ್ತು ಎಂದ ಬೆನ್ನಲ್ಲೇ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ, ಪುತ್ರ ಡಾ. ಯತೀಂದ್ರ ವಿರುದ್ಧ ತಕ್ಷಣವೇ ಎಫ್‌ಐಆರ್ ದಾಖಲಿಸುವಂತೆ ಒತ್ತಾಯಿಸಿ ದೂರುದಾರರಲ್ಲಿ ಒಬ್ಬರಾದ ಪ್ರದೀಪ್ ಕುಮಾರ್ ಅವರು ಬುಧವಾರ ಲೋಕಾಯುಕ್ತಕ್ಕೆ ದೂರು ನೀಡಿದ್ದಾರೆ.



ಜೆಡಿಎಸ್ ಮುಖಂಡರ ಜೊತೆ ಮೈಸೂರಿನ ಲೋಕಾಯುಕ್ತ ಕಚೇರಿಗೆ ತೆರಳಿದ ಪ್ರದೀಪ್ ಕುಮಾರ್ ಅವರು, ಸಿದ್ದರಾಮಯ್ಯ, ಯತೀಂದ್ರ ಸಿದ್ದರಾಮಯ್ಯ, ಪಾರ್ವತಿ ಸಿದ್ದರಾಮಯ್ಯ, ಮಲ್ಲಿಕಾರ್ಜುನ ಮೇಲೆ ಎಫ್‌ಐಆರ್ ಹಾಕಬೇಕು ಎಂದು ದೂರು ನೀಡಿದರು.

ಇದೇ ವೇಳೆ ಈ ಹಿಂದಿನ ದೂರುಗಳ ಬಗ್ಗೆ ಏನು ಕ್ರಮ ತೆಗೆದುಕೊಂಡಿದ್ದೀರಿ ಎಂಬ ಬಗ್ಗೆ ಹಿಂಬರಹ ನೀಡುವಂತೆ ಪ್ರದೀಪ್ ಕುಮಾರ್ ಒತ್ತಾಯಿಸಿದರು. ಆದರೆ, ಈಗ ಕೊಡಲು ಸಾಧ್ಯವಿಲ್ಲ, ಹಿರಿಯ ಅಧಿಕಾರಿಗಳ ಸಲಹೆ ಪಡೆದು ಹಿಂಬರಹ ಕೊಡುತ್ತೇನೆ ಎಂದು ಲೋಕಾಯುಕ್ತ ಎಸ್‌ಪಿ ತಿಳಿಸಿದ್ದು, ಇದಕ್ಕೆ ಪ್ರದೀಪ್ ಕುಮಾರ್ ಅವರು ಅಸಮಾಧಾನ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬೆಂಬಲಿಸಿ ವಿವಿಧ ಸಂಘಟನೆಗಳ ಸದಸ್ಯರು ಬುಧವಾರ ಬೆಂಗಳೂರಿನಲ್ಲಿ ಮೌನ ಪ್ರತಿಭಟನೆ ನಡೆಸಿದರು,

ಕಾನೂನು ತಜ್ಞರ ಸಲಹೆ ಪಡೆದು ಹಿಂಬರಹ ನೀಡುತ್ತೇವೆ. ಇದುವರೆಗಿನ ತನಿಖಾ ವರದಿಯ ಕುರಿತು ಮಾಹಿತಿ ನೀಡುತ್ತೇವೆ ಎಂದು ಹೇಳಿದ್ದಾರೆ. ನಾನು ಇನ್ನು 3 ದಿನ ಬಿಟ್ಟು ಮತ್ತೆ ಮೈಸೂರಿಗೆ ಬರುತ್ತೇನೆ. ಮೂರು ದಿನದಲ್ಲಿ ಉತ್ತರ ಬಾರದೆ ಇದ್ದರೆ ಮೈಸೂರು ಲೋಕಾಯುಕ್ತ ಎಸ್ ಪಿ ವಿರುದ್ಧ ಕಾನೂನು ಹೋರಾಟ ಮಾಡುತ್ತೇನೆ. ನಮ್ಮ ದೂರಿಗೆ ಹಿಂಬರಹ ನೀಡಲು ಇಷ್ಟೊಂದು ಸಮಯ ಕೇಳುತ್ತಿದ್ದಾರೆ. ಇನ್ನು ತನಿಖೆ ಯಾವ ರೀತಿ ಮಾಡುತ್ತಾರೆ ಎಂಬ ಪ್ರಶ್ನೆ ನಮಗೆ ಕಾಡುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

17ಎ ಅಡಿಯಲ್ಲಿ ತನಿಖಾಧಿಕಾರಿ ಸ್ವತಂತ್ರವಾಗಿ ತನಿಖೆ ಮಾಡಬಹುದು ಎಂದು ಹೇಳಲಾಗಿದೆ. ಈ ಅಂಶದ ಆಧಾರದ ಮೇಲೆ ನನ್ನ ದೂರಿನ ಅನ್ವಯ ಆರೋಪಿಗಳ ವಿರುದ್ಧ ಎಫ್‌ಐಆರ್ ದಾಖಲು ಮಾಡಬಹುದು. ಸಿದ್ದರಾಮಯ್ಯ, ಯತೀಂದ್ರ ಸಿದ್ದರಾಮಯ್ಯ, ಪಾರ್ವತಿ ಸಿದ್ದರಾಮಯ್ಯ, ಮಲ್ಲಿಕಾರ್ಜುನ ಸ್ವಾಮಿ ಸೇರಿದಂತೆ ಇತರ ಅಧಿಕಾರಿಗಳ ಮೇಲೆ ಎಫ್‌ಐಆರ್ ದಾಖಲು ಮಾಡಬೇಕು. ಲೋಕಾಯುಕ್ತ ಅಧಿಕಾರಿಗಳ ನಡೆಯನ್ನ ಗಮನಿಸಿದರೆ ಸಿಎಂ ಅವರ ಒತ್ತಡಕ್ಕೆ ಒಳಗಾದಂತೆ ಕಾಣುತ್ತಿದೆ. ನಾನು ಈ ಬಗ್ಗೆ ಹೈಕೋರ್ಟ್‌ನಲ್ಲಿ ರಿಟ್ ಸಲ್ಲಿಸುವ ಚಿಂತನೆಯಲ್ಲಿದ್ದೇನೆಂದು ತಿಳಿಸಿದರು.

# ಕೊಲೆ ಆರೋಪಿ ತಾಲೂಕು ಕಸಾಪ ಅಧ್ಯಕ್ಷ ಸ್ಥಾನದಿಂದ ತೆರವು ರಾಜ್ಯಾಧ್ಯಕ್ಷ ಆದೇಶ

**ಮಂಡ್ಯ:** ಕೊಲೆ ಆರೋಪಿಯಾಗಿದ್ದ ಕುಮಾರ್ ಎಂಬ ವ್ಯಕ್ತಿಯನ್ನು ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕಸಾಪ ಅಧ್ಯಕ್ಷನನ್ನಾಗಿ ಮಾಡಿದ್ದ ಕನ್ನಡ ಸಾಹಿತ್ಯ ಪರಿಷತ್ ಇದೀಗ ಅಧ್ಯಕ್ಷ ಸ್ಥಾನದಿಂದ ತೆರವು ಮಾಡಿ ಆದೇಶ ಹೊರಡಿಸಿದೆ. ಕಸಾಪ ರಾಜ್ಯಾಧ್ಯಕ್ಷ ಮಹೇಶ್ ಜೋಶಿ ಆದೇಶ ಹೊರಡಿಸಿದ್ದಾರೆ.

ಈ ಬಾರಿ ಸಕ್ಕರೆ ನಾಡು ಮಂಡ್ಯದಲ್ಲಿ ಅಖಿಲ ಭಾರತೀಯ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯುತ್ತಿರುವ ಹಿನ್ನೆಲೆ ಸಿದ್ಧತೆಗೆ ಜಿಲ್ಲೆಯ ತಾಲೂಕು ಅಧ್ಯಕ್ಷರನ್ನು ನೇಮಕ ಮಾಡಲಾಗಿತ್ತು. ಶ್ರೀರಂಗಪಟ್ಟಣ ಶಾಸಕ ರಮೇಶ್ ಬಾಬು ಬಂಡಿಸಿದ್ದೇಗೌಡ ತಮ್ಮ ಆಪ್ತನಾದ ಎಂ.ಬಿ ಕುಮಾರ್ ಅವರನ್ನು ಆಯ್ಕೆ ಮಾಡುವಂತೆ ಶಿಫಾರಸ್ಸು ಮಾಡಿದ್ದರು. ಅದರಂತೆ ಕುಮಾರ್ ನನ್ನು ಶ್ರೀರಂಗಪಟ್ಟಣದ ಅಧ್ಯಕ್ಷನನ್ನಾಗಿಯೂ ಕಸಾಪ ನೇಮಕ ಮಾಡಿತ್ತು. ಕುಮಾರ್ 2015ರಲ್ಲಿ ನಡೆದ ಕೊಲೆ ಪ್ರಕರಣವೊಂದರಲ್ಲಿ 30ನೇ ಆರೋಪಿಯಾಗಿದ್ದು, ಜಾಮೀನಿನ ಮೇಲೆ ಹೊರಗೆ ಇದ್ದಾನೆ. ಯಾವುದೇ ಕ್ರಿಮಿನಲ್ ಹಿನ್ನೆಲೆ ಉಳ್ಳ ವ್ಯಕ್ತಿಗೆ ಕಸಾಪದಲ್ಲಿ ಯಾವ ಹುದ್ದೆಗಳನ್ನು ನೀಡಬಾರದು ಎಂದು ಬೈಲಾದಲ್ಲಿ ಇದೆ. ಹೀಗಿದ್ದರೂ ಕೊಲೆ ಆರೋಪಿಯಾಗಿರುವ ಕುಮಾರ್‌ಗೆ ಶಾಸಕ ರಮೇಶ್ ಬಾಬು ಬಂಡಿಸಿದ್ದೇಗೌಡ ಶಿಫಾರಸ್ಸಿಗೆ ಮಣಿದು ಅಧ್ಯಕ್ಷ ಸ್ಥಾನ ಕೊಡಲಾಗಿದೆ ಎಂದು ವರದಿ ಪ್ರಸಾರವಾಗಿತ್ತು. ಕಸಾಪ ರಾಜ್ಯಾಧ್ಯಕ್ಷ ಮಹೇಶ್ ಜೋಶಿ ಈ ಬಗ್ಗೆ ಪೂರ್ವಪರ ವಿಚಾರ ಮಾಡಿ ಎಂ.ಬಿ ಕುಮಾರ್‌ನನ್ನು ಶ್ರೀರಂಗಪಟ್ಟಣ ತಾಲೂಕು ಅಧ್ಯಕ್ಷ ಸ್ಥಾನದಿಂದ ತೆರವುಗೊಳಿಸಿ ಆದೇಶ ಹೊರಡಿಸಿದ್ದಾರೆ. ಸದ್ಯ ಶ್ರೀರಂಗಪಟ್ಟಣ ಕಸಾಪ ತಾಲೂಕು ಅಧ್ಯಕ್ಷರಾಗಿ ಸಿದ್ದಲಿಂಗಯ್ಯ ಎಂಬುವವರನ್ನು ಆಯ್ಕೆ ಮಾಡಲಾಗಿದೆ.





## ಅಮೆಜಾನ್ ಗ್ರೇಟ್ ಇಂಡಿಯನ್ ಫೆಸ್ಟಿವಲ್

ಅಮೆಜಾನ್ ಜೊತೆಗೆ ಗುರುತಿಸಿಕೊಂಡಿರುವ 50,000ಕ್ಕೂ ಹೆಚ್ಚು ಅಮೆಜಾನ್ ಸಾಮಾಜಿಕ ಮಾಧ್ಯಮಗಳ ಪ್ರಚಾರಕರ್ತರ ಪ್ರಮುಖ ವರ್ಗಗಳಿಗೆ ಸ್ಟ್ಯಾಂಡರ್ಡ್ ಕಮಿಷನ್ ಆದಾಯದ ದರಗಳಲ್ಲಿ ಗಮನಾರ್ಹ ಹೆಚ್ಚಳ ಮಾಡಿರುವುದನ್ನು ಅಮೆಜಾನ್ ಘೋಷಿಸಿದೆ. ಬಹು ನಿರೀಕ್ಷಿತ ಅಮೆಜಾನ್ ಗ್ರೇಟ್ ಇಂಡಿಯನ್ ಫೆಸ್ಟಿವಲ್ಗೆ (ಎಜಿಐಎಫ್) ಇದು ಸಕಾಲಿಕ ಉತ್ತೇಜನ ನೀಡಲಿದೆ. 2024ರ ಸೆಪ್ಟೆಂಬರ್ 27 ರಿಂದ ಅಮೆಜಾನ್ ಪ್ರೈಮ್ ಸದಸ್ಯರು ವಿಶೇಷ ಕೊಡುಗೆಗಳು ಮತ್ತು ರಿಯಾಯ್ತಿಗಳು ಜಾರಿಗೆ ಬರುವ 24-ಗಂಟೆಗಳ ಮುಂಚೆಯೇ ಅವುಗಳ ಪ್ರಯೋಜನ ಪಡೆಯಲಿದ್ದಾರೆ. ಪರಿಷ್ಕೃತಗೊಂಡಿರುವ ಕಮಿಷನ್ ಸ್ವರೂಪವು, ಅಮೆಜಾನ್ ಸಾಮಾಜಿಕ ಮಾಧ್ಯಮಗಳ ಪ್ರಚಾರಕರ್ತರರಿಗೆ ಫ್ಯಾಷನ್, ಸೌಂದರ್ಯ ಮತ್ತು ವೈಯಕ್ತಿಕ ಆರೈಕೆ ಪರಿಕರಗಳು, ಮನೆ, ಅಡುಗೆಮನೆ, ಆಟಿಕೆಗಳು, ಅಮೆಜಾನ್ ಜೊತೆಗೆ ಕೆಲಸ ಮಾಡುವ ಸಕ್ರಿಯ ವಿಷಯ ಸೃಷ್ಟಿಕರ್ತರಿಗೆ ಪುಸ್ತಕಗಳಂತಹ ಜನಪ್ರಿಯ ಆಯ್ಕೆಗಳು ಸೇರಿದಂತೆ ವ್ಯಾಪಕ ಶ್ರೇಣಿಯ ಉತ್ಪನ್ನ ವಿಭಾಗಗಳಲ್ಲಿ 1.5 ರಿಂದ 2 ಪಟ್ಟು ಆದಾಯ ಹೆಚ್ಚಳದವರೆಗೆ ಗಣನೀಯ ಏರಿಕೆ ನೀಡಲಿದೆ. ಇದು ಗರಿಷ್ಠ ಪ್ರಮಾಣದ ಖರೀದಿ ಅವಧಿಯಲ್ಲಿ ಹೆಚ್ಚು ಲಾಭ ಗಳಿಸಲು ವಿಷಯ ಸೃಷ್ಟಿಕರ್ತರಿಗೆ ಅವಕಾಶ ಒದಗಿಸಲಿದೆ.

ಜೊತೆಗೆ ಎಜಿಐಎಫ್ ಸಮಯದಲ್ಲಿ ಹೆಚ್ಚಿದ ಗ್ರಾಹಕರ ಬೇಡಿಕೆಯ ಪ್ರಯೋಜನ ಪಡೆದುಕೊಳ್ಳುವುದಕ್ಕೂ ನೆರವಾಗಲಿದೆ. 20ಕ್ಕೂ ಹೆಚ್ಚು ಉಪ-ವಿಭಾಗಗಳಲ್ಲಿ ಸ್ಟ್ಯಾಂಡರ್ಡ್ ಕಮಿಷನ್ ಆದಾಯದ ದರಗಳಲ್ಲಿ ಒಟ್ಟಾರೆ ಹೆಚ್ಚಳ ಸ್ಟ್ಯಾಂಡರ್ಡ್ ಕಮಿಷನ್ ಆದಾಯದ ದರಗಳಲ್ಲಿ ಹೆಚ್ಚಳ ಕಂಡ ಪ್ರಮುಖ ವಿಭಾಗಗಳು- ಉಡುಪುಗಳು, ಪರಿಕರಗಳು, ಸೌಂದರ್ಯ ಮತ್ತು ವೈಯಕ್ತಿಕ ಆರೈಕೆ ಉತ್ಪನ್ನಗಳು (ಶೇ 12ರವರೆಗೆ), ಮನೆ, ಅಡುಗೆಮನೆ, ಹುಲ್ಲುಹಾಸು ಮತ್ತು ಉದ್ಯಾನ, ಪೀಠೋಪಕರಣಗಳು, ಕ್ರೀಡೆಗಳು (ಶೇ 10ರವರೆಗೆ) ಮತ್ತು ಆಟಿಕೆಗಳು ಮತ್ತು ಪುಸ್ತಕಗಳು - ಶೇ 9ವರೆಗೆ 5,000ವರೆಗೆ ಇರುವ ಉತ್ಪನ್ನದ ಮಾರಾಟ ವೆಚ್ಚ ಹಾಗೂ ಆದಾಯವು ಅಂತಹ ಉತ್ಪನ್ನಗಳ ಖರೀದಿ ಮತ್ತು ವಿಮರ್ಶೆಗೆ ಅವಕಾಶ ಕಲ್ಪಿಸಲಿದೆ, ಗಳಿಸಿದ ವರಮಾನದ ಮೇಲೆ ಶೇ 10ರಿಂದ15ರವರೆಗೆ ಗುರಿ ಆಧಾರಿತ ಉತ್ತೇಜನೆಗಳು ಫ್ಯಾಷನ್, ಸರಕು-ಸರಂಜಾಮು, ಶೂ, ಕೈಗಡಿಯಾರ , ಸೌಂದರ್ಯ ಪ್ರಸಾಧನ, ಗೃಹಾಲಂಕಾರ, ಆಟಿಕೆಗಳು ಮತ್ತು ಪುಸ್ತಕಗಳಿಗೆ ಶೇ 5ರಿಂದ ಶೇ 9ರವರೆಗೆ ಆಭರಣಗಳ ಮೇಲಿನ ಕಮಿಷನ್ ದರಗಳಲ್ಲಿ ಶೇ 2ರಿಂದ ಶೇ 9ರವರೆಗೆ ಹೆಚ್ಚಳ ,ಕ್ರೀಡಾ ಉಪಕರಣಗಳು ಶೇ 2.5 ರಿಂದ ಶೇ 7.5ರವರೆಗೆ ವೈಯಕ್ತಿಕ ಆರೈಕೆ ಪರಿಕರಗಳು ಶೇ 5 ರಿಂದ ಶೇ 12ರವರೆಗೆ ನೀಡಲಾಗಿದೆ.

## ಬಟಾಣಿ ಪರೋಟ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಬಟಾಣಿ (ಬೇಯಿಸಿದ್ದು)- 1 ಬಟ್ಟಲು, ಹಸಿಮೆಣಸಿನ ಕಾಯಿ - 2-3, ಶುಂಠಿ- ಸ್ವಲ್ಪ, ಕೊತ್ತಂಬರಿ ಸೊಪ್ಪು - ಸ್ವಲ್ಪ, ಗೋದಿ ಹಿಟ್ಟು - 2 ಬಟ್ಟಲು, ಜೀರಿಗೆ - ಅರ್ಧ ಚಮಚ, ಗರಂ ಮಸಾಲೆ ಪುಡಿ - ಅರ್ಧ ಚಮಚ, ಉಪ್ಪು- ರುಚಿಗೆ ತಕ್ಕಷ್ಟು, ಎಣ್ಣೆ- ಅಗತ್ಯಕ್ಕೆ ಅನುಗುಣವಾಗಿ

### ಮಾಡುವ ವಿಧಾನ

ಬೇಯಿಸಿ ನೀರು ತೆಗೆದ ಬಟಾಣಿ, ಕೊತ್ತಂಬರಿ ಸೊಪ್ಪು, ಶುಂಠಿ, ಹಸಿಮೆಣಸಿನ ಕಾಯಿ ಹಾಗೂ ನೀರನ್ನು ಮಿಕ್ಸಿ ಜಾರ್'ಗೆ ಹಾಕಿ ನುಣ್ಣಗೆ ರುಬ್ಬಿಕೊಳ್ಳಬೇಕು.

ಪಾತ್ರಯೊಂದಕ್ಕೆ ಗೋದಿ ಹಿಟ್ಟು, ಜೀರಿಗೆ, ಗರಂ ಮಸಾಲೆ ಪುಡಿ, ಉಪ್ಪು ಎಣ್ಣೆ ಹಾಕಿ ಚೆನ್ನಾಗಿ ಕಲಸಿಕೊಂಡು, ನಂತರ ರುಬ್ಬಿಕೊಂಡ ಮಿಶ್ರಣವನ್ನು ಇದಕ್ಕೆ ಹಾಕಿ ಚೆನ್ನಾಗಿ ಮಿಶ್ರಣ ಮಾಡಿ, ಸ್ವಲ್ಪ ಸ್ವಲ್ಪವೇ ನೀರಿ ಹಾಕಿ ಹಿಟ್ಟನ್ನು ತಯಾರು ಮಾಡಿಕೊಳ್ಳಬೇಕು.

ನಂತರ ಚಪಾತಿಯಾಕಾರಕ್ಕೆ ಲಟ್ಟಿಸಿಕೊಂಡು, ಒಲೆಯ ಮೇಲೆ ಹೆಂಚನ್ನು ಇಟ್ಟು ಎಣ್ಣೆ ಹಾಕಿ ಎರಡೂ ಬದಿಯಲ್ಲೂ ಕೆಂಪಗೆ ಸುಟ್ಟರೆ ರುಚಿಕರವಾದ ಬಟಾಣಿ ಪರೋಟ ಸವಿಯಲು ಸಿದ್ಧ.

## ಬಾಕ್ಸ್ ಆಫೀಸ್‌ನಲ್ಲಿ ಧೂಳೆಬ್ಬಿಸಿದ ದೇವರ ಸಿನಿಮಾ





ಬಹುನಿರೀಕ್ಷಿತ ತೆಲುಗು ಸಿನಿಮಾ ದೇವರ ಬಿಡುಗಡೆಯಾಗಿದೆ. ಈ ಚಿತ್ರದ ಜಾಗತಿಕ ಬಾಕ್ಸ್ ಆಫೀಸ್ ಕಲೆಕ್ಷನ್ ಮತ್ತು ಪ್ರಿ ಬುಕ್ಕಿಂಗ್ ಕಲೆಕ್ಷನ್ ನೋಡಿ ಜೂನಿಯರ್ ಎನ್ಟಿಆರ್ ಅಭಿಮಾನಿಗಳು ಉಘೇ ಉಘೇ ಎನ್ನುತ್ತಿದ್ದಾರೆ.

ದೇವರ ಸಿನಿಮಾದ ಮೊದಲ ದಿನದ ಗಳಿಕೆಯೇ 100 ಕೋಟಿ ರೂಪಾಯಿ ದಾಟಲಿದೆ ಎಂದು ಬಾಕ್ಸ್ ಆಫೀಸ್ ಪಂಡಿತರು ಅಭಿಪ್ರಾಯಪಡುತ್ತಿದ್ದಾರೆ. ಈ ಮೂಲಕ ಜಾಗತಿಕ ಬಾಕ್ಸ್ ಆಫೀಸ್ನಲ್ಲಿ ಮೊದಲ ದಿನವೇ 100 ಕೋಟಿ ಗಳಿಕೆ ಮಾಡಿದ ಎರಡನೇ ತೆಲುಗು ಸಿನಿಮಾದ ನಟ ಜೂನಿಯರ್ ಎನ್ಟಿಆರ್ ಆಗಲಿದೆ. ಈ ಹಿಂದೆ ಪ್ರಭಾಸ್ ಇದೇ ದಾಖಲೆ ಮಾಡಿದ್ದರು.

ನಿನ್ನೆ ರಾತ್ರಿಯ ಲೆಕ್ಕದಲ್ಲಿ ನೋಡುವುದಾದರೆ ಭಾರತದಲ್ಲಿ ಒಟ್ಟು 10.74 ಲಕ್ಷ ದೇವರ ಸಿನಿಮಾ ಟಿಕೆಟ್ಗಳು ಅಡ್ವಾನ್ಸಡ್ ಬುಕ್ಕಿಂಗ್ ಆಗಿವೆ. ದೇಶದ ಬಾಕ್ಸ್ ಆಫೀಸ್ನಲ್ಲಿ ಸುಮಾರು 27.52 ಕೋಟಿ ರೂಪಾಯಿ ಅಡ್ವಾನ್ಸಡ್ ಬುಕ್ಕಿಂಗ ಮೂಲಕ ಕಲೆಕ್ಷನ್ ಮಾಡಿದೆ. ಇದು ಆನ್ಲೈನ್ ಬುಕ್ಕಿಂಗ್ನ ಲೆಕ್ಕ ಮಾತ್ರ. ಬ್ಲಾಕ್ ಸೀಟ್ ಬುಕ್ಕಿಂಗ್ ಲೆಕ್ಕ ಇದರಲ್ಲಿ ಇಲ್ಲ. ಬ್ಲಾಕ್ ಸೀಟುಗಳ ಕಲೆಕ್ಷನ್ ಈಗಾಗಲೇ 42.63 ಕೋಟಿ ರೂಪಾಯಿ ತಲುಪಿದೆ ಎಂದು ಟ್ರೇಡ್ ವೆಬ್ಸೈಟ್ ಸಕ್ನಿಲ್ಕ್.ಕಾಂ ವರದಿ ಮಾಡಿದೆ.

ನಿರೀಕ್ಷೆಯಂತೆ ತೆಲುಗು ಮಾರುಕಟ್ಟೆಯಲ್ಲಿ ಕೊರಟಲ ಶಿವ ನಿರ್ದೇಶನದ ದೇವರ ಸಿನಿಮಾದ ಟಿಕೆಟ್ ಬುಕ್ಕಿಂಗ್ ಹೆಚ್ಚಾಗಿದೆ. ಮೊದಲ ದಿನ ಬ್ಲಾಕ್ ಸೀಟ್ ಹೊರತುಪಡಿಸಿ 10.19 ಲಕ್ಷ ಟಿಕೆಟ್ಗಳು ತೆಲುಗು ಮಾರುಕಟ್ಟೆಯಲ್ಲಿ ಬುಕ್ಕಿಂಗ್ ಆಗಿವೆ. ಇದರಿಂದ 26.49 ಕೋಟಿ ರೂಪಾಯಿ ಗ್ರಾಸ್ ಕಲೆಕ್ಷನ್ ಆಗಿದೆ. ಮೊದಲ ದಿನ ಜಾಗತಿಕ ಬಾಕ್ಸ್ ಆಫೀಸ್ನಲ್ಲಿ ಪ್ರಿ ಸೇಲ್ಸ್ ಟಿಕೆಟ್ನಲ್ಲಿ ದೇವರ ಸಿನಿಮಾ ಸುಮಾರು 50 ಕೋಟಿ ರೂಪಾಯಿ ಬಿಸ್ನೆಸ್ ಮಾಡಿದೆ. ವಿದೇಶಿ ಮಾರುಕಟ್ಟೆಯಲ್ಲಿ ಸುಮಾರು 42 ಕೋಟಿ ರೂಪಾಯಿ ಗ್ರಾಸ್ ಕಲೆಕ್ಷನ್ ಮಾಡಿದೆ. ಸಿನಿಮಾ ಪಂಡಿತರ ಪ್ರಕಾರ ಮೊದಲ ದಿನ ದೇವರ ಸಿನಿಮಾದ ಕಲೆಕ್ಷನ್ 100 ಕೋಟಿ ರೂಪಾಯಿ ದಾಟಲಿದೆ. ಮೊದಲ ದಿನವೇ ಹಾಲಿವುಡ್ನ ಈಜಿಪ್ಟಿಯನ್ ಥಿಯೇಟರ್ನಲ್ಲಿ 9 ನಿಮಿಷದಲ್ಲಿ 516 ಸೀಟುಗಳು ಬುಕಕ್ ಆಗಿದ್ದವು. ಅಮೆರಿಕ ಹೊರತುಪಡಿಸಿ ಆಸ್ಟ್ರೇಲಿಯಾ, ಇಂಗ್ಲೆಂಡ್ನಲ್ಲೂ ಸಾವಿರಾರು ದೇವರ ಸಿನಿಮಾದ ಟಿಕೆಟ್ಗಳು ಮಾರಾಟವಾಗಿವೆ. ದೇವರ ಸಿನಿಮಾವು ಜೂನಿಯರ್ ಎನ್ಟಿಆರ್ ನಟಿಸಿದ (ಏಕಾಂಗಿಯಾಗಿ ಹೀರೋ ಆಗಿ ನಟಿಸಿದ) ಅತ್ಯಧಿಕ ಗಳಿಕೆಯ ಮೊದಲ ಸಿನಿಮಾವಾಗಲಿದೆ. ಈ ಸಿನಿಮಾ 30 ದಿನಗಳ ಬಳಿಕ ಓಟಿಟಿಗೆ ಬಾರದು. ಚಿತ್ರಮಂದಿರಗಳಲ್ಲಿಯೇ ಕನಿಷ್ಠ 50 ದಿನ ಪ್ರದರ್ಶನ ವಿಸ್ತರಿಸುವ ಯೋಜನೆಯನ್ನು ಚಿತ್ರತಂಡ ಹಾಕಿಕೊಂಡಿದೆ.

## ಕೊಬ್ಬರಿ ತಿನ್ನುವುದು ಕರುಳಿನ ಆರೋಗ್ಯಕ್ಕೆ ಉತ್ತಮ



### ಹೆಲ್ತ್ ಟಿಪ್ಸ್

ಬೆಳಗ್ಗೆ ಎದ್ದ ತಕ್ಷಣ ಕೊಬ್ಬರಿಯನ್ನು ತಿನ್ನುವುದು ನಿಮ್ಮ ಕರುಳಿನ ಆರೋಗ್ಯಕ್ಕೆ ಉತ್ತಮವಾಗಿದೆ. ಕಚ್ಚಾ ತೆಂಗಿನ ನಾರು ಮತ್ತು ಆರೋಗ್ಯಕರ ಕೊಬ್ಬುಗಳು ಕರುಳಿನ ಬ್ಯಾಕ್ಟೀರಿಯಾವನ್ನು ಬೆಂಬಲಿಸುತ್ತವೆ ಮತ್ತು ನಿಯಮಿತ ಜೀರ್ಣಕ್ರಿಯೆಯನ್ನು ಉತ್ತೇಜಿಸುತ್ತವೆ. ತೆಂಗಿನಕಾಯಿಯಲ್ಲಿ ಹೆಚ್ಚಿನ ಫೈಬರ್ ಅಂಶವಿದ್ದು ಮಲಬದ್ಧತೆಯನ್ನು ತಡೆಯಲು ಸಹಾಯ ಮಾಡುತ್ತದೆ ಮತ್ತು ಕರುಳಿನ ಚಲನೆಯನ್ನು ಉತ್ತೇಜಿಸುತ್ತದೆ.

ಹಸಿ ತೆಂಗಿನಕಾಯಿಯಲ್ಲಿರುವ ಮಧ್ಯಮ ಸರಪಳಿ ಟ್ರೈಗ್ಲಿಸರೈಡ್ಗಳು ದೀರ್ಘಕಾಲೀನ ಶಕ್ತಿಯನ್ನು ಒದಗಿಸುತ್ತದೆ. ಅವು ಮಾನಸಿಕ ಸ್ಪಷ್ಟತೆಗೆ ಸಹಾಯ ಮಾಡಬಹುದು ಮತ್ತು ಗೊಂದಲ ಮತ್ತು ಮೆದುಳಿನ ಮಂಜಿನಂತಹ ಪರಿಸ್ಥಿತಿಗಳನ್ನು ತಡೆಯಬಹುದು. ತೆಂಗಿನಕಾಯಿ ತಿನ್ನುವುದರಿಂದ ಎಲೆಕ್ಟ್ರೋಲೈಟ್ ಸಮತೋಲನವನ್ನು ಕಾಪಾಡಿಕೊಳ್ಳುವ ಮೂಲಕ ನಿಮ್ಮ ಸ್ಮರಣೆಯನ್ನು ಹೆಚ್ಚಿಸಬಹುದು.

ಹಸಿ ತೆಂಗಿನಕಾಯಿಯ ಲಾರಿಕ್ ಆಮ್ಲವು ಆಂಟಿಬ್ಯಾಕ್ಟೀರಿಯಲ್, ಆಂಟಿವೈರಲ್ ಮತ್ತು ಆಂಟಿಫಂಗಲ್ ಗುಣಲಕ್ಷಣಗಳನ್ನು ಹೊಂದಿದ್ದು ಅದು ನಿಮ್ಮ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ ಮತ್ತು ಅನಾರೋಗ್ಯವನ್ನು ತಡೆಯಲು ಸಹಾಯ ಮಾಡುತ್ತದೆ. ತೆಂಗಿನಕಾಯಿಯ ಉತ್ಕರ್ಷಣ ನಿರೋಧಕಗಳು ಮತ್ತು ಪಾಲಿಫಿನಾಲ್ಗಳು ಪ್ರತಿರಕ್ಷಣಾ ಕಾರ್ಯವನ್ನು ಬೆಂಬಲಿಸುತ್ತವೆ.

## ಗುಲಾಬಿ ಬಣ್ಣದ ತುಟಿ ಪಡೆಯಲು ಸಲಹೆ

### ಬ್ಯೂಟಿ ಟಿಪ್ಸ್



ತುಟಿಗಳು ಮುಖದ ಸೌಂದರ್ಯವನ್ನು ಹೆಚ್ಚಿಸುತ್ತವೆ. ತುಟಿಗಳು ಗುಲಾಬಿ ಬಣ್ಣದಲ್ಲಿ ಆಕರ್ಷಕವಾಗಿರಬೇಕೆಂದು ಹುಡುಗ, ಹುಡುಗಿ ಎಲ್ಲರೂ ಬಯಸ್ತಾರೆ. ಆಕರ್ಷಕ ತುಟಿ ಪಡೆಯಲು ಬ್ಯೂಟಿ ಪಾರ್ಲರ್ ಸುತ್ತುವವರ ಸಂಖ್ಯೆ ಕಡಿಮೆಯೇನಿಲ್ಲ. ಮಾರುಕಟ್ಟೆಯಲ್ಲಿ ಸಿಗುವ ಲಿಪ್ಸ್ಟಿಕ್ ಸೇರಿದಂತೆ ಬೇರೆ ಬೇರೆ ಉತ್ಪನ್ನಗಳನ್ನು ಬಳಸಿ ತುಟಿ ಸೌಂದರ್ಯವನ್ನು ಮತ್ತಷ್ಟು ಹಾಳು ಮಾಡಿಕೊಳ್ತಾರೆ. ಮಾರುಕಟ್ಟೆಯಲ್ಲಿ ಸಿಗುವ ಉತ್ಪನ್ನಕ್ಕಿಂತ ಮನೆಯಲ್ಲಿರುವ ವಸ್ತುಗಳನ್ನು ಬಳಸಿ ಕಡಿಮೆ ಖರ್ಚಿನಲ್ಲಿ ನಿಮ್ಮ ತುಟಿಗಳ ಸೌಂದರ್ಯವನ್ನು ಹೆಚ್ಚಿಸಿಕೊಳ್ಳಬಹುದು. ಮೃದು ಹಾಗೂ ಕೋಮಲ ತುಟಿಗಳಿಗಾಗಿ ನೀವು ಸ್ವಲ್ಪ ಟೂತ್ಪೇಸ್ಟ್ ತೆಗೆದುಕೊಂಡು ತುಟಿಗಳಿಗೆ ಹಚ್ಚಿ. ಎರಡು ನಿಮಿಷಗಳ ಕಾಲ ಕೈ ಬೆರಳಿನ ಸಹಾಯದಿಂದ ತುಟಿಗಳ ಮೇಲೆ ಮಸಾಜ್ ಮಾಡಿ. ನಂತ್ರ ಟೂತ್ಪೇಸ್ಟ್ ಸಹಾಯದಿಂದ ತುಟಿಗಳನ್ನು ನಿಧಾನವಾಗಿ ಉಜ್ಜಿ. ಹೀಗೆ ಮಾಡಿದಾಗ ತುಟಿಗಳ ಮೇಲಿರುವ ಡೆಡ್ ಸ್ಕಿನ್ ಕಡಿಮೆಯಾಗುತ್ತದೆ. ಒಂದು ವಾರಗಳ ಕಾಲ ಪ್ರತಿದಿನ ಇದನ್ನು ಮಾಡುತ್ತ ಬಂದಲ್ಲಿ ನಿಮಗೆ ಇದ್ರ ಫಲಿತಾಂಶ ಗೊತ್ತಾಗುತ್ತದೆ. ತುಟಿಗಳು ಮೃದುವಾಗಿ ಗುಲಾಬಿ ಬಣ್ಣ ಪಡೆಯುತ್ತವೆ.

## ITC ಸನ್ಫೀಸ್ಟ್ ಬೇಕ್ಡ್ ಕ್ರಿಯೇಷನ್ಸ್ ಬೇಕರಿ ಕೆಫೆ ಅನಾವರಣ

ಐಟಿಸಿ ಸನ್ಫೀಸ್ಟ್ ಬೇಕ್ಡ್ ಕ್ರಿಯೇಷನ್ಸ್, ಜನಪ್ರಿಯ ಶ್ರೇಣಿಯ ಕ್ರೊಸೆಂಟ್ಸ್ ಮತ್ತು ಪುಲ್-ಅಪಾರ್ಟ್ ಬಾಗಲ್ಗಳೊಂದಿಗೆ ಆಹಾರ-ವಿತರಣಾ ಕ್ಷೇತ್ರದಲ್ಲಿ ಬಲವಾದ ಛಾಪು ಮೂಡಿಸಿದ ನಂತರ, ವೈಟ್ಫೀಲ್ಡ್ನಲ್ಲಿರುವ ಫ್ಯಾಬ್ಇಂಡಿಯಾ ಎಕ್ಸ್ಪೀರಿಯನ್ಸ್ ಸ್ಟೋರ್ನಲ್ಲಿ ಇಂದು ತನ್ನ ಮೊದಲ ಬೇಕರಿ ಕೆಫೆಯನ್ನು ಪ್ರಾರಂಭಿಸುವುದಾಗಿ ಘೋಷಿಸಿತು.



ಈ ಹೊಸ ಕೆಫೆಯು ಬ್ರ್ಯಾಂಡ್ನ ಪ್ರಯಾಣದಲ್ಲಿ ಒಂದು ಮಹತ್ವದ ಮೈಲಿಗಲ್ಲನ್ನು ಸೂಚಿಸಲಿದೆ, ಕ್ಲೌಡ್ -ಕಿಚನ್ ಬೇಕರಿಯಿಂದ ಓಮ್ನಿ-ಚಾನೆಲ್ ಬ್ರ್ಯಾಂಡ್ಗೆ, ಬೆಂಗಳೂರಿಗರಿಗೆ ಉನ್ನತ ಬೇಕರಿ ಕೆಫೆ ಅನುಭವವನ್ನು ತರುತ್ತದೆ.

ಚಿಂತನಶೀಲವಾಗಿ ವಿನ್ಯಾಸಗೊಳಿಸಲಾದ ಈ ಕೆಫೆಯು ಕ್ರೋಸೆಂಟ್ಸ್ ಮತ್ತು ಸ್ಯಾಂಡ್ವಿಚ್ಗಳು, ಪುಲ್-ಅಪಾರ್ಟ್ ಬ್ಯಾಗಲ್ಸ್ ಮತ್ತು ಬಾಗಲ್ ಟೋಸ್ಟಿಗಳು, ಡೆಸರ್ಟ್ ಮತ್ತು ಪೇಸ್ಟ್ರಿಗಳು ಮತ್ತು ಸೆಲೆಬ್ರೇಶನ್ ಕೇಕ್ಗಳನ್ನು ಒಳಗೊಂಡಂತೆ ಕ್ಯುರೇಟೆಡ್ ಉತ್ಪನ್ನಗಳ ಜೊತೆಗೆ ಬೆಂಗಳೂರಿಗರಿಗೆ ಪ್ರೀಮಿಯಂ ಪಾಕಶಾಲೆಯ ಅನುಭವವನ್ನು ತರುತ್ತದೆ, ಪ್ರತಿಯೊಂದನ್ನು ಐಟಿಸಿಯ ಪಾಕಶಾಲೆಯ ತಜ್ಞರು ಉನ್ನತ-ಗುಣಮಟ್ಟದೊಂದಿಗೆ ರಚಿಸಿದ್ದಾರೆ. ಪದಾರ್ಥಗಳುಮತ್ತು ಭಾರತೀಯ ಅಂಗುಳಕ್ಕೆ ಅನುಗುಣವಾಗಿರುತ್ತವೆ. ಈ ಬೇಯಿಸಿದ ಭಕ್ಷ್ಯಗಳನ್ನು ಖಖಿಅ ಯ ಸನ್ಬೀನ್ ಗೌರ್ಮೆಟ್ ಕಾಫಿಯೊಂದಿಗೆ ಬಡಿಸಲಾಗುತ್ತದೆ, ಇದು ಭೋಜನಗಾರರ ಪಾಕಶಾಲೆಯ ಅನುಭವವನ್ನು ಹೆಚ್ಚಿಸುತ್ತದೆ.

ಮುಖ್ಯ ಅತಿಥಿಯಾಗಿ ಭಾರತೀಯ ಕ್ರಿಕೆಟಿಗ ಮತ್ತು ಆಹಾರಪ್ರೇಮಿ ಶ್ರೇಯಾಂಕಾ ಪಾಟೀಲ್ ಭಾಗವಹಿಸಿದ್ದರು. ಅವರು ಅಸೋಸಿಯೇಷನ್ನೊಂದಿಗೆ ತಮ್ಮ ಸಂತೋಷವನ್ನು ವ್ಯಕ್ತಪಡಿಸಿದರು, ನಾನು ಹಲವಾರು ಬಾರಿ ಪ್ರಯತ್ನಿಸಿರುವ ಮತ್ತು ಸಂಪೂರ್ಣವಾಗಿ ಪ್ರೀತಿಸುವ ಉತ್ಪನ್ನಗಳ ಬ್ರ್ಯಾಂಡ್ನೊಂದಿಗೆ ಸಂಬಂಧ ಹೊಂದಲು ನನಗೆ ಸಂತೋಷವಾಗಿದೆ! ನನ್ನ ಮೆಚ್ಚಿನವುಗಳು ಫ್ರಾಂಗಿಪೇನ್ ಆಲ್ಮಂಡ್ ಕ್ರೋಸೆಂಟ್, ಡಾರ್ಕ್ ಫ್ಯಾಂಟಸಿ ಚಾಕೊಫಿಲ್ ಕ್ರೋಸೆಂಟ್ ಮತ್ತು ಟ್ರಿನಿಟಿ ಗಾನಾಚೆ ಪೇಸ್ಟ್ರಿ. ಪ್ರತಿಯೊಬ್ಬರೂ ಖಂಡಿತವಾಗಿಯೂ ದನ್ನು ಪ್ರಯತ್ನಿಸಲು ನಾನು ಶಿಫಾರಸು ಮಾಡುತ್ತೇನೆ ಎಂದರು.

ITC ಲಿಮಿಟೆಡ್ನ ಫುಡ್-ಟೆಕ್ ಬಿಸಿನೆಸ್ ಹೆಡ್ ರೋಹಿತ್ ಭಲ್ಲಾ, ಅನಾವರಣದ ಬಗ್ಗೆ ತಮ್ಮ ಉತ್ಸಾಹವನ್ನು ವ್ಯಕ್ತಪಡಿಸಿದರು, ''ಈ ಕೆಫೆ ಕೇವಲ ಹೊಸ ಸ್ಥಳಕ್ಕಿಂತ ಹೆಚ್ಚಾಗಿರುತ್ತದೆ; ಇದು ಐಟಿಸಿ ಸನ್ಫೀಸ್ಟ್ ಬೇಕ್ಡ್ ಕ್ರಿಯೇಷನ್ಸ್ನ ಬದ್ಧತೆಯನ್ನು ಪ್ರತಿನಿಧಿಸುತ್ತದೆ, 'ಬೇಕರಿ ಪ್ರಪಂಚ'ವನ್ನು ಭಾರತೀಯ ಗ್ರಾಹಕರಿಗೆ ತರಲು, ವರ್ಗದ ಅವರ ಅನುಭವವನ್ನು ಉನ್ನತೀಕರಿಸುತ್ತದೆ. ನಮ್ಮ ಅಡಿಂ ಚಿಟಿಣ ಮತ್ತು ಕಣಟಟ-ಂರಿಚಿಡಿಣ ಃಚಿರಜಟ ಈಗಾಗಲೇ ವಿತರಣಾ ಚಾನೆಲ್ ಮೂಲಕ ಉತ್ತಮ ಜನಪ್ರಿಯತೆಯನ್ನು ಗಳಿಸಿವೆ ಮತ್ತು ಈ ಕೆಫೆಯ ಪ್ರಾರಂಭವು ಬೇಕರಿ ವಿಭಾಗದಲ್ಲಿ ಇನ್ನೂ ಅನೇಕ ಉತ್ತೇಜಕ ಆವಿಷ್ಕಾರಗಳನ್ನು ತರುವ ನಮ್ಮ ಯೋಜನೆಗಳಿಗೆ ಪೂರಕವಾಗಿದೆ. ಈ ಹೊಸ ಕೆಫೆಯು ನಗರದ ಊಟದ ದೃಶ್ಯಕ್ಕೆ ಮತ್ತೊಂದು ಸೇರ್ಪಡೆಯಲ್ಲ; ಇದು ಖಖಿಅ ಸನ್ಫೀಸ್ಟ್ ಬೇಕ್ಡ್ ಕ್ರಿಯೇಷನ್ಸ್ನ ವಿಕಸಿಸುತ್ತಿರುವ ದೃಷ್ಟಿ ಮತ್ತು ನಗರದಾದ್ಯಂತ ತನ್ನ ಗ್ರಾಹಕರು ಮತ್ತು ಕೆಫೆ ಉತ್ಸಾಹಿಗಳಿಗೆ ಅಸಾಧಾರಣ ಅನುಭವಗಳನ್ನು ನೀಡುವಲ್ಲಿನ ಸಮರ್ಪಣೆಗೆ ಸಾಕ್ಷಿಯಾಗಿದೆ ಎಂದರು.

30 ಅತಿಥಿಗಳ ಆಸನ ಸಾಮರ್ಥ್ಯದೊಂದಿಗೆ, ಕೆಫೆಯು ನಿಕಟ ಕೂಟ ಮತ್ತು ದೊಡ್ಡ ಆಚರಣೆಗಳಿಗೆ ಪರಿಪೂರ್ಣ ತಾಣವಾಗಿದೆ ಎಂದು ಭರವಸೆ ನೀಡುತ್ತದೆ, ಗ್ರಾಹಕರಿಗೆ ಖಖಿಅ ಸನ್ಫೀಸ್ಟ್ ಬೇಕ್ಡ್ ಕ್ರಿಯೇಷನ್ಸ್ನ ವಿಶೇಷ ಶ್ರೇಣಿಯ ಉತ್ಪನ್ನಗಳಲ್ಲಿ ಪಾಲ್ಗೊಳ್ಳಲು ಸಂತೋಷಕರ ವಾತಾವರಣವನ್ನು ನೀಡುತ್ತದೆ.

ITCಸನ್ಫೀಸ್ಟ್ ಬೇಕ್ಡ್ ಕ್ರಿಯೇಷನ್ಸ್ ತನ್ನ ಬೇಕರಿ ಕೆಫೆಯನ್ನು ಬೆಂಗಳೂರಿನಲ್ಲಿ ಒಉ ರಸ್ತೆ ಮತ್ತು ಜಯನಗರದಲ್ಲಿ ಭವಿಷ್ಯದ ಸ್ಥಳಗಳೊಂದಿಗೆ ವಿಸ್ತರಿಸಲು ಯೋಜಿಸಿದೆ, ಜೊತೆಗೆ ಚೆನ್ನೈಗೆ ಸಂಭಾವ್ಯ ವಿಸ್ತರಣೆಯನ್ನು ಹೊಂದಿದೆ. ಈ ಮುಂಬರುವ ಸ್ಥಳಗಳು ತನ್ನ ಗ್ರಾಹಕರಿಗೆ ಬೇಕರಿ ಅನುಭವವನ್ನು ಹೆಚ್ಚಿಸುವ ಬ್ರ್ಯಾಂಡ್ನ ದೃಷ್ಟಿಯನ್ನು ನಿರ್ಮಿಸುವುದನ್ನು ಮುಂದುವರಿಸುತ್ತದೆ.

ITC ಸನ್ಫೀಸ್ಟ್ ಬೇಕ್ಡ್ ಕ್ರಿಯೇಷನ್ಸ್ । ವಿಳಾಸ: ಫ್ಯಾಬಿಂಡಿಯಾ ಎಕ್ಸ್ಪೀರಿಯನ್ಸ್ ಸ್ಟೋರ್, ಕಾರ್ನರ್ ಹೌಸ್ ಹತ್ತಿರ, ವೈಟ್ಫೀಲ್ಡ್, ಬೆಂಗಳೂರು.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಮಾನಸಿಕ ಕಿರಿಕಿರಿ ಮತ್ತು ಮನಸ್ತಾಪ, ಕೆಲಸ ಕಾರ್ಯಗಳಲ್ಲಿ ಹಿನ್ನಡೆ, ಆಸ್ತಿ ವಿಷಯದಲ್ಲಿ ತಂತ್ರದ ಆತಂಕ, ನೀರು ಮತ್ತು ವಾಹನಗಳಿಂದ ಎಚ್ಚರಿಕೆ.

**ವೃಷಭ:** ಬಾಂಧವರಿಂದ ತೊಂದರೆ, ಪೆಟ್ಟು ಮಾಡಿಕೊಳ್ಳುವ ಸಂಭವ, ಪ್ರಯಾಣದಲ್ಲಿ ಎಚ್ಚರಿಕೆ, ಉದ್ಯೋಗ ಬದಲಾವಣೆಯಿಂದ ಸಮಸ್ಯೆ, ತಂದೆ ಆರೋಗ್ಯದಲ್ಲಿ ವ್ಯತ್ಯಾಸ.

**ಮಿಥುನ:** ಆರ್ಥಿಕ ಸಂಕಷ್ಟ, ಮಾನಸಿಕ ನೋವು, ಕುಟುಂಬದಲ್ಲಿ ಕಲಹ, ಸ್ತ್ರೀಯರಿಂದ ಅನುಕೂಲ.

**ಕಟಕ:** ಪಾಲುದಾರಿಕೆಯಲ್ಲಿ ಅನುಕೂಲ, ಅವಕಾಶ ಕೈತಪ್ಪುವ ಸಂಭವ, ದೃಷ್ಟಿದೋಷ, ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ.

**ಸಿಂಹ:** ಅಧಿಕ ಖರ್ಚು ಮತ್ತು ನಷ್ಟ, ಅನಾರೋಗ್ಯ ಸಮಸ್ಯೆ, ಆತಂಕ ನಿದ್ರಾಭಂಗ, ಬಾಂಧವರೊಂದಿಗೆ ಶತ್ರುತ್ವ.

**ಕನ್ಯಾ:** ಮಕ್ಕಳಿಂದ ಲಾಭ, ಪ್ರೀತಿ-ಪ್ರೇಮದಲ್ಲಿ ಯಶಸ್ಸು, ಮಿತ್ರರಿಂದ ಹಿನ್ನಡೆ, ರಾಜಕಾರಣಿಗಳಿಂದ ಅವಮಾನ.

**ತುಲಾ:** ಉದ್ಯೋಗದಲ್ಲಿ ನಿರಾಸಕ್ತಿ, ತಂತ್ರದ ಭೀತಿ ಮತ್ತು ಸಮಸ್ಯೆ, ನೀರಿನಿಂದ ಸಮಸ್ಯೆ ಎಚ್ಚರಿಕೆ, ಅಪವಾದಗಳು, ಅಧಿಕಾರಿಗಳಿಂದ ನೋವು ಮತ್ತು ನಿರಾಸೆ.

**ವೃಶ್ಚಿಕ:** ತಂದೆ ಆರೋಗ್ಯದಲ್ಲಿ ವ್ಯತ್ಯಾಸ, ದೂರ ಪ್ರಯಾಣ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ, ಕೈಕಾಲುಗಳಿಗೆ ಪೆಟ್ಟು, ಅವಕಾಶಗಳು ಕೈತಪ್ಪುವ ಸನ್ನಿವೇಶ.

**ಧನಸ್ಸು:** ಧನಾಗಮನ, ಉತ್ತಮ ಅವಕಾಶಗಳ ಸೂಚನೆ, ಕುಟುಂಬದಲ್ಲಿ ಆತಂಕ ಸೃಷ್ಟಿ, ಆಹಾರ ವ್ಯತ್ಯಾಸದಿಂದ ಸಮಸ್ಯೆ.

**ಮಕರ:** ದಾಂಪತ್ಯದಲ್ಲಿ ಸಮಸ್ಯೆ, ಮಕ್ಕಳಿಂದ ಬೇಸರ, ಪ್ರೀತಿ ವಿಷಯಗಳು ಬಯಲು, ಕರ್ತವ್ಯದಲ್ಲಿ ಹಿನ್ನಡೆ.=

**ಕುಂಭ:** ಆರೋಗ್ಯದಲ್ಲಿ ವ್ಯತ್ಯಾಸ, ಗುಪ್ತ ಶತ್ರುಗಳಿಂದ ಮೋಸ, ಅಪವಾದಗಳು, ಆರೋಗ್ಯದಲ್ಲಿ ವ್ಯತ್ಯಾಸ.

**ಮೀನ:** ಮಕ್ಕಳ ಜೀವನದಲ್ಲಿ ಏರುಪೇರು, ಸಂತಾನ ಸಮಸ್ಯೆ, ದುಶ್ಚಟಗಳಿಂದ ತೊಂದರೆ, ಅಪವಾದಗಳಿಂದ ಗೌರವಕ್ಕೆ ದಕ್ಕೆ.

## ವಿಶ್ವ ಪ್ರವಾಸೋದ್ಯಮ ದಿನ




ಸೆಪ್ಟೆಂಬರ್ 27ರಂದು ವಿಶ್ವ ಪ್ರವಾಸೋದ್ಯಮ ದಿನವನ್ನು ಆಚರಿಸಲಾಗುತ್ತದೆ. ಪ್ರವಾಸ ಒತ್ತಡವನ್ನು ನಿವಾರಿಸುವ ಮೂಲಕ ಹೊಸತವನ್ನು ನೀಡುತ್ತದೆ.

ಪ್ರವಾಸೋದ್ಯಮವು ವಿಶ್ವದ ಪ್ರಮುಖ ಉದ್ಯಮಗಳಲ್ಲಿ ಒಂದಾಗಿದೆ. ಇದು ಪ್ರವಾಸೋದ್ಯಮದಲ್ಲಿ ಮಾತ್ರವಲ್ಲದೆ ಅದನ್ನು ಸೇವೆ ಮಾಡುವ ವ್ಯವಹಾರಗಳಲ್ಲಿಯೂ ಉದ್ಯೋಗಗಳನ್ನು ಸೃಷ್ಟಿಸುತ್ತದೆ. ಜೊತೆಗೆ ದೇಶಗಳ ಆರ್ಥಿಕತೆಯ ಮೇಲೆ ಗಮನಾರ್ಹ ಪರಿಣಾಮ ಬೀರುತ್ತದೆ. ಪ್ರಪಂಚದ ವಿವಿಧ ಭಾಗಗಳಿಗೆ ಭೇಟಿ ನೀಡುವ ಮೂಲಕ ಪ್ರವಾಸಿಗರು ಸಾಂಸ್ಕೃತಿಕ ಪರಂಪರೆ ಮತ್ತು ನೈಸರ್ಗಿಕ ಪರಿಸರ ವ್ಯವಸ್ಥೆಗಳನ್ನು ಸಂರಕ್ಷಿಸಲು ಸಹಾಯ ಮಾಡುತ್ತಾರೆ. ಪ್ರಪಂಚದಾದ್ಯಂತ ಸಂಸ್ಕೃತಿ ಮತ್ತು ಪರಂಪರೆಯನ್ನು ಸಂರಕ್ಷಿಸುವ ಮತ್ತು ಉತ್ತೇಜಿಸುವಲ್ಲಿ ಪ್ರಯಾಣ ಕ್ಷೇತ್ರದ ಪ್ರಾಮುಖ್ಯತೆಯನ್ನು ಎತ್ತಿ ತೋರಿಸುವುದು. ಸೆಪ್ಟೆಂಬರ್ 27, ವಿಶ್ವ ಪ್ರವಾಸೋದ್ಯಮ ದಿನದ ಮುಖ್ಯ ಉದ್ದೇಶವಾಗಿದೆ.

ವಿಶ್ವಸಂಸ್ಥೆಯ ವರ್ಲ್ಡ್ ಟೂರಿಸಂ ಆರ್ಗನೈಜೇಷನ್ (ಯುಎನ್ಡಬ್ಲ್ಯುಟಿಒ) 1970 ಸೆಪ್ಟೆಂಬರ್ 27ರಂದು ಮೊದಲ ಬಾರಿಗೆ ವಿಶ್ವ ಪ್ರವಾಸೋದ್ಯಮ ದಿನ ಆಚರಿಸಲು ಶಾಸನಗಳನ್ನು ರಚಿಸಿತು. ಯುಎನ್ಡಬ್ಲ್ಯುಟಿಒ 1980 ಸೆಪ್ಟೆಂಬರ್ 27ರಂದು ವಿಶ್ವ ಪ್ರವಾಸೋದ್ಯಮ ದಿನವನ್ನು ಆಚರಿಸಲು ಅಂಗೀಕರಿಸಿತು. ಪ್ರವಾಸೋದ್ಯಮವನ್ನು ಜಾಗತಿಕವಾಗಿ ಪ್ರಚಾರಗೊಳಿಸುವ ಉದ್ದೇಶದಿಂದ ಈ ದಿನವನ್ನು ಆರಂಭಿಸಲಾಗಿದೆ. ಅಂದಿನಿಂದ ಪ್ರತಿ ವರ್ಷ ಆ ದಿನದಂದು ಪ್ರವಾಸೋದ್ಯಮ ದಿನವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಜನವರಿ ಹದಿನೈದು ಭಾರತದ ರಾಷ್ಟ್ರೀಯ ಪ್ರವಾಸೋದ್ಯಮ ದಿನವಾಗಿದೆ.

ವಿಶ್ವ ಪ್ರವಾಸೋದ್ಯಮ ದಿನದ ಉದ್ದೇಶ ಸಾಮಾಜಿಕ ಸಾಂಸ್ಕೃತಿಕ, ರಾಜಕೀಯ ಮತ್ತು ಆರ್ಥಿಕ ಮೌಲ್ಯಗಳ ಮೇಲೆ ಪರಿಣಾಮ ಬೀರುವ ಬಗ್ಗೆ ಜಾಗೃತಿ ಮೂಡಿಸುವುದಾಗಿದೆ. ಕೊರೊನಾ ಕಾರಣ 90% ವಿಶ್ವ ಪರಂಪರೆಯ ತಾಣಗಳನ್ನು ಮುಚ್ಚಲಾಯಿತು. ಇದರಿಂದಾಗಿ ಹಲವಾರು ಜನ ನಿರುದ್ಯೋಗಿಗಳಾದರು. 20201 ರಲ್ಲಿ ಹೆಚ್ಚುವರಿ 32 ಮಿಲಿಯನ್ ಜನರು ತೀವ್ರ ಬಡತನಕ್ಕೆ ತಳ್ಳಲ್ಪಟ್ಟರು. ಗ್ರಾಮೀಣ ಸಮುದಾಯಗಳಲ್ಲಿನ ಯುವಕರು ನಿರುದ್ಯೋಗಿಗಳಾಗಿರುವುದರಿಂದ ಪ್ರವಾಸೋದ್ಯಮ ಕ್ಷೇತ್ರದ ಬಗ್ಗೆ ಜಾಗೃತಿ ಮೂಡಿಸುವುದು ಮುಖ್ಯವಾಗಿದೆ.

# ರಾಜೀನಾಮೆ ನೀಡಲು ನಿರಾಕರಿಸಿದ ಗರ್ಭಿಣಿ ಹಿಂದೂ ಶಿಕ್ಷಕಿ ಮೇಲೆ ಹಲ್ಲೆ

**ಮಗುವಿನ ನಿರೀಕ್ಷೆಯಲ್ಲಿರುವ ಮಹಿಳೆಯನ್ನು ರಾಜೀನಾಮೆ ಸಲ್ಲಿಸುವಂತೆ ಒತ್ತಾಯಿಸಿದ ಆರೋಪ**

**ಬಾಂಗ್ಲಾದೇಶ:** ರಾಜೀನಾಮೆ ನೀಡಲು ನಿರಾಕರಿಸಿದ ಗರ್ಭಿಣಿ ಹಿಂದೂ ಶಿಕ್ಷಕಿ ಮೇಲೆ ಹಲ್ಲೆ ನಡೆಸಿ ಮೆರವಣಿಗೆ ನಡೆಸಿದ ಘಟನೆ ಬಾಂಗ್ಲಾದೇಶದಲ್ಲಿ ನಡೆದಿದೆ. ಗರ್ಭಿಣಿ ಶಿಕ್ಷಕಿ ಶಿಖಾ ರಾಣಿ ರೇ ಅವರು ತಮ್ಮ ಮುಖ್ಯ ಶಿಕ್ಷಕ ಮೊಹಮ್ಮದ್ ಬಿಲಾಲ್ ಅವರ ಒತ್ತಡವನ್ನು ಪ್ರತಿರೋಧಿಸಿದ ನಂತರ ತೀವ್ರ ಅವಮಾನವನ್ನು ಸಹಿಸಿಕೊಳ್ಳಬೇಕಾಯಿತು ಎಂದು ವರದಿಯಾಗಿದೆ. ಬಾಂಗ್ಲಾದೇಶದಲ್ಲಿ ಘಟನೆ ನಡೆದಿದೆ ಎಂದು ಹೇಳಲಾಗಿದೆ. ಈ ಆಘಾತಕಾರಿ ಘಟನೆಯು ಸಮುದಾಯದಾದ್ಯಂತ ಆಕ್ರೋಶಕ್ಕೆ ಕಾರಣವಾಗಿದೆ, ಅನೇಕರು ಈ ಘಟನೆಯನ್ನು ಧಾರ್ಮಿಕ ತಾರತಮ್ಯದ ಸ್ಪಷ್ಟ ಪ್ರಕರಣ ಎಂದು ಖಂಡಿಸಿದ್ದಾರೆ.

ಮಗುವಿನ ನಿರೀಕ್ಷೆಯಲ್ಲಿರುವ ಮಹಿಳೆಯನ್ನು ರಾಜೀನಾಮೆ ಸಲ್ಲಿಸುವಂತೆ ಬಿಲಾಲ್ ಒತ್ತಾಯಿಸಿದ್ದಾನೆ ಎಂದು ಆರೋಪಿಸಲಾಗಿದೆ. ಈ ಅನಗತ್ಯ ಒತ್ತಡಕ್ಕೆ ಕಾರಣ ಹಿಂದೂವಾಗಿ ಅವಳ ಧಾರ್ಮಿಕ ಗುರುತು. ಇದನ್ನು ಪಾಲಿಸಲು ನಿರಾಕರಿಸಿದ ರೇ ತನ್ನ ನಿಲುವನ್ನು ಸಮರ್ಥಿಸಿಕೊಂಡಳು ಮತ್ತು ತನ್ನ ಬೋಧನಾ ಹುದ್ದೆಯನ್ನು ಬಿಡಲು ನಿರಾಕರಿಸಿದಳು. ಅವರು ರಾಜೀನಾಮೆ ನೀಡಲು ನಿರಾಕರಿಸಿದ ನಂತರ, ಪರಿಸ್ಥಿತಿ ಹಿಂಸಾತ್ಮಕ ತಿರುವು ಪಡೆಯಿತು. ಶಿಕ್ಷಕಿ ಅವರ ಮೇಲೆ ಹಲ್ಲೆ ನಡೆಸಲಾಯಿತು ಮತ್ತು ಭಯಾನಕ ಸಾರ್ವಜನಿಕ ಪ್ರದರ್ಶನದಲ್ಲಿ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು ಎಂದು ವರದಿಯಾಗಿದೆ. ಸಾಮಾಜಿಕ ಮಾಧ್ಯಮದಲ್ಲಿ ಕಾಣಿಸಿಕೊಂಡ ವೀಡಿಯೊದಲ್ಲಿ, ಮುಸ್ಲಿಂ ವ್ಯಕ್ತಿಗಳನ್ನು ಒಳಗೊಂಡಿದೆ ಎಂದು ಹೇಳಲಾಗಿದೆ.

# ಅಮೆರಿಕಾದಲ್ಲಿ ಹೆಲೆನ್ ಚಂಡಮಾರುತದ ಅಬ್ಬರ: ವಿಮಾನಗಳ ಹಾರಾಟ ರದ್ದು



**ನ್ಯೂಯಾರ್ಕ್:** ಹೆಲೆನ್ ಚಂಡಮಾರುತವು ಫ್ಲೋರಿಡಾದ ಬಿಗ್ ಬೆಂಡ್ ಪ್ರದೇಶದ ಮೇಲೆ ಪರಿಣಾಮ ಬೀರುತ್ತಿದ್ದು, ರಾಷ್ಟ್ರೀಯ ಚಂಡಮಾರುತ ಕೇಂದ್ರವು ಇದು ಪ್ರಬಲ ವರ್ಗ 4 ಚಂಡಮಾರುತವಾಗಿ ಭೂಕುಸಿತವನ್ನು ಉಂಟುಮಾಡುತ್ತದೆ ಎಂದು ಊಹಿಸಿದೆ, ಇದು ಗಂಟೆಗೆ 132 ಮೈಲಿ ವೇಗದಲ್ಲಿ ಗಾಳಿ ಬೀಸುತ್ತದೆ.

ಕರಾವಳಿಯನ್ನು ತಲುಪುವ ಮೊದಲೇ, ಚಂಡಮಾರುತವು ಪ್ರಯಾಣವನ್ನು ಗಮನಾರ್ಹವಾಗಿ ಅಡ್ಡಿಪಡಿಸಿದೆ. ರಾಯಿಟರ್ಸ್ ವರದಿಯ ಪ್ರಕಾರ, ಚಂಡಮಾರುತ ಸಮೀಪಿಸುತ್ತಿರುವುದರಿಂದ ಯುಎಸ್ನಾದ್ಯಂತ 1,200 ಕ್ಕೂ ಹೆಚ್ಚು ವಿಮಾನಗಳನ್ನು ರದ್ದುಪಡಿಸಲಾಗಿದೆ ಅಥವಾ ವಿಳಂಬಗೊಳಿಸಲಾಗಿದೆ.

ಗುರುವಾರ ಬೆಳಿಗ್ಗೆ 11:59 ರ ಹೊತ್ತಿಗೆ, ಫ್ಲೈಟ್ ಅವೇರ್ 1,038 ರದ್ದತಿ ಮತ್ತು 1,672 ವಿಳಂಬಗಳನ್ನು ದಾಖಲಿಸಿದೆ. ಸೌತ್ ವೆಸ್ಟ್ ಏರ್ ಲೈನ್ಸ್ 201 ವಿಮಾನಗಳನ್ನು ರದ್ದುಪಡಿಸಿದರೆ, ಅಮೆರಿಕನ್ ಏರ್ ಲೈನ್ಸ್ ಮತ್ತು ಡೆಲ್ಟಾ ಏರ್ ಲೈನ್ಸ್ ನಂತರದ ಸ್ಥಾನಗಳಲ್ಲಿವೆ. ಟ್ಯಾಂಪಾ ಇಂಟರ್ನ್ಯಾಷನಲ್, ಒರ್ಲ್ಯಾಂಡೊ ಇಂಟರ್ನ್ಯಾಷನಲ್ ಮತ್ತು ಫೋರ್ಟ್ ಲಾಡರ್ಡೇಲ್ ಇಂಟರ್ನ್ಯಾಷನಲ್ ಸೇರಿದಂತೆ ಫ್ಲೋರಿಡಾದ ಪ್ರಮುಖ ವಿಮಾನ ನಿಲ್ದಾಣಗಳು ಪ್ರಯಾಣಿಕರಿಗೆ ಸಂಭಾವ್ಯ ಅಡೆತಡೆಗಳ ಬಗ್ಗೆ ಎಚ್ಚರಿಕೆ ನೀಡಿವೆ.

ಅಮೆರಿಕನ್ ಏರ್ಲೈನ್ಸ್, ಜೆಟ್ಬ್ಲೂ ಮತ್ತು ಸೌತ್ವೆಸ್ಟ್ ಆಗ್ನೇಯ ಯುಎಸ್ ಮತ್ತು ಗಲ್ಫ್ ಆಫ್ ಮೆಕ್ಸಿಕೊ ಪ್ರದೇಶಗಳಲ್ಲಿನ ವಿಮಾನ ನಿಲ್ದಾಣಗಳಿಗೆ ಪ್ರಯಾಣ ಸಲಹೆಗಳನ್ನು ನೀಡಿವೆ.

ಫ್ಲೈಟ್ ಅವೇರ್ ಪ್ರಕಾರ, ಫ್ಲೋರಿಡಾದ ಪ್ರಮುಖ ವಿಮಾನ ನಿಲ್ದಾಣಗಳಲ್ಲಿ 400 ಕ್ಕೂ ಹೆಚ್ಚು ವಿಮಾನಗಳನ್ನು ರದ್ದುಪಡಿಸಲಾಗಿದೆ. ಗುರುವಾರ ಬೆಳಿಗ್ಗೆಯವರೆಗೆ, ಟ್ಯಾಂಪಾ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವು 216 ವಿಮಾನಗಳನ್ನು ರದ್ದುಗೊಳಿಸಿದೆ.

## ವಕ್ ಬೋರ್ಡ್ ಪರ ಕೋಟ್ಯಾಂತರ ಮತ

**ನವದೆಹಲಿ:** ಕೇಂದ್ರ ಸರ್ಕಾರ ಜಾರಿಗೆ ತರಲುದ್ದೇಶಿಸಿರುವ ವಕ್ಫ್ ಬೋರ್ಡ್ ಪರ-ವಿರೋಧ ಚರ್ಚೆಗೆ ಸಾರ್ವಜನಿಕರಿಗೂ ಆಹ್ವಾನ ನೀಡಲಾಗಿತ್ತು. ಆದರೆ ವಕ್ಫ್ ಬೋರ್ಡ್ ಗೆ ತಿದ್ದುಪಡಿ ಬೇಡ ಎಂದು ಕೋಟ್ಯಾಂತರ ಮತ ಬಂದಿದ್ದು ಈಗ ಬಿಜೆಪಿಗೆ ಪಾಕಿಸ್ತಾನದ ಮೇಲೆ ಸಂಶಯ ಶುರುವಾಗಿದೆ. ವಕ್ಫ್ ಬೋರ್ಡ್ ತಿದ್ದುಪಡಿ ಬೇಕೋ ಬೇಡವೋ ಎಂಬ ಬಗ್ಗೆ ಚರ್ಚೆಗೆ ಸಾರ್ವಜನಿಕರ ಅಭಿಪ್ರಾಯ ಸಂಗ್ರಹಿಸಲು ಕೇಂದ್ರ ಸರ್ಕಾರ ಮುಂದಾಗಿತ್ತು. ಇದರಲ್ಲಿ ವಕ್ಫ್ ಬೋರ್ಡ್ ಪರ ಸುಮಾರು. 1.25 ಕೋಟಿ ಪ್ರತಿಕ್ರಿಯೆ ಬಂದಿದೆ. ಇದರ ಬಗ್ಗೆ ಬಿಜೆಪಿ ಸಂಶಯ ವ್ಯಕ್ತಪಡಿಸಿದೆ. ಇದರ ಹಿಂದೆ ಸಾಂಪ್ರದಾಯಿಕ ಎದುರಾಳಿ ರಾಷ್ಟ್ರ ಪಾಕಿಸ್ತಾನ ಅಥವಾ ಚೀನಾ ಇಲ್ಲವೇ ಸದಾ ಭಾರತದ ವಿರುದ್ಧ ಕೆಂಡ ಕಾರುವ ಝೂಕಿರ್ ನಾಯಕ್ ನಂತಹ ನಾಯಕರ ಕೈವಾಡವಿರಬಹುದೇ ಎಂಬ ಸಂಶಯ ಮೂಡಿದೆ. ಈ ಹಿನ್ನಲೆಯಲ್ಲಿ ಸೂಕ್ತ ತನಿಖೆಯಾಗಬೇಕು ಎಂದು ಬಿಜೆಪಿ ಆಗ್ರಹಿಸಿದೆ. ಈ ಮಟ್ಟದ ಪ್ರತಿಕ್ರಿಯೆ ಬಂದಿರುವುದು ಜಾಗತಿಕವಾಗಿ ದಾಖಲೆಯೇ. ಭಾರತದೊಳಗಿನಿಂದ ಮಾತ್ರ ಇಷ್ಟೊಂದು ಪ್ರಮಾಣದಲ್ಲಿ ಪ್ರತಿಕ್ರಿಯೆ ಬರುವುದು ಅಸಾಧ್ಯ ಎನ್ನುವುದು ಬಿಜೆಪಿ ನಾಯಕರ ಅಭಿಮತವಾಗಿದೆ. ಆದರೆ ಇದನ್ನು ಟೀಕಿಸಿರುವ ಕಾಂಗ್ರೆಸ್, ಬಿಜೆಪಿಗರಿಗೆ ಪ್ರಜಾಪ್ರಭುತ್ವದಲ್ಲಿ ನಂಬಿಕೆಯಿಲ್ಲ. ಇಷ್ಟು ಜನಸಂಖ್ಯೆಯಿರುವ ರಾಷ್ಟ್ರದಲ್ಲಿ ಕೇವಲ 1.5 ಪ್ರತಿಶತ ಜನ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರೂ ಸಂಶಯಿಸುತ್ತಿದೆ ಎಂದಿದೆ.




# ವಯನಾಡ್ ಭೂಕುಸಿತ: ಬಜಾಜ್ ಫಿನ್ಸರ್ವ್ ವತಿಯಿಂದ ಎರಡು ಕೋಟಿ ರೂ ಪರಿಹಾರ



**ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರಿಗೆ ಚೆಕ್ ಹಸ್ತಾಂತರ**

**ಕೇರಳ:** ಭಾರತದ ಪ್ರಮುಖ ಮತ್ತು ವೈವಿಧ್ಯಮಯ ಹಣಕಾಸು ಸೇವಾ ಗುಂಪುಗಳಲ್ಲಿ ಒಂದಾದ ಬಜಾಜ್ ಫಿನ್ಸರ್ವ್ ಲಿಮಿಟೆಡ್, ವಯನಾಡಿನಲ್ಲಿ ಇತ್ತೀಚೆಗೆ ಸಂಭವಿಸಿದ ದುರಂತ ಭೂಕುಸಿತ ಮತ್ತು ಪ್ರವಾಹದಿಂದ ಹಾನಿಗೊಳಗಾದ ಸಮುದಾಯಗಳಿಗೆ ಬೆಂಬಲವಾಗಿ 2 ಕೋಟಿ ರೂಪಾಯಿಗಳ ಪರಿಹಾರವನ್ನು ಘೋಷಿಸಿದೆ.

ವಯನಾಡ್ ಭೂಕುಸಿತ ಪರಿಹಾರಕ್ಕಾಗಿ ಕೇರಳ ರಾಜ್ಯ ವಿಪತ್ತು ಪರಿಹಾರ ನಿಧಿಗೆ ಆನ್ಲೈನ್ ಕೊಡುಗೆಯನ್ನು ಕೇರಳದ ಗೌರವಾನ್ವಿತ ಮುಖ್ಯಮಂತ್ರಿ ಶ್ರೀ ಪಿಣರಾಯಿ ವಿಜಯನ್ ಅವರು ಮುಖ್ಯ ಅರ್ಥಶಾಸ್ತ್ರಜ್ಞ ಮತ್ತು ಬಜಾಜ್ ಫಿನ್ಸರ್ವ್ ಕಾರ್ಪೊರೇಟ್ ವ್ಯವಹಾರಗಳ ವಿಭಾಗದ ಅಧ್ಯಕ್ಷ ಡಾ. ಎನ್ ಶ್ರೀನಿವಾಸ ರಾವ್ ಮತ್ತು ಬಜಾಜ್ ಅಲಿಯಾನ್ಸ್ ಇನ್ಶೂರೆನ್ಸ್ ಕಾನೂನು ಮತ್ತು ಅನುಸರಣೆ ಹಿರಿಯ ಅಧ್ಯಕ್ಷ ಶ್ರೀ ಅನಿಲ್ ಪಿಎಂ ಅವರ ಜತೆ ನಡೆಸಿದ ಸಭೆಯ ವೇಳೆ ಇದನ್ನು ಘೋಷಿಸಲಾಯಿತು.

ಬಜಾಜ್ ಅಲೈನ್ಸ್ ಲೈಫ್ ಇನ್ಶೂರೆನ್ಸ್ ಮತ್ತು ಬಜಾಜ್ ಅಲೈನ್ಸ್ ಜನರಲ್ ಇನ್ಶೂರೆನ್ಸ್, ವಯನಾಡ್ನಲ್ಲಿ ಪ್ರಭಾವಿತವಾಗಿರುವ ಗ್ರಾಹಕರು ಸಲ್ಲಿಸಿದ ಎಲ್ಲಾ ಕ್ಲೈಮ್ಗಳ ಪ್ರಕ್ರಿಯೆಯನ್ನು ತ್ವರಿತಗೊಳಿಸುತ್ತಿವೆ. ಬಜಾಜ್ ಫಿನ್ಸರ್ವ್ನ ಸಾಲ ನೀಡುವ ಅಂಗಸಂಸ್ಥೆಯಾದ ಬಜಾಜ್ ಫೈನಾನ್ಸ್, ಸದ್ಭಾವನೆ ಮತ್ತು ಮಾನವೀಯ ಸೂಚಕವಾಗಿ ವಯನಾಡ್ನಿಂದ ಗ್ರಾಹಕರಿಗೆ ಎಲ್ಲ ಸಾಲ ಮರುಪಾವತಿಯ ಮೇಲೆ ಸ್ವಯಂಪ್ರೇರಿತ ನಿಷೇಧವನ್ನು ಘೋಷಿಸಿದೆ. ವಯನಾಡಿನ ಪುಂಜಿರಿಮಟ್ಟಂ, ಮುಂಡಕ್ಕಲ್, ಚೂರಲ್ಮಾಲಾ, ಅಟ್ಟಮಾಲ, ಮೆಪ್ಪಾಡಿ ಮತ್ತು ಕುನ್ನೋಮ್ ಗ್ರಾಮಗಳಲ್ಲಿ ವಾಸಿಸುವ ಗ್ರಾಹಕರಿಗೆ ಚಾಲ್ತಿಯಲ್ಲಿರುವ ನಿಷೇಧವು ಅನ್ವಯಿಸುತ್ತದೆ. ಬಜಾಜ್ ಫಿನ್ಸರ್ವ್ನ ಮುಖ್ಯ ಅರ್ಥಶಾಸ್ತ್ರಜ್ಞ ಮತ್ತು ಅಧ್ಯಕ್ಷ ಡಾ. ಎನ್ ಶ್ರೀನಿವಾಸ ರಾವ್, ನಮ್ಮ ಸಾಮಾಜಿಕ ಪರಿಣಾಮದ ಕಾರ್ಯಕ್ರಮಗಳು ಸಮಾಜದ ಅತ್ಯಂತ ತುರ್ತು ಅಗತ್ಯಗಳನ್ನು ಪರಿಹರಿಸುವಲ್ಲಿ ಕೇಂದ್ರೀಕೃತವಾಗಿವೆ. ವಯನಾಡ್ ಭೂಕುಸಿತವು ನಿವಾಸಿಗಳ ಮನೆಗಳು, ಜೀವನ ಮತ್ತು ಜೀವನೋಪಾಯವನ್ನು ಮುಳುಗಿಸಿದೆ. ವಯನಾಡ್ ಪರಿಹಾರ ನಿಧಿಗೆ ಈ ಕೊಡುಗೆ ಮತ್ತು ಬಜಾಜ್ ಫಿನ್ಸರ್ವ್ ಕಂಪನಿಗಳು ಕೈಗೊಂಡ ವಿವಿಧ ಉಪಕ್ರಮಗಳೊಂದಿಗೆ, ನಾವು ಪ್ರಭಾವಿತರಿಗೆ ಅರ್ಥಪೂರ್ಣ ಬೆಂಬಲವನ್ನು ನೀಡುತ್ತೇವೆ ಎಂದು ಭಾವಿಸುತ್ತೇವೆ ಎಂದರು.

# ದೇಶಕ್ಕೆ ಮೂರು ಪರಂ ಸೂಪರ್ ಕಂಪ್ಯೂಟರ್ ಅರ್ಪಿಸಿದ ಮೋದಿ




**ನವದೆಹಲಿ:** ಪ್ರಧಾನಮಂತ್ರಿ ನರೇಂದ್ರ ಮೋದಿ ಸೆ.25ರ ಗುರುವಾರ ಮೂರು ಪರಮ್ ರುದ್ರ ಸೂಪರ್ ಕಂಪ್ಯೂಟರ್ಗಳು ಮತ್ತು ಹೈ-ಪರ್ಫಾರ್ಮೆನ್ಸ್ ಕಂಪ್ಯೂಟಿಂಗ್ ಸಿಸ್ಟಮ್ಗಳನ್ನು ದೇಶಕ್ಕೆ ಸಮರ್ಪಿಸಿದ್ದಾರೆ. ದೆಹಲಿ, ಪುಣೆ ಮತ್ತು ಕೋಲ್ಕತ್ತಾದಲ್ಲಿ ಇವುಗಳನ್ನು ಸ್ಥಾಪಿಸಲಾಗಿದ್ದು, ಇದ್ರಿಂದ ಭಾರತದ ವಿಜ್ಞಾನಿಗಳು ಅತ್ಯಾಧುನಿಕ ಸೌಲಭ್ಯಗಳ ಪ್ರಯೋಜನ ಪಡೆಯಲಿದ್ದಾರೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

ಈ ಮೂರು ಸೂಪರ್ಕಂಪ್ಯೂಟರ್ಗಳು ಭೌತಶಾಸ್ತ್ರ, ಭೂ ವಿಜ್ಞಾನ ಮತ್ತು ವಿಶ್ವವಿಜ್ಞಾನದಿಂದ ಮುಂದುವರಿದ ಸಂಶೋಧನೆಗೆ ಸಹಾಯ ಮಾಡಲಿದ್ದು, ರಾಷ್ಟ್ರೀಯ ಸೂಪರ್ಕಂಪ್ಯೂಟಿಂಗ್ ಮಿಷನ್ ಅನ್ನು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ (ಆಖಖ) ಮತ್ತು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಜಂಟಿಯಾಗಿ ನಿರ್ವಹಿಸುತ್ತದೆ ಎಂದು ಮಾಹಿತಿ ಹಂಚಿಕೊಂಡ ಪ್ರಧಾನಿ ಮೋದಿ ಸೆಂಟರ್ ಫಾರ್ ಡೆವಲಪ್ಮೆಂಟ್ ಆಫ್ ಅಡ್ವಾನ್ಸ್ಡ ಕಂಪ್ಯೂಟಿಂಗ್ (ಅ-ಆಂಅ), ಪುಣೆ, ಮತ್ತು ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆ (ಖಖಖಿ) ಇದನ್ನು ಅನುಷ್ಠಾನ ಮಾಡಲಿವೆ ಎಂದರು.

ಇದೇ ವೇಳೆ ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತದ ಸಾಧನೆಗಳನ್ನು ಎತ್ತಿ ಹಿಡಿದ ನಮೋ, ಭಾರತವು 2035 ರ ವೇಳೆಗೆ 'ಭಾರತೀಯ ಅಂತರಿಕ್ಷಾ ನಿಲ್ದಾಣ'ವನ್ನು ಸ್ಥಾಪಿಸುವ ಗುರಿಯನ್ನು ಹೊಂದಿದೆ ಎಂದು ಹೇಳಿದರು.

# ಉಕ್ರೇನ್‌ನ ವಿದ್ಯುತ್ ಸಂಪರ್ಕ ಜಾಲದ ಮೇಲೆ ರಷ್ಯಾ ಕ್ಷಿಪಣಿ ದಾಳಿ



**ಉಕ್ರೇನ್:** ಉಕ್ರೇನ್‌ನ ಪ್ರಮುಖ ವಿದ್ಯುತ್ ಸಂಪರ್ಕ ಜಾಲದ ಮೇಲೆ ರಷ್ಯಾ ಸೇನೆ ಕ್ಷಿಪಣಿ ಮತ್ತು ಡ್ರೋನ್ ದಾಳಿ ನಡೆಸಿದೆ.

ರಾಜಧಾನಿ ಕೀವ್ ಮೇಲೆ ತೂರಿ ಬಂದ ಡ್ರೋನ್ ಮತ್ತು ಕ್ಷಿಪಣಿಗಳನ್ನು ಹೊಡೆದುರುಳಿಸಲು ಉಕ್ರೇನ್ನ ವಾಯು ರಕ್ಷಣಾ ಪಡೆಗಳು ಐದು ತಾಸು ಹೋರಾಟ ನಡೆಸಿದವು ಎಂದು ಅಧಿಕಾರಿಗಳು ಗುರುವಾರ ಹೇಳಿದ್ದಾರೆ.

ಕೀವ್ ಮೇಲೆ ನಡೆದ ದಾಳಿಯಲ್ಲಿ ಇಬ್ಬರು ಗಾಯಗೊಂಡಿದ್ದಾರೆ. ನಗರದಲ್ಲಿ ಶಿಶುವಿಹಾರ, ಗ್ಯಾಸ್ ಪೈಪ್ ಮತ್ತು ಸುಮಾರು 20 ಕಾರುಗಳಿಗೆ ಹಾನಿಯಾಗಿದೆ ಎಂದು ಕೀವ್ ಸೇನಾ ಆಡಳಿತ ತಿಳಿಸಿದೆ.

ಉಕ್ರೇನ್‌ನ ಪಶ್ಚಿಮ ಇವಾನೊ-ಫ್ರಾಂಕಿವ್ಸ್ಕ ಪ್ರದೇಶದಲ್ಲಿ ಇಂಧನ ಮೂಲಸೌಕರ್ಯಕ್ಕೆ ಹಾನಿಯಾಗಿದೆ. ದಕ್ಷಿಣದ ಮೈಕೋಲೈವ್ ಪ್ರದೇಶದಲ್ಲಿಯೂ ವಿದ್ಯುತ್ ಸಂಪರ್ಕ ಜಾಲದ ಮೇಲೆ ದಾಳಿಯಾಗಿದೆ. ರಷ್ಯಾ ಪಡೆಗಳು, ಬುಧವಾರ ರಾತ್ರಿಯಿಂದ ಗುರುವಾರ ನಸುಕಿನವರೆಗೂ ಉಕ್ರೇನ್ ಮೇಲೆ ಆರು ಕ್ಷಿಪಣಿಗಳು ಮತ್ತು 78 ಡ್ರೋನ್ಗಳನ್ನು ಉಡಾಯಿಸಿವೆ. ಇದರಲ್ಲಿ ನಾಲ್ಕು ಕ್ಷಿಪಣಿಗಳನ್ನು ಮತ್ತು 66 ಡ್ರೋನ್ಗಳನ್ನು ವಾಯು ಮಾರ್ಗದಲ್ಲೇ ನಾಶಪಡಿಸಲಾಗಿದೆ ಎಂದು ಉಕ್ರೇನ್ ವಾಯುಪಡೆ ತಿಳಿಸಿದೆ.

## ಪೋಕ್ಸೋ ಕೇಸ್‌ನಲ್ಲಿ ಹಾಸ್ಟೆಲ್ ವಾರ್ಡನ್‌ಗೆ ಗಲ್ಲು ಶಿಕ್ಷೆ!

**ಗುವಾಹಟಿ:** 2019 ಮತ್ತು 2022 ರ ನಡುವೆ ನಾಲ್ಕು ವರ್ಷಗಳ ಕಾಲ ಎಂಟು ಹುಡುಗರು ಮತ್ತು 13 ಹುಡುಗಿಯರು 21 ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಸರ್ಕಾರಿ ವಸತಿ ಶಾಲೆಯ ಮಾಜಿ ಹಾಸ್ಟೆಲ್ ವಾರ್ಡನ್ಗೆ ಅರುಣಾಚಲ ಪ್ರದೇಶದ ವಿಶೇಷ ಪೋಕ್ಸೊ ನ್ಯಾಯಾಲಯ ಗುರುವಾರ ಮರಣದಂಡನೆ



ವಿಧಿಸಿದೆ. ಅಪರಾಧದ ಆಯೋಗದ ಸಮಯದಲ್ಲಿ ಹುಡುಗಿಯರು ಆರರಿಂದ 15 ವರ್ಷ ವಯಸ್ಸಿನವರು ಮತ್ತು ಹುಡುಗರು ಏಳು ರಿಂದ 16 ವರ್ಷ ವಯಸ್ಸಿನವರಾಗಿದ್ದರು. ಸಂತ್ರಸ್ತರಲ್ಲಿ ನಾಲ್ವರು ಆತ್ಮಹತ್ಯೆಗೂ ಯತ್ನಿಸಿದ್ದರು. ಶಿ-ಯೋಮಿ ಜಿಲ್ಲೆಯ ಮೋನಿಗಾಂಗ್ನಲ್ಲಿರುವ ಕರೋ ಸರ್ಕಾರಿ ವಸತಿ ಶಾಲೆಯ ಮಾಜಿ ಹಾಸ್ಟೆಲ್ ವಾರ್ಡನ್, ಪ್ರಧಾನ ಆರೋಪಿ ಯುಮ್ಕೆನ್ ಬಾಗ್ರಾಗೆ ಮರಣದಂಡನೆ ಶಿಕ್ಷೆಯ ಜೊತೆಗೆ, ಯುಪಿಯಾದ ವಿಶೇಷ ನ್ಯಾಯಾಧೀಶರು (ಪೋಕ್ಸೊ) ಶಾಲೆಯ ಹಿಂದಿ ಶಿಕ್ಷಕ ಮಾರ್ಬೊಮ್ ನ್ಗೊಮ್ದಿರ್ ತಾಪಿರ್ ಮತ್ತು ಅದರ ಶಿಕ್ಷೆಯನ್ನು ವಿಧಿಸಿದ್ದಾರೆ. ಮಾಜಿ ಮುಖ್ಯೋಪಾಧ್ಯಾಯ, ಸಿಂಗ್ತುಂಗ್ ಯೋರ್ಪೆನ್, 20 ವರ್ಷಗಳ ಕಠಿಣ ಸೆರೆವಾಸಕ್ಕೆ. ಇನ್ನಿಬ್ಬರು ಆರೋಪಿಗಳಾದ ಡೇನಿಯಲ್ ಪರ್ಟಿನ್ ಮತ್ತು ತಾಜುಂಗ್ ಯೋರ್ಪೆನ್ ಅವರನ್ನು ಖುಲಾಸೆಗೊಳಿಸಲಾಗಿದೆ. ಪೋಕ್ಸೋ ಕಾಯ್ದೆಯಡಿಯಲ್ಲಿ ಭೀಕರ ಲೈಂಗಿಕ ದೌರ್ಜನ್ಯ, ತೀವ್ರತರವಾದ ಲೈಂಗಿಕ ದೌರ್ಜನ್ಯ ಮತ್ತು ಲೈಂಗಿಕ ಕಿರುಕುಳದ ಆರೋಪದಡಿಯಲ್ಲಿ ಪ್ರಧಾನ ಆರೋಪಿ ಬಾಗ್ರಾ ಅವರನ್ನು ದೋಷಿ ಎಂದು ಘೋಷಿಸಲಾಗಿದೆ. ಪೋಕ್ಸೋ ಕಾಯಿದೆಯಡಿ ಪ್ರಕರಣವನ್ನು ವರದಿ ಮಾಡಲು ಅಥವಾ ದಾಖಲಿಸಲು ವಿಫಲವಾದ ಆರೋಪದಡಿಯಲ್ಲಿ ನ್ಗೊಮ್ದಿರ್ ಮತ್ತು ಯೋರ್ಪೆನ್ ಇಬ್ಬರಿಗೂ ಶಿಕ್ಷೆ ವಿಧಿಸಲಾಗಿದೆ.

## ಮೋದಿ ಸರ್ಕಾರ ಮೀಸಲಾತಿ ಕಿತ್ತುಕೊಳ್ಳಲು ಹಿಂಜರಿಯುವುದಿಲ್ಲ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿಸರ್ಕಾರ ಮೀಸಲಾತಿಯನ್ನು ಕಿತ್ತುಕೊಳ್ಳಲು ಹಿಂಜರಿಯುವುದಿಲ್ಲ. ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ 10 ಪ್ರತಿಶತ ಮೀಸಲಾತಿ ಒದಗಿಸುವ 103ನೇ ತಿದ್ದುಪಡಿಯು ಮೀಸಲಾತಿಯನ್ನು ದುರ್ಬಲಗೊಳಿಸುವ ಪ್ರಯತ್ನದ ಭಾಗವಾಗಿದೆ ಎಂದು ಮಾಜಿ ಹಣಕಾಸು ಸಚಿವ ಪಿ ಚಿದಂಬರಂ ಹೇಳಿದ್ದಾರೆ. ಲೋಕಸಭೆ ಚುನಾವಣೆ ವೇಳೆ ಕಾಂಗ್ರೆಸ್ ಉದ್ದೇಶಪೂರ್ವಕವಾಗಿ ಸಂವಿಧಾನ ಅಪಾಯದಲ್ಲಿದೆ. ಲೋಕಸಭೆ ಚುನಾವಣೆಯ ನಂತರ ಬಿಜೆಪಿ ಮತ್ತೆ ಅಧಿಕಾರಕ್ಕೆ ಬಂದರೆ ಮೀಸಲಾತಿಯನ್ನು ತೆಗೆದುಹಾಕುತ್ತದೆ ಎಂಬ ಅಪಪ್ರಚಾರವನ್ನು ಕಾಂಗ್ರೆಸ್ ಉದ್ದೇಶಪೂರ್ವಕವಾಗಿ ಮಾಡಿದೆಯೇ ಎಂದು ಖಾಸಗಿ ಸಂದರ್ಶನದಲ್ಲಿ ಕೇಳಿದ ಪ್ರಶ್ನೆಗೆ ಅವರು ಉತ್ತರಿಸಿದರು. ಬಿಜೆಪಿ ಸಂವಿಧಾನವನ್ನು ತಿದ್ದುಪಡಿ ಮಾಡುತ್ತದೆ. ಅವರು ತಯಾರಿ ನಡೆಸುತ್ತಿದ್ದಾರೂ, ಈಗ ಸಾರ್ವತ್ರಿಕ ಚುನಾವಣೆಯಲ್ಲಿ ಬಹುಮತ ಸಿಗದಿದ್ದರೂ ಬಿಜೆಪಿ ಸಂವಿಧಾನ ತಿದ್ದುಪಡಿಗೆ ಮುಂದಾಗಿದೆ ಎಂದು ಹೇಳಿದರು. ಇನ್ನು ಇಡಬ್ಲ್ಯುಎಸ್ ಬಗ್ಗೆ ಸುಪ್ರೀಂ ಕೋರ್ಟ್ ಆದೇಶದ ಬಗ್ಗೆ ಪ್ರಸ್ತಾಪಿಸಿ, ಸುಪ್ರೀಂ ಕೋರ್ಟ್ 3:2 ಆದೇಶ ನೀಡಿದೆ. ಭಿನ್ನ ಆದೇಶ ನೀಡಿದ ಆದೇಶಗಳನ್ನು ನೀವು ಓದಿದ್ದೀರಾ ಎಂದು ಪ್ರಶ್ನಿಸಿದರು. ಚುನಾವಣೆ ವೇಳೆ ಪ್ರತಿಪಕ್ಷ ನಾಯಕರ ವಿರುದ್ಧ ಹಲವಾರು ಪ್ರಕರಣಗಳು ದಾಖಲಾಗಿವೆ. ನೀವು ದೇಶದ ವಿರೋಧ ಪಕ್ಷಗಳ ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸುವುದನ್ನು ಒಪ್ಪಿಕೊಳ್ಳಬಹುದೇ ನೀವು ಅದನ್ನು ಮುಕ್ತ ಮತ್ತು ನ್ಯಾಯಯುತ ಎಂದು ಕರೆಯುತ್ತೀರಾ ಎಂದು ಕೇಳಿದರು.

# ಇರಾಕ್ ವಿಮಾನ ಕೋಲ್ಕತಾದಲ್ಲಿ ತುರ್ತು ಲ್ಯಾಂಡಿಂಗ್



**ಕೋಲ್ಕತಾ:** ಬಾಗ್ದಾದ್‌ನಿಂದ ಚೀನಾದ ಗುವಾಂಗ್ಝೌಗೆ ತೆರಳುತ್ತಿದ್ದ ಇರಾಕ್ ಏರ್ವೇಸ್ ವಿಮಾನವೊಂದರಲ್ಲಿ ಪ್ರಯಾಣಿಕರೊಬ್ಬರು ಅಸ್ವಸ್ಥಗೊಂಡ ಕಾರಣ ಕೋಲ್ಕತಾ ವಿಮಾನ ನಿಲ್ದಾಣದಲ್ಲಿ ತುರ್ತು ಲ್ಯಾಂಡಿಂಗ್ ಮಾಡಿದೆ. ಆದ್ರೆ 16 ವರ್ಷದ ಇರಾಕ್ ನ ಯುವತಿ ನಗರದ ಆಸ್ಪತ್ರೆಯೊಂದಕ್ಕೆ ಕರೆದೊಯ್ದಿದ್ದಾಗ ಮೃತಪಟ್ಟಿರುವುದಾಗಿ ವೈದ್ಯರು ಘೋಷಿಸಿದ್ದಾರೆ.

100 ಪ್ರಯಾಣಿಕರು ಮತ್ತು 15 ಸಿಬ್ಬಂದಿಯನ್ನೊಳಗೊಂಡ ಖಂ-473 ವಿಮಾನ ಮಾರ್ಗ ಬದಲಿಸಿ ಬುಧವಾರ ರಾತ್ರಿ 10:18 ಕ್ಕೆ ಕೋಲ್ಕತ್ತಾದ ನೇತಾಜಿ ಸುಭಾಷ್ ಚಂದ್ರ ಬೋಸ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಲ್ಯಾಂಡಿಂಗ್ ಆಗಿತ್ತು.

ವಿಮಾನ ನಿಲ್ದಾಣದಲ್ಲಿದ್ದ ವೈದ್ಯಕೀಯ ತಂಡ ತಕ್ಷಣವೇ ಯುವತಿ ಡೆರಾನ್ ಸಮೀರ್ ಅಹ್ಮದ್ ಅವರನ್ನು ಪರಿಶೀಲಿಸಿತು. ನಾಡಿಮಿಡಿತ ಕಂಡುಬಂದಿಲ್ಲ. ಯಾವುದೇ ಹೃದಯ ಬಡಿತ ಕಂಡುಬಂದಿಲ್ಲವೂ ನಂತರ ಹೆಚ್ಚಿನ ಪರೀಕ್ಷೆಗಾಗಿ ಹತ್ತಿರದ ಆಸ್ಪತ್ರೆಗೆ ಕಳುಹಿಸಿದರು ಎಂದು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ ವಕ್ತಾರರು ತಿಳಿಸಿದ್ದಾರೆ.

ಗುರುವಾರ ಮುಂಜಾನೆ 1.18 ರ ಸುಮಾರಿಗೆ ಇಬ್ಬರು ಸಹ ಪ್ರಯಾಣಿಕರೊಂದಿಗೆ ಹದಿಹರೆಯದ ಯುವತಿಯನ್ನು ಎಎಐ ಆಂಬ್ಯುಲೆನ್ಸ್ ಮೂಲಕ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ಅವರು ಮೃತಪಟ್ಟಿರುವುದಾಗಿ ಆಸ್ಪತ್ರೆ ತಿಳಿಸಿದೆ ಎಂದು ಎಎಐ ಅಧಿಕಾರಿ ತಿಳಿಸಿದ್ದಾರೆ.

# ಮತ್ತೆ ನ್ಯೂಕ್ಲಿಯರ್ ಬಾಂಬ್ ತಯಾರಿಕೆಯಲ್ಲಿ ತೊಡಗಿದ ಉ.ಕೊರಿಯಾ!



**ಉತ್ತರ ಕೊರಿಯಾ:** ಜಗತ್ತಿಗೆ ಸವಾಲೊಡ್ಡಿ ತನ್ನದೇ ದಿಕ್ಕಿನಲ್ಲಿ ಮುನ್ನುಗ್ಗುತ್ತಿರುವ ಉತ್ತರ ಕೊರಿಯಾದ ಬತ್ತಳಿಕೆಯಿಂದ ಹೊಸ ಸುದ್ದಿಯೊಂದು ಹೊರಬಿದ್ದಿದೆ. ಕೊರಿಯನ್ ಸೆಂಟ್ರಲ್ ನ್ಯೂಸ್ ಏಜೆನ್ಸಿ ವರದಿ ಪ್ರಕಾರ, ಉತ್ತರ ಕೊರಿಯಾ ತನ್ನಲ್ಲಿರುವ ಯುರೇನಿಯಂ ರಾಸಾಯನಿಕ ಸಾಮರ್ಥ್ಯವನ್ನ ಹೆಚ್ಚಿಸಿಕೊಂಡಿದ್ದು ಎರಡಂಕಿಗೂ ಮೇಲ್ಪಟ್ಟು ಪರಮಾಣು ಶಸ್ತ್ರಾಸ್ತ್ರಗಳನ್ನು ತಯಾರಿಸುವ ಸಿದ್ಧತೆಯಲ್ಲಿ ತೊಡಗಿದೆ ಎಂದು ವರದಿಯಾಗಿದೆ. ಪರಮಾಣು ನೆಲೆಗಳ ಬಲಿಷ್ಠಗೊಳ್ಳುವಿಕೆಗೆ ಕಡೆಗೆ ಕೊರಿಯಾ ವಿಶೇಷ ಕಾಳಜಿ ವಹಿಸಿದ್ದು, ಶಸ್ತ್ರಾಸ್ತ್ರಗಳ ಶೇಖರಣೆಗೆ ಹೆಚ್ಚು ಪ್ರಾಮುಖ್ಯತೆ ಕೊಡ್ತಿದೆ ಎನ್ನಲಾಗಿದೆ. ಅಲ್ಲದೆ, ವಿಶ್ವದ ದೊಡ್ಡಣ್ಣ ಅಮೆರಿಕ ಅಧ್ಯಕ್ಷೀಯ ಎಲೆಕ್ಷನ್ ಗೂ ಮುನ್ನವೇ 7ನೇ ಬಾರಿಗೆ ಪರಮಾಣು ಪರೀಕ್ಷೆ ನಡೆಸಲು ಕೂಡ ಉತ್ತರ ಕೊರಿಯಾ ತಯಾರಿ ನಡೆಸಿದೆ ಎಂದು ಏಖಓಂ ಸ್ಪೈ ಸಂಸ್ಥೆ ವರದಿ ಮಾಡಿದೆ. ಇತ್ತೀಚೆಗೆ ಪರಮಾಣು ಶಸ್ತ್ರಾಸ್ತ್ರಗಳ ಸಂಸ್ಥೆ ಮತ್ತು ಶಸ್ತ್ರ-ದರ್ಜೆಯ ಪರಮಾಣು ವಸ್ತುಗಳ ಉತ್ಪಾದನಾ ನೆಲೆಗೆ ಸರ್ವಾಧಿಕಾರಿ ಕಿಮ್ ಜಾಂಗ್ ಉನ್ ಭೇಟಿ ನೀಡಿದ್ದು ಜಗತ್ತಿನ ಅನೇಕ ರಾಷ್ಟ್ರಗಳ ಕುತೂಹಲಕ್ಕೆ ಕಾರಣವಾಗಿತ್ತು.

# ಅಮೆಜಾನ್ ಗ್ರೇಟ್ ಇಂಡಿಯನ್ ಫೆಸ್ಟಿವಲ್: 9500 ಹೊಸ ಉತ್ಪನ್ನ ಬಿಡುಗಡೆ




**ದೆಹಲಿ:** ಅಮೆಜಾನ್ ಗ್ರೇಟ್ ಇಂಡಿಯನ್ ಫೆಸ್ಟಿವಲ್ ಸಂದರ್ಭದಲ್ಲಿ ಅಮೆಜಾನ್ನ ಮಾರಾಟ ಯೋಜನೆಗಳಾದ ಕರಿಗರ್, ಸಹೇಲಿ, ಸ್ಥಳೀಯ ಮಳಿಗೆಗಳು ಮತ್ತು ಲಾಂಚ್ಪ್ಯಾಡ್ನ ಭಾಗವಾಗಿರುವ ಸಣ್ಣ ಮತ್ತು ಮಧ್ಯಮ ಗಾತ್ರದ ವ್ಯಾಪಾರ ಸಂಸ್ಥೆಗಳು 9,500 ಕ್ಕೂ ಅಧಿಕ ಹೊಸ ಉತ್ಪನ್ನಗಳನ್ನು ಮಾರಾಟಕ್ಕೆ ಬಿಡುಗಡೆ ಮಾಡಲಿವೆ.

ಅಲ್ಪಿನೊ, ಫೂಲ್, ಆರ್ಝೂಲ್, ಟಾಶ್ ಕ್ರಾಫ್ಟ್ ಮತ್ತು ಇತರೆ ಬ್ರ್ಯಾಂಡ್ಗಳು ಅಮೆಜಾನ್.ಇನ್ನಲ್ಲಿ ತಮ್ಮ ವಿಶಿಷ್ಟ ಉತ್ಪನ್ನಗಳನ್ನು ಪ್ರದರ್ಶಿಸುವ ಜತೆಗೆ, ಭಾರತದ ಉದ್ದಗಲಕ್ಕೂ ಈ ಉತ್ಪನ್ನಗಳನ್ನು ತಲುಪಿಸಲಿವೆ. ಅಮೆಜಾನ್.ಇನ್ 16 ಲಕ್ಷಕ್ಕೂ ಹೆಚ್ಚು ಮಾರಾಟಗಾರರ ಮನೆ, ಅಡುಗೆ ಮನೆ, ದಿನಸಿ, ಉಡುಪು ಸೇರಿದಂತೆ ವೈವಿಧ್ಯಮಯ ಕೋಟಿಗಟ್ಟಲೆ ಉತ್ಪನ್ನಗಳ ಮಾರಾಟ ಕೊಡುಗೆ ನೀಡುತ್ತದೆ ಎಂದು ಮಾರಾಟ ಪಾಲುದಾರ ಸೇವೆಗಳ ನಿರ್ದೇಶಕ ಅಮಿತ್ ನಂದಾ ಪ್ರಕಟಣೆಯಲ್ಲಿ ಹೇಳಿದ್ದಾರೆ.

ಹಬ್ಬದ ಸೀಸನ್ನಲ್ಲಿ ಹೆಚ್ಚುತ್ತಿರುವ ಬೇಡಿಕೆಯನ್ನು ಈಡೇರಿಸುವ ಸಲುವಾಗಿ ಈ ಉಪಕ್ರಮ ಜಾರಿಗೊಳಿಸಿದೆ. ಇತ್ತೀಚೆಗೆ, ಹಬ್ಬದ ಸೀಸನ್ಗಾಗಿ ತಯಾರಿ ನಡೆಸುತ್ತಿರುವ ಮಾರಾಟಗಾರರಿಗೆ ಸಮಯೋಚಿತ ಉತ್ತೇಜನ ನೀಡಲು, ಸೆಪ್ಟೆಂಬರ್ 9ರಿಂದ ಜಾರಿಗೆ ಬರುವಂತೆ ಮಾರುಕಟ್ಟೆಯಲ್ಲಿ ಬಹು-ಉತ್ಪನ್ನ ವರ್ಗಗಳಾದ್ಯಂತ ಮಾರಾಟ ಶುಲ್ಕದಲ್ಲಿ ಗಮನಾರ್ಹವಾದ ಕಡಿತ ಘೋಷಿಸಲಾಗಿತ್ತು.

ಸಣ್ಣ ಮತ್ತು ಮಧ್ಯಮ ಗಾತ್ರದ ವ್ಯಾಪಾರ ಸಂಸ್ಥೆಗಳು ಹೊಸ ಸಾಧನ ಪರಿಕರಗಳು ಮತ್ತು ವೈಶಿಷ್ಟ್ಯಗಳ ಸದೃಢವಾದ ಶ್ರೇಣಿ ಸೇಲ್ ಈವೆಂಟ್ ಪ್ಲಾನರ್‌ನ ಪ್ರಯೋಜನ ಪಡೆಯಬಹುದು. ಇದು ಪ್ರಮುಖ ಮಾರಾಟ ಉತ್ಸವಗಳನ್ನು ನಿರ್ವಹಿಸಲು ಮತ್ತು ಕಾರ್ಯಗತಗೊಳಿಸಲು ಮಾರಾಟಗಾರರಿಗೆ ಸಹಾಯ ಮಾಡುತ್ತದೆ. ಇಮೇಜಿಂಗ್ ಸೇವೆಗಳು ಮತ್ತು ಲಿಸ್ಟಿಂಗ್ ಅಸಿಸ್ಟೆಂಟ್ಗಳಂತಹ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ-ಚಾಲಿತ ಆವಿಷ್ಕಾರಗಳು ಬಳಕೆಗೆ ಲಭ್ಯವಿವೆ ಎಂದು ಪ್ರಕಟಣೆ ವಿವರಿಸಿದೆ.

# ದುರ್ಗಾ ಪೂಜೆಯನ್ನು ಆಚರಿಸದಂತೆ ಹಿಂದೂಗಳಿಗೆ ಮುಸ್ಲಿಂ ಸಂಘಟನೆ ಎಚ್ಚರಿಕೆ



**ಢಾಕಾ:** ದುರ್ಗಾ ಪೂಜೆಯಂದು ಸಾರ್ವತ್ರಿಕ ರಜೆ ನೀಡಬಾರದು ಮತ್ತು ದುರ್ಗಾ ಮಾತೆಯ ಮೂರ್ತಿಯನ್ನು ನೀರಿನಲ್ಲಿ ವಿಸರ್ಜನೆ ಮಾಡಬಾರದು ಎಂದು ಬಾಂಗ್ಲಾದಲ್ಲಿ ಹಿಂದೂಗಳಿಗೆ ಮುಸ್ಲಿಂ ಸಂಘಟನೆ ಬಹಿರಂಗ ಎಚ್ಚರಿಕೆ ನೀಡಿದೆ.

ಇನ್ಸಾಫ್ ಕೀಮ್ಕರಿ ಛತ್ರ-ಜನತಾ ಹೆಸರಿನ ಮುಸ್ಲಿಂ ಮೂಲಭೂತವಾಗಿ ಸಂಘಟನೆ ಢಾಕಾದಲ್ಲಿ ಭಿತ್ತಿಪತ್ರಗಳನ್ನು ಹಿಡಿದು ಪ್ರತಿಭಟನೆ ನಡೆಸಿದೆ.

ರಸ್ತೆಗಳನ್ನು ಮುಚ್ಚುವ ಮೂಲಕ ಎಲ್ಲಿಯೂ ಪೂಜೆ ಮಾಡಬಾರದು. ವಿಗ್ರಹ ವಿಸರ್ಜನೆ ಮಾಡಿದರೆ ನೀರು ಮಲೀನವಾಗುತ್ತದೆ. ಹೀಗಾಗಿ ಯಾರೂ ದುರ್ಗಾ ಪೂಜೆಯನ್ನ ಆಚರಿಸಬಾರದು ಎಂದು ಎಚ್ಚರಿಕೆ ನೀಡಿದೆ. ಹಿಂದೂಗಳು ಧಾರ್ಮಿಕ ಕಾರ್ಯಕ್ರಮಗಳಿಗಾಗಿ ರಸ್ತೆಗಳನ್ನು ಮುಚ್ಚಬಾರದು. ಹಿಂದೂಗಳು ಆಟದ ಮೈದಾನದಲ್ಲಿ ದುರ್ಗಾ ಪೂಜೆ ಮಾಡಬಾರದು. ಬಾಂಗ್ಲಾದ ವಿಶೇಷ ಭೂಮಿಯಲ್ಲಿ ನಿರ್ಮಾಣವಾಗಿರುವ ದೇವಸ್ಥಾನಗಳು ಅಕ್ರಮ. ಇವುಗಳನ್ನು ಕೆಡವಬೇಕು ಎಂದು ಆಗ್ರಹಿಸಿದೆ.

ಭಾರತವು ಬಾಂಗ್ಲಾದೇಶದ ರಾಷ್ಟ್ರೀಯ ಶತ್ರುವಾಗಿರುವುದರಿಂದ ಬಾಂಗ್ಲಾದೇಶದ ಹಿಂದೂ ನಾಗರಿಕರೂ ಭಾರತ ವಿರೋಧಿಯಾಗಲು ಒಪ್ಪಿಕೊಳ್ಳಬೇಕು. ಹೀಗಾಗಿ ಭಾರತ ವಿರೋಧಿ ಬ್ಯಾನರ್ ಮತ್ತು ಭಾರತ ವಿರೋಧಿ ಘೋಷಣೆಗಳನ್ನು ದೇವಸ್ಥಾನಗಳಲ್ಲಿ ಅಳವಡಿಸಬೇಕು ಎಂಬ ಬೇಡಿಕೆಯನ್ನು ಇಟ್ಟಿದ್ದಾರೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಕ್ಯಾಲಿಫೋರ್ನಿಯಾದಲ್ಲಿ ಟ್ರೆಕ್ಕಿಂಗ್ ಮಾಡಿದ ಸಪ್ತಮಿ ಗೌಡ



ಕಾಂತಾರ ಬೆಡಗಿ ಸಪ್ತಮಿ ಗೌಡ ಅಮೆರಿಕಾ ಪ್ರವಾಸದಲ್ಲಿದ್ದಾರೆ. ಅಲ್ಲಿನ ಹಲವು ಪ್ರವಾಸಿ ತಾಣಗಳನ್ನ ವಿಸಿಟ್ ಮಾಡ್ತಾ ಅದರ ಫೋಟೋಗಳನ್ನ ಇನ್ಸ್ಟಾದಲ್ಲಿ ನಿರಂತರ ಶೇರ್ ಮಾಡುತ್ತಿದ್ದಾರೆ ಸಪ್ತಮಿ. ಇದೀಗ ಅಮೆರಿಕಾದ ಇನ್ನೊಂದು ವಿಸ್ಮಯದ ಜಾಗವನ್ನ ಸೋಷಿಯಲ್ ಮೀಡಿಯಾ ಮೂಲಕ ಪರಿಚಯ ಮಾಡಿಸಿದ್ದಾರೆ. ಅದುವೇ ಕ್ಯಾಲಿಫೋರ್ನಿಯಾದಲ್ಲಿರುವ ಯೊಸ್ಮೆಂಟ್ ನ್ಯಾಶನಲ್ ಪಾರ್ಕ್.

ನದಿ-ಜರಿ-ಬಂಡೆಗಳು ಸೇರಿದಂತೆ ಮರಗಳಿಂದ ಕೂಡಿದ ಪ್ರಕೃತಿ ವಿಸ್ಮಯ ಈ ಪಾರ್ಕ್ ಹೊದ್ದುನಿಂತಿದೆ. ಪ್ರಕೃತಿ ನಿರ್ಮಿತ ಈ ವಿಶಾಲ ಉದ್ಯಾನವನ ಚಾರಣ ಪ್ರಿಯರಿಗೆ ಹೇಳಿ ಮಾಡಿಸಿದ ಜಾಗ. ಹೀಗಾಗಿ ಅಡ್ವೆಂಚರ್ ಪ್ರಿಯೆ ಸಪ್ತಮಿ ಗೌಡ ಈ ವಿಶೇಷ ಜಾಗಕ್ಕೆ ಭೇಟಿ ನೀಡಿದ್ದಾರೆ.

ಇಲ್ಲಿ ನಿಂತು ಸೂರ್ಯಾಸ್ತ ಕಣ್ತುಂಬಿಕೊಳ್ಳುವುದು, ನಕ್ಷತ್ರಗಳನ್ನ ನೋಡುವುದು. ಕಾರ್ಮೋಡಗಳನ್ನು ಆಹ್ಲಾದಿಸುವ ಸಂಸತವನ್ನ ಸಪ್ತಮಿ ಹಂಚಿಕೊಂಡಿದ್ದಾರೆ. ಇಲ್ಲಿ ಟ್ರೆಕ್ಕಿಂಗ್ ಮಾಡಲು ಶಕ್ತಿ ಹಾಗೂ ಉತ್ಸಾಹ ಕೊಂಚ ಹೆಚ್ಚಾಗೇ ಬೇಕಾಗುತ್ತೆ. ಹೀಗಾಗಿ ಅಲ್ಲಿನ ಪರ್ವತದ ತುತ್ತ ತುದಿ ವರೆಗೆ ಹೋಗಿರುವ ಸಪ್ತಮಿ ಅಲ್ಲಿಂದ ಫೋಟೋಗಳನ್ನ ಶೇರ್ ಮಾಡಿದ್ದಾರೆ.

ಅಂದ ಹಾಗೆ ಅಮೆರಿಕಾದಲ್ಲಿ ನಡೆದ ಅಕ್ಕ ಸಮ್ಮೇಳನದಲ್ಲಿ ಸಪ್ತಮಿ ಗೌಡ ಪಾಲ್ಗೊಂಡಿದ್ರು.



ಬಳಿಕ ಅಲ್ಲಿಯೇ ಕೆಲ ದಿನ ಉಳಿದುಕೊಂಡು ಸಂಪೂರ್ಣ ಅಮೆರಿಕಾ ಪ್ರವಾಸ ಕೈಗೊಂಡಿದ್ದಾರೆ. ಇದೀಗ ಅಲ್ಲಿನ ಪ್ರಸಿದ್ಧ ಜಾಗವೊಂದರ ದರ್ಶನ ಮಾಡಿಸಿದ್ದಾರೆ.

## ಒನ್ ಅಂಡ್ ಹಾಫ್ ಸಿನಿಮಾ ಸಾಂಗ್ ರಿಲೀಸ್

# ಸೂರಿ ಸ್ಟೋರಿ ಹೇಳಿದ ಮಾನ್ವಿತಾ

ಒಂದು ಸಿನಿಮಾ ಯಾವೆಲ್ಲಾ ಆಂಗಲ್ ಗಳಿಂದ ಸದ್ದು ಸುದ್ದಿಯಾಗಬೇಕೋ ಅದೆಲ್ಲಾ ಆಂಗಲ್ ಗಳಿಂದ ಒನ್ ಅಂಡ್ ಆ ಹಾಫ್ ಸಿನಿಮಾ ಸುದ್ದಿಯಾಗುತ್ತಿದೆ. ಟೈಟಲ್ ಹಾಗೂ ಫಸ್ಟ್ ಲುಕ್ ಮೂಲಕ ನಿರೀಕ್ಷೆ ಹೆಚ್ಚಿಸಿರುವ ಈ ಚಿತ್ರದ ಎರಡನೇ ಹಾಡು ಅನಾವರಣಗೊಂಡಿದೆ. ಹೇ ನಿಧಿ ಎಂಬ ಮೊದಲ ಗೀತೆ ಹಿಟ್ ಲೀಸ್ಟ್ ಸೇರಿರುವ ಬೆನ್ನಲ್ಲೇ ಚಿತ್ರತಂಡ ಮತ್ತೊಂದು ಸಿಂಗಿಂಗ್ ಮೂಲಕ ಪ್ರೇಕ್ಷಕರಿಗೆ ಆಮಂತ್ರಣ ಕೊಟ್ಟಿದೆ.



ರಂಗ್ಬಿರಂಗಿ, ಡೆವಿಡ್, ದಿ ವೆಕೆಂಟ್ ಹೌಸ್ ಸಿನಿಮಾಗಳ ಮೂಲಕ ಭರವಸೆ ಮೂಡಿಸಿರುವ ಯುವ ಪ್ರತಿಭೆ ಶ್ರೇಯಶ್ ಸೂರಿ ಸಾರಥ್ಯದಲ್ಲಿ ಮೂಡಿ ಬರ್ತಿರುವ ಒನ್ ಅಂಡ್ ಆ ಹಾಫ್ ಚಿತ್ರದ ಹ್ಯಾಂಡಲ್ ವಿತ್ ಕೇರ್ ಎಂಬ ಸಾಂಗ್ ರಿಲೀಸ್ ಮಾಡಲಾಗಿದೆ. ನಾಯಕ ಹಾಗೂ ನಿರ್ದೇಶಕ ಆಗಿರುವ ಶ್ರೇಯಶ್ ಸೂರಿ ಹುಟ್ಟುಹಬ್ಬದ ವಿಶೇಷವಾಗಿ ಬಿಡುಗಡೆ ಮಾಡಲಾಗಿದೆ. ಬೆಂಗಳೂರಿನ ಖಾಸಗಿ ಮಾಲ್ ನಲ್ಲಿ ನಿನ್ನೆ ಹಾಡು ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಇಡೀ ಚಿತ್ರತಂಡ ಭಾಗಿಯಾಗಿತ್ತು.

ಇದೇ ವೇಳೆ ನಟಿ ಮಾನ್ವಿತಾ ಹರೀಶ್ ಮಾತನಾಡಿ, ಸಿನಿಮಾ ಇಂಡಸ್ಟ್ರಿಗೆ ಆಕಸ್ಮಿಕವಾಗಿ ಎಂಟ್ರಿ ಕೊಟ್ಟೆ. ಪ್ರತಿ ಸಿನಿಮಾದಿಂದ ಇಲ್ಲಿವರೆಗೂ ತುಂಬಾ ಪ್ರೀತಿ ಕೊಟ್ಟಿದ್ದೀರ. ಮೊದಲ 3 ಸಿನಿಮಾದಲ್ಲಿ 125 ದಿನದ ಬೋರ್ಡ್ ನಿಮ್ಮ ಕಡೆಯಿಂದ ಬಂದಿದೆ. ಅದೇ ರೀತಿ ಒನ್ ಅಂಡ್ ಆ ಹಾಫ್ ಸಿನಿಮಾ 125 ದಿನ ಅಲ್ಲ 150 ದಿನದ ಬೋರ್ಡ್ ಬರಲಿ. ನಿಮ್ಮ ಸಹಕಾರವಿಲ್ಲದೇ ಏನೂ ಆಗಲ್ಲ. ಈ ಚಿತ್ರ ನನಗೆ ಸ್ಪೆಷಲ್. ಇವತ್ತು ಶ್ರೇಯಸ್ ಹುಟ್ಟುಹಬ್ಬ. ಅವರಿಗೆ ಒಳ್ಳೆಯದಾಗಲಿದೆ. ಅವರ ಚಿತ್ರ ನಿರ್ದೇಶನ ಮಾಡುವುದಲ್ಲದೇ, ನಟಿಸುತ್ತಿದ್ದಾರೆ. ನಿಮ್ಮ ತಂದೆ ಹೆಸರು ಸೂರಿ. ನನ್ನ ಗಾಡ್ ಫಾದರ್ ಹೆಸರು ಸೂರಿ. ಆ ಲಾಕ್ ಫ್ಯಾಕ್ಟರ್ ಕೂಡ ಈ ಚಿತ್ರದಲ್ಲಿ ವರ್ಕ್ ಆಗಲಿ ಎಂದು ತಿಳಿಸಿದರು.

ನಟ ಕಂ ನಿರ್ದೇಶಕ ಶ್ರೇಯಶ್ ಸೂರಿ ಮಾತನಾಡಿ, ಈ ಸಿನಿಮಾ ನನ್ನಿಂದ ಅಲ್ಲ. ಇಡೀ ತಂಡದ ಕೆಲಸ. ಈ ಚಿತ್ರದ ನನ್ನದಲ್ಲ. ನಮ್ಮೆಲ್ಲರದ್ದು, ರಿಲೀಸ್ ಆದ ಮೇಲೆ ನಿಮ್ಮೆಲ್ಲರದ್ದು. ಎಲ್ಲಿ ತನಕ ಕರೆದುಕೊಂಡು ಹೋಗುತ್ತೀರಾ? ಎಷ್ಟು ಮುಂದೆ ಹೋಗುತ್ತೀರಾ? ಅಷ್ಟೇ ಚೆನ್ನಾಗಿ ಬೆಳೆಯುತ್ತಾ ಬೆಳೆಯುತ್ತಾ ಒಳ್ಳೆ ಸಿನಿಮಾ ಮಾಡುತ್ತೇವೆ ಎಂದರು. ಹ್ಯಾಂಡಲ್ ವಿತ್ ಕೇರ್ ಎಂಬ ಹಾಡಿಗೆ ಎಂ.ಸಿ.ಬಿಜ್ಜು ಹಾಗೂ ಯಶಸ್ ನಾಗ್ ಸಾಹಿತ್ಯ ಬರೆದಿದ್ದು, ನಾಯಕ ಶ್ರೇಯಸ್ ಸೂರಿ, ಅನಂತ್ ಹಾಗೂ ಎಂ,ಸಿ.ಬಿಜ್ಜು ಧ್ವನಿಯಾಗಿದ್ದಾರೆ. ಕದ್ರಿ ಮಣಿಕಾಂತ್ ಟ್ಯೂನ್ ಹಾಕಿರುವ ಹಾಡಿಗೆ ಶ್ರೇಯಸ್ ಭರ್ಜರಿಯಾಗಿ ಕುಣಿದು ಕುಪ್ಪಳಿಸಿದ್ದಾರೆ.

ಒನ್ ಅಂಡ್ ಆ ಹಾಫ್ ಸಿನಿಮಾವನ್ನು ಸುಲಕ್ಷ್ಮೀ ಫಿಲಂಸ್ ನಡಿ ಆರ್.ಚರಣ್, ಬಿ.ಇಂಪನಾ ಪ್ರಸಾದ್, ಅರ್ಪಿತ್ ನಾರಾಯಣ್, ಸಂತೋಷ್ ನಾಗೇನಹಳ್ಳಿ, ಕದ್ರಿ, ಮಣಿಕಂಠ್ ನಿರ್ಮಾಣ ಮಾಡುತ್ತಿದ್ದಾರೆ. ಚಿತ್ರದಲ್ಲಿ ಮಾನ್ವಿತಾ ಹರೀಶ್ ಕಾಮತ್ ನಾಯಕಿಯಾಗಿ ಸಾಥ್ ಕೊಟ್ಟಿದ್ದು, ಸಾಧು ಕೋಕಿಲಾ, ಅವಿನಾಶ್ ಯೆಳಂದೂರ್, ಸುಚೇಂದ್ರ ಪ್ರಸಾದ್, ಸ್ಪರ್ಶ ರೇಖಾ, ಅನಂತು, ಸುಂದರಶ್ರೀ, ಕಾಮಿಡಿ ಕಿಲಾಡಿ ಖ್ಯಾತಿಯ ಹಿತೇಶ್ ಕುಮಾರ್, ಅಮಾನ್, ನಿಕಿತಾ ದೋರ್ತೊಡಿ, ಲಲಿತಾ ನಾಯಕ್, ರಾಖಿ ಭೂತಪ್ಪ ತಾರಾಬಳಗದಲ್ಲಿದ್ದಾರೆ. ದೇವೇಂದ್ರ ಛಾಯಾಗ್ರಹಣ, ಮುಕೇಶ್ ಜೆ ಸಂಕಲನವಿದೆ. ಮಣಿಕಾಂತ್ ಕದ್ರಿ, ಸಂಗೀತವಿರುವ ಹಾಡುಗಳಿಗೆ ಭಜರಂಗಿ ಮೋಹನ್ ನೃತ್ಯ ಸಂಯೋಜಿಸಿದ್ದಾರೆ. ರೋಮ್ಯಾಂಟಿಕ್ ಕಾಮಿಡಿ ಕಥಾಹಂದರದ ಹೊಂದಿರುವ ಒನ್ ಅಂಡ್ ಆ ಹಾಫ್ ಸಿನಿಮಾ ಶೀಘ್ರದಲ್ಲೇ ಥಿಯೇಟರ್ ಗೆ ಹಾಜರಿ ಹಾಕಲಿದೆ.

# 'ರಾಚಯ್ಯ'ನಾದ ಭೀಮ



'ಸಾರಥಿ' ಚಿತ್ರವನ್ನು ನಿರ್ಮಿಸಿದ್ದ ಕೆ.ವಿ.ಸತ್ಯಪ್ರಕಾಶ್ ಅವರು ಹನ್ನೆರಡು ವರ್ಷಗಳ ನಂತರ ಸಾರಥಿ ಫಿಲಂಸ್ ಮೂಲಕ ನೂತನ ಚಿತ್ರ ನಿರ್ಮಾಣಕ್ಕೆ ಮುಂದಾಗಿದ್ದಾರೆ. ನಿರ್ಮಾಣಕ್ಕೆ ಸತ್ಯಪ್ರಕಾಶ್ ಅವರ ಪುತ್ರ ಸೂರಜ್ ಗೌಡ ಅವರು ಸಾಥ್ ನೀಡುತ್ತಿದ್ದಾರೆ. ಜಂಟಲ್ ಮ್ಯಾನ್, ಗುರುಶಿಷ್ಯರು ಚಿತ್ರಗಳ ನಿರ್ದೇಶಕ ಹಾಗೂ ಕಾಟೇರ ಚಿತ್ರದ ಲೇಖಕ ಜಡೇಶ ಕೆ ಹಂಪಿ ಈ ಸಿನಿಮಾವನ್ನು ನಿರ್ದೇಶನ ಮಾಡುತ್ತಿದ್ದು, ದುನಿಯಾ ವಿಜಯ್ ನಾಯಕ. ಈ ಚಿತ್ರಕ್ಕೆ ಈಗ ಟೈಟಲ್ ಫಿಕ್ಸ್ ಆಗಿದೆ. ರಾಚಯ್ಯ ಅನ್ನೋ ಕ್ಯಾಚಿ ಶೀರ್ಷಿಕೆಯನ್ನು ಚಿತ್ರಕ್ಕೆ ಇಡಲಾಗಿದೆ.

ರಚಿತಾರಾಮ್ ಈ ಚಿತ್ರದ ನಾಯಕಿಯಾಗಿ ನಟಿಸುತ್ತಿದ್ದು, ದುನಿಯಾ ವಿಜಯ್ ಪುತ್ರಿ, ರಿತನ್ಯ (ಮೋನಿಕಾ) ಈ ಚಿತ್ರದ ಮೂಲಕ ಚಿತ್ರರಂಗ ಪ್ರವೇಶಿಸುತ್ತಿದ್ದಾರೆ. ಡೇರ್ ಡೆವಿಲ್ ಮುಸ್ತಫಾ ಖ್ಯಾತಿಯ ಶಿಶಿರ್ ಸಹ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.

ಇದು ನಾನು ಕಂಡ, ಕೇಳಿದ ಹಾಗೂ ನೋಡಿದ ನೈಜ ಕಥೆ ಎಂದು ಮಾತನಾಡಿದ ನಿರ್ದೇಶಕ ಜಡೇಶ ಕೆ ಹಂಪಿ, ಇದು ಆಳಿದವರ ಕಥೆಯಲ್ಲ. ಅಳಿದು ಉಳಿದವರ ಕಥೆ. ಕೋಲಾರ ಭಾಗದಲ್ಲಿ ನಡೆಯುವ ಕಥೆಯಾಗುವುದರಿಂದ ಸಂಭಾಷಣೆ ಕೋಲಾರದ ಭಾಷೆಯಲ್ಲೇ ಇರುತ್ತದೆ. ಮಾಸ್ತಿ ಅವರು ಸಂಭಾಷಣೆ ಬರೆಯುತ್ತಿದ್ದಾರೆ. ಅವರು ಕೋಲಾರದವರೆ ಆಗಿರುವುದು ವಿಶೇಷ. ಇದು 90 ರ ಕಾಲಘಟ್ಟದಲ್ಲಿ ನಡೆಯುವ ಕಥೆ. ಶಿವರಾಮ ಕಾರಂತರ ''ಚೋಮನ ದುಡಿ''ಯ ಚೋಮನ ಪಾತ್ರ ಈ ಚಿತ್ರಕ್ಕೆ ಸ್ಪೂರ್ತಿ. ಹಾಗಂತ ''ಚೋಮನ ದುಡಿ'' ಚಿತ್ರಕ್ಕೂ ಈ ಚಿತ್ರಕ್ಕೂ ಸಂಬಂಧವಿಲ್ಲ. ಇನ್ನು ಈ ಚಿತ್ರವನ್ನು ಜಗದೀಶ್ ಅವರು ನಿರ್ಮಿಸಬೇಕಿತ್ತು. ಕಾರಣಾಂತರದಿಂದ ಆಗಲಿಲ್ಲ ಎಂದಿದ್ದಾರೆ ದುನಿಯಾ ವಿಜಯ್.

ಈ ಚಿತ್ರದ ವಿಶೇಷವೆಂದರೆ ತಂದೆ - ಮಗ ನಿರ್ಮಿಸುತ್ತಿದ್ದಾರೆ. ತಂದೆ -ಮಗಳು ಅಭಿನಯಿಸುತ್ತಿದ್ದೇವೆ. ನನ್ನ ಮಗಳು ರಿತನ್ಯ, ಮುಂಬೈನ ಅನುಪಮ್ ಖೇರ್ ಇನ್ಸ್ಟಿಟ್ಯೂಟ್ ನಲ್ಲಿ ಅಭಿನಯದ ಕುರಿತು ಕಲಿತು ಬಂದಿದ್ದಾಳೆ. ಈ ಚಿತ್ರದಲ್ಲೂ ನನ್ನ ಮಗಳ ಪಾತ್ರದಲ್ಲೇ ಅಭಿನಯಿಸುತ್ತಿದ್ದಾಳೆ. ನಾನು ಚಿತ್ರರಂಗಕ್ಕೆ ಬಂದು ಮೂವತ್ತು ವರ್ಷ ಹಾಗೂ ನಾಯಕನಾಗಿ ಹದಿನೆಂಟು ವರ್ಷಗಳಾಗಿದೆ. ಈ ಸಂದರ್ಭದಲ್ಲಿ ನನ್ನ ಮಗಳು ಚಿತ್ರರಂಗಕ್ಕೆ ಪ್ರವೇಶಿಸುತ್ತಿದ್ದಾಳೆ. ಒಬ್ಬ ತಂದೆ ಮಗಳಿಗಾಗಿ ಏನೆಲ್ಲಾ ಕೊಡಬಹುದು? ಸ್ಕ್ರಿಪ್ಟ್ ನಲ್ಲೂ ಅರ್ಧಭಾಗ ಕೊಡಬಹುದು ಎಂದು ತಿಳಿಸಿದ ದುನಿಯಾ ವಿಜಯ್, ನಿರ್ದೇಶಕ ಜಡೇಶ್ ಅವರು ಒಳ್ಳೆಯ ಕಥೆ ಮಾಡಿಕೊಂಡಿದ್ದಾರೆ. ನನ್ನ ಪಾತ್ರ ಕೂಡ ಚೆನ್ನಾಗಿದೆ. ಜಡೇಶ್ ಕನ್ನಡ ಚಿತ್ರರಂಗದ ಅತ್ಯುತ್ತಮ ನಿರ್ದೇಶಕರಾಗುವುದು ಖಂಡಿತ. ಬಹಳ ವರ್ಷಗಳ ನಂತರ ಸತ್ಯಪ್ರಕಾಶ್ ಅವರು ನಿರ್ಮಾಣಕ್ಕೆ ಮರಳಿದ್ದಾರೆ. ಅವರಿಗೆ ಹಾಗೂ ಇಡೀ ತಂಡಕ್ಕೆ ಒಳ್ಳೆಯದಾಗಲಿ ಎಂದಿದ್ದಾರೆ ನಾಯಕ ದುನಿಯಾ ವಿಜಯ್.



# ಪಾಕ್ ರಾಷ್ಟ್ರೀಯ ತಂಡಕ್ಕಿಂತ ಲೋಕಲ್ ತಂಡವೇ ಮೇಲು ಎಂದ ಮಾಜಿ ಕ್ರಿಕೆಟಿಗ

ಪ್ರಸ್ತುತ ಪಾಕಿಸ್ತಾನ ಕ್ರಿಕೆಟ್ ತಂಡ ಸೋಲುಗಳ ಸರಮಾಲೆಯನ್ನೇ ಹೊತ್ತು ನಿಂತಿದೆ. ದಿಗ್ಗಜ ಆಟಗಾರರು ತಂಡದಲ್ಲಿದ್ದರೂ ತಂಡದ ಪ್ರದರ್ಶನ ಮಾತ್ರ ಸುಧಾರಿಸುತ್ತಿಲ್ಲ. ಈ ಮೊದಲು ಏಕದಿನ ಮತ್ತು ಟಿ20 ವಿಶ್ವಕಪ್‌ನಲ್ಲಿ ಕಳಪೆ ಪ್ರದರ್ಶನ ನೀಡಿದ್ದ ಪಾಕ್ ತಂಡ ಆ ಬಳಿಕ ದ್ವಿಪಕ್ಷೀಯ ಸರಣಿಗಳಲ್ಲೂ ಕಳಪೆ ಪ್ರದರ್ಶನ ತೋರುತ್ತಿದೆ. ತಂಡದ ಈ ಕಳಪೆ ಪ್ರದರ್ಶನದಿಂದ ಪಾಕಿಸ್ತಾನ ಕ್ರಿಕೆಟ್ ತಂಡದ ಅಭಿಮಾನಿಗಳು ಕೋಪಗೊಂಡಿದ್ದಲ್ಲದೆ, ತಂಡವು ಮಾಜಿ ಕ್ರಿಕೆಟಿಗರ ಆಕ್ರೋಶಕ್ಕೂ ಗುರಿಯಾಗಿದೆ. ಈ ನಡುವೆ ಪಾಕಿಸ್ತಾನದ ಮಾಜಿ ಕ್ರಿಕೆಟಿಗರೊಬ್ಬರು 'ಪಾಕಿಸ್ತಾನದ ರಾಷ್ಟ್ರೀಯ ತಂಡಕ್ಕಿಂತ ಸ್ಥಳೀಯ ತಂಡವೇ ಉತ್ತಮ' ಎಂದು ಹೇಳಿಕೆ ನೀಡಿದ್ದು ಸಂಚಲನ ಮೂಡಿಸಿದ್ದಾರೆ.

**ಬಾಂಗ್ಲಾ ವಿರುದ್ಧ ಟೆಸ್ಟ್ ಸರಣಿ ಸೋಲು:** ಇತ್ತೀಚೆಗಷ್ಟೇ ಪಾಕಿಸ್ತಾನ ತಂಡ ತನ್ನ ಟೆಸ್ಟ್ ವೃತ್ತಿಜೀವನದ ಇತಿಹಾಸದಲ್ಲಿ ಮೊದಲ ಬಾರಿಗೆ ಬಾಂಗ್ಲಾದೇಶ ವಿರುದ್ಧ ಸೋತಿತ್ತು. ಮೊದಲ ಟೆಸ್ಟ್ ಪಂದ್ಯದಲ್ಲಿ 10 ವಿಕೆಟ್‌ಗಳಿಂದ ಪಾಕಿಸ್ತಾನವನ್ನು ಸೋಲಿಸಿದ್ದ ಬಾಂಗ್ಲಾದೇಶ ತಂಡ ಟೆಸ್ಟ್ ಕ್ರಿಕೆಟ್‌ನಲ್ಲಿ ಮೊದಲ ಬಾರಿಗೆ ಪಾಕಿಸ್ತಾನದ ವಿರುದ್ಧ ಗೆದ್ದಿತು. ಆ ಬಳಿಕ ನಡೆದ ಎರಡನೇ ಟೆಸ್ಟ್ ಪಂದ್ಯದಲ್ಲೂ ಬಾಂಗ್ಲಾದೇಶ ಅದ್ಭುತ ಪ್ರದರ್ಶನ ನೀಡಿ 6 ವಿಕೆಟ್‌ಗಳಿಂದ ಗೆದ್ದು ಇತಿಹಾಸ ನಿರ್ಮಿಸಿತ್ತು. ಅಲ್ಲದೆ ಪಾಕ್ ತಂಡವನ್ನು ಅವರ ತವರು ನೆಲದಲ್ಲಿಯೇ ಕ್ಲೀನ್ ಸ್ವೀಪ್ ಮಾಡಿತ್ತು. ಪಾಕ್ ತಂಡದ ಈ ಸೋಲು ಅಭಿಮಾನಿಗಳು ಹಾಗೂ ಮಾಜಿ ಆಟಗಾರರನ್ನು ಕೋಪಗೊಳ್ಳುವಂತೆ ಮಾಡಿದೆ.



**ತೀವ್ರ ವಾಗ್ದಾಳಿ ನಡೆಸಿದ ಕನೇರಿಯಾ:** ಬಾಂಗ್ಲಾದೇಶ ವಿರುದ್ಧದ ಟೆಸ್ಟ್ ಸರಣಿಯ ಸೋಲಿನ ನಂತರ ಪಾಕಿಸ್ತಾನ ಕ್ರಿಕೆಟ್ ಮಂಡಳಿ ಮತ್ತು ಪಾಕಿಸ್ತಾನ ತಂಡದ ಮೇಲೆ ಪಾಕಿಸ್ತಾನದ ಮಾಜಿ ಲೆಗ್ ಸ್ಪಿನ್ನರ್ ಡ್ಯಾನಿಶ್ ಕನೇರಿಯಾ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಐಎಎನ್‌ಎಸ್‌ಗೆ ನೀಡಿದ ಸಂದರ್ಶನದಲ್ಲಿ ಡ್ಯಾನಿಶ್ ಕನೇರಿಯಾ, 'ಪಾಕಿಸ್ತಾನ ರಾಷ್ಟ್ರೀಯ ಕ್ರಿಕೆಟ್ ತಂಡದ ಗುಣಮಟ್ಟವು ತುಂಬಾ ಕೆಳಮಟ್ಟದಲ್ಲಿದೆ, ಸ್ಥಳೀಯ ತಂಡವೇ ಅವರಿಗಿಂತ ಉತ್ತಮವಾಗಿದೆ. ಪಾಕಿಸ್ತಾನ ಕ್ರಿಕೆಟ್‌ನ ಈ ಸ್ಥಿತಿಗೆ ಪಾಕಿಸ್ತಾನ ಕ್ರಿಕೆಟ್ ಮಂಡಳಿಯೇ ಕಾರಣವೇ ಹೊರತು ಬೇರಾರೂ ಅಲ್ಲ. ತಂಡದ ಈ ಕಳಪೆ ಪ್ರದರ್ಶನಕ್ಕೆ ಪಿಸಿಬಿಯನ್ನು ದೂಷಿಸಬೇಕು.

ಪಾಕಿಸ್ತಾನ ಕ್ರಿಕೆಟ್ ಮಂಡಳಿಯು ಸರ್ಫರಾಜ್ ಅಹ್ಮದ್‌ನಿಂದ ನಾಯಕತ್ವವನ್ನು ಕಿತ್ತುಕೊಂಡು ಬಾಬರ್ ಆಝಂಗೆ ನೀಡುವ ಮೂಲಕ ತಪ್ಪು ನಿರ್ಧಾರ ತೆಗೆದುಕೊಂಡಿದೆ. ಸರ್ಫರಾಜ್ 2017 ರಲ್ಲಿ ಐಸಿಸಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಪಾಕಿಸ್ತಾನವನ್ನು ಗೆಲುವಿನತ್ತ ಮುನ್ನಡೆಸಿದ್ದರು ಮತ್ತು ಉತ್ತಮ ಪ್ರದರ್ಶನ ನೀಡಿದ್ದರು. ಅವರ ಉತ್ತಮ ನಾಯಕತ್ವದ ಹೊರತಾಗಿಯೂ, ಬಾಬರ್ ಆಝಂ ಅವರನ್ನು ಏಕೆ ನಾಯಕನನ್ನಾಗಿ ಮಾಡಲಾಯಿತು ಎಂಬುದಕ್ಕೆ ಯಾರೂ ಉತ್ತರಿಸಲು ಸಾಧ್ಯವಾಗಲಿಲ್ಲ. ಸದ್ಯ ಪಾಕಿಸ್ತಾನ ಕ್ರಿಕೆಟ್ ತಂಡದಲ್ಲಿರುವ ಯಾವೊಬ್ಬ ಆಟಗಾರನೂ ನಾಯಕನಾಗಲು ಫಿಟ್ ಆಗಿಲ್ಲ ಎಂದು ಡ್ಯಾನಿಶ್ ಕನೇರಿಯಾ ಸಂದರ್ಶನದಲ್ಲಿ ಹೇಳಿದ್ದಾರೆ.




**ಭಾರತೀಯ ಜನತಾ ಪಾರ್ಟಿಯ ಎಲ್ಲಾ ವಿಧಾನಸಭೆ, ವಿಧಾನ ಪರಿಷತ್ ಶಾಸಕರು ಹಾಗೂ ಸಂಸದ ರಿಂದ ವಿಧಾನಸೌಧದ ಆವರಣದಲ್ಲಿರುವ ಮಹಾತ್ಮ ಗಾಂಧಿ ಪ್ರತಿಮೆ ಬಳಿ ಮುಖ್ಯಮಂತ್ರಿಗಳ ರಾಜೀನಾಮೆಗೆ ಆಗ್ರಹಿಸಿ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಂಡಿದ್ದರು. ಪ್ರತಿಪಕ್ಷ ನಾಯಕರಾದ ಶ್ರೀ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕರಾದ ಶ್ರೀ ಛಲವಾದಿ ನಾರಾಯಣಸ್ವಾಮಿ, ಮಹಾಲಕ್ಷ್ಮಿ ಲೇಔಟಿನ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಕೆ ಗೋಪಾಲಯ್ಯನವರು ಮತ್ತು ಇತರ ಶಾಸಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.**

# ಸಿಎಸ್‌ಕೆ ತಂಡಕ್ಕೆ ರವಿಚಂದ್ರನ್ ಅಶ್ವಿನ್ ರಿಎಂಟ್ರಿ?

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್ 18 ಮೆಗಾ ಹರಾಜಿಗೂ ಮುನ್ನ ಬಿಗ್ ಅಪ್‌ಡೇಟ್‌ವೊಂದು ಹೊರಬಿದ್ದಿದೆ. ರಾಜಸ್ಥಾನ್ ರಾಯಲ್ಸ್ ತಂಡದ ಆಟಗಾರ ರವಿಚಂದ್ರನ್ ಅಶ್ವಿನ್ ಮುಂಬರುವ ಸೀಸನ್‌ನಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಪರ ಕಣಕ್ಕಿಳಿಯುವ ಸಾಧ್ಯತೆಯಿದೆ ಎಂದು ವರದಿಯಾಗಿದೆ.

ಕಳೆದ ಜೂನ್‌ನಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿಯು (ಇಂಡಿಯಾ ಸಿಮೆಂಟ್ಸ್ ಗ್ರೂಪ್) ಸಿಎಸ್‌ಕೆ ಹೈ ಪರ್ಫಾರ್ಮೆನ್ಸ್ ಸೆಂಟರ್‌ನ ಜವಾಬ್ದಾರಿಯನ್ನು ರವಿಚಂದ್ರನ್ ಅಶ್ವಿನ್ ಅವರಿಗೆ ವಹಿಸಿದ್ದರು. ಅಂದರೆ ಸಿಎಸ್‌ಕೆ ತಂಡದ ಕ್ರಿಕೆಟ್ ಅಕಾಡೆಮಿ ಸೇರಿದಂತೆ ಪ್ರಮುಖ ಕೇಂದ್ರಗಳ ಜವಾಬ್ದಾರಿಯ ಹೊಣೆಯನ್ನು ಅಶ್ವಿನ್ ಅವರಿಗೆ ನೀಡಲಾಗಿದೆ.

ಚೆನ್ನೈ ಸೂಪರ್ ಕಿಂಗ್ಸ್ ಹೈ ಪರ್ಫಾರ್ಮೆನ್ಸ್ ಸೆಂಟರ್ ಅನ್ನು ಸಿಎಸ್‌ಕೆ ಆಟಗಾರರಿಗೆ ತರಬೇತಿ ನೀಡಲು ತೆರೆಯಲಾಗಿದೆ. ಈ ಕೇಂದ್ರದಲ್ಲಿ ತರಬೇತಿ ಪಡೆಯುತ್ತಿರುವ ಆಟಗಾರರಿಗೆ ಸಲಹೆ ನೀಡುವ ಮತ್ತು ಯಾವ ತರಬೇತಿ ನೀಡಬೇಕು ಎಂಬುದನ್ನು ನಿರ್ಧರಿಸುವ ಜವಾಬ್ದಾರಿಯನ್ನು ಅಶ್ವಿನ್ ಅವರಿಗೆ ನೀಡಲಾಗಿದೆ. ಹೀಗಾಗಿಯೇ ಮುಂದಿನ ಸೀಸನ್‌ನಲ್ಲಿ





ಅಶ್ವಿನ್ ಸಿಎಸ್‌ಕೆ ಪರ ಕಣಕ್ಕಿಳಿಯುವ ಸಾಧ್ಯತೆಯಿದೆ.

ಏಕೆಂದರೆ ಮುಂಬರುವ ಐಪಿಎಲ್‌ಗಾಗಿ ಮೆಗಾ ಹರಾಜು ನಡೆಯಲಿದ್ದು, ಈ ಹರಾಜಿನಲ್ಲಿ ಅಶ್ವಿನ್ ಕಾಣಿಸಿಕೊಳ್ಳುವುದು ಖಚಿತ. ಇತ್ತ ಸಿಎಸ್‌ಕೆಯ ಹೈ ಪರ್ಫಾರ್ಮೆನ್ಸ್ ಸೆಂಟರ್‌ನ ಪ್ರಮುಖ ಹುದ್ದೆಯನ್ನು ಅಶ್ವಿನ್‌ಗೆ ನೀಡಿರುವ ಕಾರಣ ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿ ಅವರನ್ನು ಹರಾಜಿನಲ್ಲಿ ಖರೀದಿಸುವುದು ಬಹುತೇಕ ಖಚಿತ ಎಂದೇ ಹೇಳಬಹುದು.

ಈ ಬಗ್ಗೆ ಮಾತನಾಡಿರುವ ಸಿಎಸ್‌ಕೆ ಸಿಇಒ ಕಾಶಿ ವಿಶ್ವನಾಥನ್, ಅಶ್ವಿನ್ ಭಾರತ ಮತ್ತು ತಮಿಳುನಾಡಿನ ಶ್ರೇಷ್ಠ ಕ್ರಿಕೆಟಿಗರಲ್ಲಿ ಒಬ್ಬರು. ಅವರ ಉಪಸ್ಥಿತಿಯು ಹೈ ಪರ್ಫಾರ್ಮೆನ್ಸ್ ಸೆಂಟರ್ ಮತ್ತು ನಮ್ಮ ಅಕಾಡೆಮಿಗಳಿಗೆ ದೊಡ್ಡ ಉತ್ತೇಜನ ನೀಡಲಿದೆ. ಸೂಪರ್ ಕಿಂಗ್ಸ್ ವೆಂಚರ್ಸ್ ಮತ್ತು ನಮ್ಮ ಹೈ-ಪರ್ಫಾರ್ಮೆನ್ಸ್ ಸೆಂಟರ್‌ನಲ್ಲಿ ಅವರು ದೊಡ್ಡ ಪಾತ್ರವನ್ನು ವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಇತ್ತ ಸಿಎಸ್‌ಕೆ ತಂಡದ ಹೈ ಪರ್ಫಾರ್ಮೆನ್ಸ್ ಸೆಂಟರ್‌ನ ಉನ್ನತ ಹುದ್ದೆಯಲ್ಲಿ ಅಶ್ವಿನ್ ಕಾಣಿಸಿಕೊಳ್ಳುತ್ತಿರುವುದರಿಂದ, ಈ ಬಾರಿಯ ಮೆಗಾ ಹರಾಜಿನಲ್ಲಿ ಸಿಎಸ್‌ಕೆ ಫ್ರಾಂಚೈಸಿಯೇ ಅವರನ್ನು ಖರೀದಿಸಲಿದೆ ಎಂದೇ ಹೇಳಬಹುದು. ಹೀಗಾಗಿ ಐಪಿಎಲ್ 2025 ರಲ್ಲಿ ರವಿಚಂದ್ರನ್ ಅಶ್ವಿನ್ ಚೆನ್ನೈ ಸೂಪರ್ ಕಿಂಗ್ಸ್ ಪರ ಕಾಣಿಸಿಕೊಂಡರೂ ಅಚ್ಚರಿಪಡಬೇಕಿಲ್ಲ.

## ಎಫ್‌ಐ ಇಂಡಿಯಾ ಮತ್ತು ಪ್ರೊಪ್ಯಾಕ್ ಇಂಡಿಯಾ 2024

# 25ರಿಂದ 27ರವರಗೆ ಅಂತರಾಷ್ಟ್ರೀಯ ಪ್ರದರ್ಶನ

**ಪೀಣ್ಯ ದಾಸರಹಳ್ಳಿ:** ಭಾರತದಲ್ಲಿ ಆಹಾರ ಉದ್ಯಮವು ಗಮನಾರ್ಹ ಬೆಳವಣಿಗೆಯನ್ನು ಕಾಣುತ್ತಿದೆ, ರಫ್ತು ಸುಮಾರು ಆರು ಪಟ್ಟು ಹೆಚ್ಚಾಗಿದೆ. ರಾಗಿ ಮತ್ತು ಹಾಲಿನ ಅತಿದೊಡ್ಡ ಉತ್ಪಾದಕ ದೇಶವಾಗಿದೆ ಎಂದು ಬೆಂಗಳೂರು ಚಾಪ್ಟರ್ ಎ ಎಫ್ ಎಸ್ಟಿ ಐ ಅಧ್ಯಕ್ಷ ಡಾ. ಸುರೇಶ, ಹೇಳಿದರು.

ಎಫ್‌ಐ ಇಂಡಿಯಾದ 18 ನೇ ಆವೃತ್ತಿ ಮತ್ತು ಪ್ರೊಪ್ಯಾಕ್ ಇಂಡಿಯಾ ರ 6 ನೇ ಆವೃತ್ತಿ, ಎರಡೂ ಸಂಸ್ಥೆಗಳು ಬೆಂಗಳೂರು ಅಂತರರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ಆಹಾರ, ಆರೋಗ್ಯ, ಪ್ಯಾಕೇಜಿಂಗ್, 340 ಕ್ಕೂ ಹೆಚ್ಚು ಪ್ರದರ್ಶನಗಳನ್ನು ಅಯೋಜಿಸಲಾಗಿತ್ತು .

ಭಾರತವು 2030ರ ವೇಳೆಗೆ ಹಾಲಿನ ಉತ್ಪಾದನೆಯನ್ನು 230 ರಿಂದ 300 ಮಿಲಿಯನ್ ಮೆಟ್ರಿಕ್ ಟನ್ ಗಳಿಗೆ ಹೆಚ್ಚಿಸುವ ಗುರಿಯನ್ನು ಹೊಂದಿದೆ. ಹೆಚ್ಚುವರಿಯಾಗಿ, ಧಾನ್ಯ ಉತ್ಪಾದನೆಯು 330 ಮಿಲಿಯನ್ ಮೆಟ್ರಿಕ್ ಟನ್ಗಳನ್ನು ಮೀರಿದೆ ಮತ್ತು ದೇಶವು ಎರಡನೇ ಅತಿದೊಡ್ಡ ಮಾಂಸ ಉತ್ಪಾದಕವಾಗಿದ್ದು, ರಫ್ತುಗಳನ್ನು ವಿಸ್ತರಿಸುವುದರ



ಮೇಲೆ ಒತ್ತು ನೀಡುತ್ತಿದೆ'' ಎಂದರು.

ಪ್ಯಾಕೇಜಿಂಗ್ ಉದ್ಯಮವು ಒಂದು ದಶಕದ ಹಿಂದೆ ಹೋಲಿಸಿದರೆ ಸುಮಾರು ಆರು ಪಟ್ಟು ಬೆಳೆಯುತ್ತಿದೆ,

ಬೆಂಗಳೂರು ಆಹಾರ ಉದ್ಯಮದಲ್ಲಿ ಆರ್ ಅಂಡ್ ಡಿ ಕೇಂದ್ರವಾಗಿ ತನ್ನ ಸ್ಥಾನವನ್ನು ಬಲಪಡಿಸಿಕೊಂಡಿದ್ದು ಉದ್ಯಮದ ಭವಿಷ್ಯವನ್ನು ರೂಪಿಸುವಲ್ಲಿ ಪದಾರ್ಥಗಳು ಮತ್ತು ಪ್ಯಾಕೇಜಿಂಗ್ ಎರಡರ ನಿರ್ಣಾಯಕ ಪಾತ್ರ ವಹಿಸಲಿದೆ ಎಂದರು.

ವಿಶ್ವ ಪ್ಯಾಕೇಜಿಂಗ್ ಸಂಸ್ಥೆಯ ಜಾಗತಿಕ ರಾಯಭಾರಿ ಚಕ್ರವರ್ತಿ ಎವಿಪಿಎಸ್ ಮಾತನಾಡಿ ''ಭಾರತದ ಆರೋಹಣ ಆರ್ಥಿಕತೆಯು ತನ್ನ ಆಹಾರ ಮತ್ತು ಕೃಷಿ ಕ್ಷೇತ್ರದಿಂದ ಗಮನಾರ್ಹವಾದ ಉತ್ತೇಜನವನ್ನು ಪಡೆಯಲು ಸಿದ್ಧವಾಗಿದೆ, ಇದು ಪ್ರಮುಖ ಕೊಡುಗೆಯಾಗಿ ಹೊರಹೊಮ್ಮಲು ಯೋಜಿಸಲಾಗಿದೆ ಎಂದರು.

ಈ ಸಂಧರ್ಭದಲ್ಲಿ ನಿಲೇಶ್ ಲೆಲೆ, ಅಧ್ಯಕ್ಷರು, ಸಣ್ಣ ಮತ್ತು ಮಧ್ಯಮ ವ್ಯವಹಾರಗಳ ಪ್ರಗತಿಗಾಗಿ ಚೇಂಬರ್ ಪ್ರಬೋಧ್ ಹಲ್ಡೆ, ಚೇಂಬರ್ ಫಾರ್ ಅಡ್ವಾನ್ಸ್ಮೆಂಟ್ ಆಫ್ ಸ್ಮಾಲ್ ಅಂಡ್ ಮೀಡಿಯಂ ಬ್ಯುಸಿನೆಸ್ ಪ್ರಸಾದ್ ಬಾಲನ್ ಅಯ್ಯರ್, ಸಾಗರ್ ಸಿಂಗ್ ಮತ್ತಿತರರು ಭಾಗವಹಿಸಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com